ಸಂಪುಟ: 06 ಸಂಚಿಕೆ: 85 ಪುಟಗಳು: 08 ಸೋಮವಾರ 08 ಜೂನ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಯಾರು ಏನೇನು ಮಾಡ್ತಾ ಇದ್ದಾರೆ, ಹೇಗೆ, ಯಾಕೆ ಇತ್ಯಾದಿ ಅನವಶ್ಯಕ ವಿವರಗಳಿಂದ ದೂರ ಇದ್ದಷ್ಟೂ ಒತ್ತಡ ಕಮ್ಮಿಯಾಗಿ ಸುಖ ಹೆಚ್ಚುತ್ತದೆ !

## ತೀವ್ರಗೊಂಡ ಸಚಿವಾಕಾಂಕ್ಷಿಗಳ ಲಾಬಿ

• ಉದಯವಾಹಿನಿ, ಬೆಂಗಳೂರು

ಸಿಎಂ ಡಿಕೆ ಶಿವಕುಮಾರ್ ಸಂಪುಟದಲ್ಲಿ ಖಾತೆ ಗುದ್ದಾಟ ಜೋರಾಗಿದೆ. ಅದರಲ್ಲೂ ಬೆಂಬಲಿಗರ ಹೈಡ್ರಾಮಾಗಳು ಒಂದಾ ಎರಡಾ. ಸಚಿವಾಕಾಂಕ್ಷಿಗಳ ಲಾಬಿ, ಒತ್ತಡ ತಂತ್ರಗಳು ತೀವ್ರಗೊಂಡಿವೆ. ತಮ್ಮ ನಾಯಕರ ಪರ ಜಿಲ್ಲೆ ಜಿಲ್ಲೆಯಲ್ಲೂ ಬೆಂಬಲಿಗರು ಆಕ್ರೋಶದ ಜ್ವಾಲೆ ಹೊರ ಹಾಕುತ್ತಿದ್ದಾರೆ. ಬೆಂಗಳೂರಿನಿಂದ ಹಿಡಿದು ಬಾಗಲಕೋಟೆ, ಗದಗದಿಂದ ಹಿಡಿದು ಕೊಪ್ಪಳದವರೆಗೆ ಈಗ ಕಾಂಗ್ರೆಸ್ ಪಾಳಯದಲ್ಲಿ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಸಿಎಂ ಡಿ.ಕೆ.ಶಿವಕುಮಾರ್ ಸಂಪುಟದಲ್ಲಿ ಖಾತೆ ಹಂಚಿಕೆ ಬಳಿಕ ಅಸಮಾಧಾನ ಸ್ಫೋಟಗೊಂಡಿತ್ತು. ಒಂದೆಡೆ ಸಚಿವ ರಾಮಲಿಂಗಾರೆಡ್ಡಿ, ಮುನಿಯಪ್ಪ ಖಾತೆ ಕ್ಯಾತೆಯ ಮಧ್ಯೆ ಸಿಎಂ ಡಿಕೆ ಶಿವಕುಮಾರ್ ಹಾಗೂ ಸಚಿವ ಸತೀಶ್ ಜಾರಕಿಹೊಳಿ ಗುಪ್ತ್ ಮೀಟಿಂಗ್ ಮಾಡಿದ್ದಾರೆ. ಈ ವೇಳೆ ಇಬ್ಬರನ್ನ ವಿಶ್ವಾಸಕ್ಕೆ ತೆಗೆದುಕೊಳ್ಳುವ ಸಲಹೆ ನೀಡಿದ್ದರು. ಅದರಂತೆ ಈಗ ಇಬ್ಬರು ಸಚಿವರು ಕೂಲ್ ಆಗಿದ್ದಾರೆ. ಆದರೆ ಮೊದಲ ಪಟ್ಟಿಯಲ್ಲಿ ಸಚಿವ ಸ್ಥಾನ ಸಿಗದ ಆಕಾಂಕ್ಷಿಗಳ ಆಕ್ರೋಶದ ಕಟ್ಟೆ ಹೊಡೆದಿದೆ.

## ಮತ್ತೊಂದು ಸ್ವರೂಪ ಪಡೆದ ಜಮೀರ್ ರದ್ದು ಎನ್ನಲಾದ ಆಡಿಯೋ ಪ್ರಕರಣ

• ಉದಯವಾಹಿನಿ, ಬೆಂಗಳೂರು

ಜಮೀರ್ ಅಹಮ್ಮದ್ ಖಾನ್ ಅವರದ್ದು ಎನ್ನಲಾದ ಆಡಿಯೋ ಕಾಂಗ್ರೆಸ್‌ನಲ್ಲಿ ಸಂಚಲನ ಮೂಡಿಸಿದ್ದು, ಈ ಸಂಬಂಧ ಇದೀಗ ದಾವಣಗೆರೆ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಪ್ರಕರಣದ ಗಂಭೀರತೆ ಅರಿತ ಪೊಲೀಸರು, ಕಾಂಗ್ರೆಸ್‌ನಿಂದ ಉಚ್ಚಾಟನೆಗೊಂಡಿರುವ ಮೊಹಮ್ಮದ್ ಸಿರಾಜ್ ಅವರು ನೀಡಿದ ದೂರಿನ ಮೇರೆಗೆ 2023ರ ಅನ್ವಯ 336(2), 336(4), 318(2), 340(2), 351(2) ಐಟಿ ಆಕ್ಟ್ 2000 ಅನ್ವಯ 66, 66(ಅ), 66(ಆ) ಅನ್ವಯ ಎಫ್‌ಐಆರ್ ದಾಖಲಾಗಿದ್ದು, ದೂರುದಾರ ಮೊಹಮ್ಮದ್ ಸಿರಾಜ್‌ಗೆ ಸಿಇಎನ್ ಪೊಲೀಸರು ನೋಟಿಸ್ ಜಾರಿ ಮಾಡಿದ್ದಾರೆ. ಆದ್ರೆ, ಮೊಹಮ್ಮದ್ ಸಿರಾಜ್, ಇದ್ದಕ್ಕಿದ್ದಂತೆ ಬೆಂಗಳೂರಿನಲ್ಲಿ ಠಿಕಾಣಿ ಹೂಡಿದ್ದಾರೆ. ಮೊಹಮ್ಮದ್ ಸಿರಾಜ್ ನೀಡಿದ ದೂರಿನ ಮೇರೆಗೆ ದಾವಣಗೆರೆ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ಇದೀಗ ಪೊಲೀಸರು ಆಡಿಯೋ ಮೂಲ ಪತ್ತೆಗೆ ಮುಂದಾಗಿದ್ದಾರೆ. ಇದಕ್ಕೆ ಪೂರಕವೆಂತೆ ಮೊಲದ ಹಂತದ ತನಿಖೆಗೆ ದೂರುದಾರ ಮೊಹಮ್ಮದ್ ಸಿರಾಜ್ ಅವರನ್ನು ವಿಚಾರಣೆ ನಡೆಸಲು ಪೊಲೀಸ್ ನೋಟಿಸ್ ಜಾರಿ ಮಾಡಿದ್ದಾರೆ. ರಾಜ್ಯದ ಕೆಲವು ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವ ನನ್ನ ಕುರಿತ ಆಡಿಯೋ ನಕಲಿ, ಎಐ ತಂತ್ರಜ್ಞಾನ ಬಳಸಿ ಮಾಡಲಾಗಿದೆ ಎಂದು ಜಮೀರ್ ಅಹ್ಮದ್ ಖಾನ್ ಈಗಾಗಲೇ ಸ್ಪಷ್ಟನೆ ನೀಡಿದ್ದಾರೆ. ಇದೊಂದು ರಾಜಕೀಯ ಷಡ್ಯಂತ್ರ. ನಕಲಿ ಆಡಿಯೋ ಮಾಡಿ ವೈರಲ್ ಮಾಡಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದರು.

## ಎಂಬಿಬಿಎಸ್ ವಿದ್ಯಾರ್ಥಿನಿ ಸ್ನೇಹಿತೆಯ ಸೋಗಿನಲ್ಲಿ ಒಂದು ಲಕ್ಷ ರೂ. ವಂಚನೆ!

• ಉದಯವಾಹಿನಿ,ಬೆಂಗಳೂರು

ಕಾಲೇಜು ಶುಲ್ಕ ಪಾವತಿಸುವ ಗಡುವಿನ ತುರ್ತು ಪರಿಸ್ಥಿತಿಯನ್ನು ಬಳಸಿಕೊಂಡು ವಿದ್ಯಾರ್ಥಿನಿಯೊಬ್ಬರ ಕುಟುಂಬಕ್ಕೆ ಸೈಬರ್ ವಂಚಕರು ಒಂದು ಲಕ್ಷ ರೂಪಾಯಿ ವಂಚಿಸಿರುವ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ. ವಿದೇಶದಲ್ಲಿ ಎಂಬಿಬಿಎಸ್ ಓದುತ್ತಿರುವ ಯುವತಿಯ ಕಾಲೇಜು ಫೀಸ್ ಕಟ್ಟುವ ನೆಪದಲ್ಲಿ ಈ ವಂಚನೆ ಎಸಗಲಾಗಿದೆ. ಬೆಂಗಳೂರು ನಿವಾಸಿಯೊಬ್ಬರ ಸಂಬಂಧಿಕರ ಮಗಳು ವಿದೇಶದಲ್ಲಿ ವೈದ್ಯಕೀಯ ಶಿಕ್ಷಣ ಪಡೆಯುತ್ತಿದ್ದಾರೆ. ಅವರಿಗೆ ಪರೀಕ್ಷೆಗಳು ಹತ್ತಿರ ಬರುತ್ತಿದ್ದರಿಂದ ತುರ್ತಾಗಿ ಕಾಲೇಜು ಶುಲ್ಕ ಪಾವತಿಸಬೇಕಾಗಿತ್ತು. ನಿಗದಿತ ಸಮಯಕ್ಕೆ ಹಣ ಪಾವತಿಸದಿದ್ದರೆ ಪರೀಕ್ಷೆಗೆ ಕುಳಿತುಕೊಳ್ಳಲು ಅನುಮತಿ ಸಿಗುವುದಿಲ್ಲ ಎಂದು ವಿದ್ಯಾರ್ಥಿನಿ ತನ್ನ ಕುಟುಂಬಕ್ಕೆ ತಿಳಿಸಿದ್ದರು. ಈ ಸಂದರ್ಭವನ್ನು ಸೈಬರ್ ಅಪರಾಧಿಗಳು ತಮಗೆ ಪೂರಕವಾಗಿ ಬಳಸಿಕೊಂಡಿದ್ದಾರೆ. ಹಣ ವರ್ಗಾವಣೆಯ ತುರ್ತಿನಲ್ಲಿದ್ದ ನವೀನ್ ಕುಟುಂಬವನ್ನು ದೀಪಿಕಾ ಎಂದು ಪರಿಚಯಿಸಿಕೊಂಡ ಮಹಿಳೆಯೊಬ್ಬಳು ಸಂಪರ್ಕಿಸಿದ್ದಾಳೆ. ತಾನು ವಿದ್ಯಾರ್ಥಿನಿಯ ಸ್ನೇಹಿತೆ ಎಂದು ನಂಬಿಸಿದ ಆಕೆ, ವಿದೇಶಿ ವಿನಿಮಯದ (ಫಾರೆಕ್ಸ್) ಯಾವುದೇ ಕಡಿತವಿಲ್ಲದೆ ನೇರವಾಗಿ ಹಣವನ್ನು ತಲುಪಿಸಲು ಒಂದು ಪರ್ಯಾಯ ಮಾರ್ಗವನ್ನು ಸೂಚಿಸಿದ್ದಾಳೆ.

## ಕರಾವಳಿಯಲ್ಲಿ ಅಬ್ಬರಿಸಲಿರುವ ವರುಣ, ಮೂರು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್!

• ಉದಯವಾಹಿನಿ,ಬೆಂಗಳೂರು

ರಾಜ್ಯದಲ್ಲಿ ಮುಂಗಾರು ಮಳೆ ಚುರುಕುಗೊಂಡಿದ್ದು, ಮುಂದಿನ ಕೆಲವು ದಿನಗಳ ಕಾಲ ವಿವಿಧ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ವಿಶೇಷವಾಗಿ ಕರಾವಳಿ ಕರ್ನಾಟಕ ಮತ್ತು ಉತ್ತರ ಒಳನಾಡಿನ ಹಲವು ಭಾಗಗಳಲ್ಲಿ ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಮುನ್ನೆಚ್ಚರಿಕೆ ನೀಡಲಾಗಿದೆ. ಕರಾವಳಿ ಕರ್ನಾಟಕದ ಜಿಲ್ಲೆಗಳಲ್ಲಿ ವರುಣನ ಆರ್ಭಟ ಜೋರಾಗಿರಲಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಕೆಲವು ಪ್ರದೇಶಗಳಲ್ಲಿ ಭಾರಿ ಇಂದ ಅತಿ ಭಾರಿ ಮಳೆ ಹಾಗೂ ಗುಡುಗು ಸಹಿತ ಗಾಳಿ ಬೀಸುವ ಸಾಧ್ಯತೆಯಿದೆ. ಈ ಅವಧಿಯಲ್ಲಿ ಗಂಟೆಗೆ 30 ರಿಂದ 40 ಕಿಲೋಮೀಟರ್ ವೇಗದಲ್ಲಿ ನಿರಂತರ ಬಲವಾದ ಗಾಳಿ ಬೀಸಬಹುದು. ಈ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆಯು ಈ ಮೂರು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಿದೆ.


■ ರಾಜ್ಯ ಬಿಜೆಪಿಯಲ್ಲಿ ಮತ್ತೆ ನಾಯಕತ್ವ ಚರ್ಚೆ, ■ ಕುತೂಹಲ ಮೂಡಿಸಿದ ಹೈಕಮಾಂಡ್ ನಡೆ ■ ಬಿಜೆಪಿಯಲ್ಲಿ ರಂಗೇರಿದ ಪರಿಷತ್ ಚುನಾವಣೆ ರೇಸ್:
■ ಆಕಾಂಕ್ಷಿಗಳಲ್ಲಿ ಹೆಚ್ಚಿದ ಆತಂಕ, ಯಾರಿಗೆ ಮಣೆ ಹಾಕಲಿದೆ ಹೈಕಮಾಂಡ್

**ಬಿಜೆಪಿ ಹೈಕಮಾಂಡ್ ತಂತ್ರಗಾರಿಕೆ**

ಸದಾ ಅಚ್ಚರಿಯ ನಿರ್ಧಾರಗಳಿಗೆ ಹೆಸರಾಗಿರುವ ಬಿಜೆಪಿ ಹೈಕಮಾಂಡ್, ನಿಷ್ಠಾವಂತ ಕಾರ್ಯಕರ್ತರಿಗೆ ಮಣೆ ಹಾಕಲಿದೆಯೇ ಅಥವಾ ಲೋಕಸಭೆ ಹಾಗೂ ಇತರೆ ಚುನಾವಣೆಗಳಲ್ಲಿ ಪಕ್ಷಕ್ಕಾಗಿ ಶ್ರಮಿಸಿದ ಗಣ್ಯರನ್ನು ಆಯ್ಕೆ ಮಾಡಲಿದೆಯೇ ಎಂಬುದು ಮುಂದಿನ 2-3 ದಿನಗಳಲ್ಲಿ ಅಧಿಕೃತ ಪಟ್ಟಿ ಬಿಡುಗಡೆಯಾದ ಬಳಿಕ ಸ್ಪಷ್ಟವಾಗಲಿದೆ.



# ಹೊಸ ಸಾರಥಿ ಸಂಚಲನ ಕಮಲ ಕಂಪನ



ರಾಜಕೀಯ ಬೆಳವಣಿಗೆಗಳು, ಅಂದರೆ ಡಿ.ಕೆ. ಶಿವಕುಮಾರ್ ಅವರ ಮುಖ್ಯಮಂತ್ರಿ ನೇಮಕದ ನಂತರ, ಬಿಜೆಪಿ ತನ್ನ ತಂತ್ರಗಾರಿಕೆಯನ್ನು ಮರುರೂಪಿಸಬೇಕಾದ ಅನಿವಾರ್ಯತೆಯಲ್ಲಿದೆ.

### ಸಂಘಟನಾತ್ಮಕ ಸವಾಲು

ಪಕ್ಷದ ಒಳಗಿನ ಒಗ್ಗಟ್ಟು ಕಾಪಾಡಿಕೊಳ್ಳುವುದು ಹೈಕಮಾಂಡ್‌ಗೆ ಸವಾಲಾಗಿ ಪರಿಣಮಿಸುತ್ತದೆ. ರಾಜ್ಯ ಮಟ್ಟದ ಬದಲಾವಣೆಗಳ ಕುರಿತು ದೆಹಲಿಯ ಮಟ್ಟದಲ್ಲಿ ನಿರ್ಧಾರಗಳು ವಿಳಂಬವಾದಾಗ, ಕೆಳಮಟ್ಟದ ಕಾರ್ಯಕರ್ತರಲ್ಲಿ ಸಹಜವಾಗಿ ಗೊಂದಲಗಳು ಉಂಟಾಗುತ್ತವೆ.

ವಿಶೇಷವಾಗಿ ಪಕ್ಷದ ಸಂಘಟನಾತಕ ಚುನಾವಣೆಗಳು ಮತ್ತು ವೀಕ್ಷಕರ ನೇಮಕದಂತಹ ವಿಷಯಗಳಲ್ಲಿ ಸ್ಪಷ್ಟತೆ ಇಲ್ಲದಿರುವುದು ಅಸಮಾಧಾನಕ್ಕೆ ಕಾರಣವಾಗಿತ್ತು. ಆದರೆ, ಪ್ರಸ್ತುತ ವಿಜಯೇಂದ್ರ ಅವರ ನಾಯಕತ್ವವನ್ನು ಹೈಕಮಾಂಡ್ ಬಲಪಡಿಸಿರುವುದರಿಂದ, ಕಾರ್ಯಕರ್ತರು ಸಂಘಟನಾತಕ ಕೆಲಸಗಳತ್ತ ಗಮನಹರಿಸುವಂತೆ ಸೂಚನೆ ನೀಡಲಾಗಿದೆ. ಸದ್ಯಕ್ಕೆ ಪಕ್ಷದ ವರಿಷ್ಠರು ವಿಜಯೇಂದ್ರ ಅವರ ನಾಯಕತ್ವದಲ್ಲಿ ಮುಂದಿನ ಚುನಾವಣೆಗಳು ಮತ್ತು ರಾಜಕೀಯ ಸವಾಲುಗಳನ್ನು ಎದುರಿಸಲು ನಿರ್ಧರಿಸಿದ್ದಾರೆ.



### ಬಹಿರಂಗ ಅಸಮಾಧಾನ

ಅನುಭವಿ ನಾಯಕರು ಅನೇಕರಿದ್ದರೂ, ಚುನಾವಣಾ ನಿರ್ವಹಣೆ ಮತ್ತು ಸಂಪನ್ಮೂಲ ಕ್ರೋಢೀಕರಣದಲ್ಲಿ ವಿಜಯೇಂದ್ರ ಅವರ ಹಿಡಿತವನ್ನು ಮೀರಿಸುವಂತಹ ಹೊಸ ಮುಖವನ್ನು ಕಂಡುಕೊಳ್ಳುವುದು ವರಿಷ್ಠರಿಗೆ ಸದ್ಯಕ್ಕೆ ಕ್ಲಿಷ್ಟಕರವಾಗಿದೆ. ಕೆಲ ಹಿರಿಯ ನಾಯಕರು ಪಕ್ಷದ ಕಾರ್ಯಶೈಲಿ ಬಗ್ಗೆ ಬಹಿರಂಗವಾಗಿಯೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪಕ್ಷವು ಹೆಚ್ಚು ಆಕ್ರಮಣಕಾರಿಯಾಗಿರಬೇಕು ಮತ್ತು ತಳಮಟ್ಟದ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು ಎಂಬ ಒತ್ತಡ ಹೈಕಮಾಂಡ್ ಮೇಲಿದೆ. ಬಿ.ಶ್ರೀರಾಮುಲು, ವಿ. ಸೋಮಣ್ಣ, ವಿ. ಸುನಿಲ್ ಕುಮಾರ್, ಅರವಿಂದ ಬೆಲ್ಲದ ಅವರಂತಹ ಹೆಸರುಗಳು ಪದೇ ಪದೇ ಚರ್ಚೆಗೆ ಬರುತ್ತಿವೆ. ಈ ಪೈಕಿ ಯಾರೊಬ್ಬರನ್ನೂ ಅಂತಿಮಗೊಳಿಸಲು ಸಾಧ್ಯವಾಗದಿರುವುದು ಕಾರ್ಯಕರ್ತರಲ್ಲಿ ಗೊಂದಲಕ್ಕೆ ಕಾರಣವಾಗಿದೆ.

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಬಿಜೆಪಿಯ ರಾಜ್ಯಾಧ್ಯಕ್ಷರ ಬದಲಾವಣೆ ಅಥವಾ ಹೊಸ ಆಯ್ಕೆಯ ಕುರಿತಾದ ಚರ್ಚೆಗಳು ಸಾಕಷ್ಟು ಕುತೂಹಲ ಮತ್ತು ಅಸಮಾಧಾನ ಎರಡನ್ನೂ ಹುಟ್ಟುಹಾಕಿವೆ. ಪ್ರಸ್ತುತ ಬಿ.ವೈ. ವಿಜಯೇಂದ್ರ ಅವರು ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಮುಂದುವರಿದ್ದಾರೆ. ಆದಾಗ್ಯೂ, ಪಕ್ಷದೊಳಗಿನ ಆಂತರಿಕ ಬೆಳವಣಿಗೆಗಳು ಮತ್ತು ರಾಜ್ಯ ರಾಜಕಾರಣದಲ್ಲಿ ಉಂಟಾಗಿರುವ ಬದಲಾವಣೆಗಳ ಹಿನ್ನೆಲೆಯಲ್ಲಿ, ನಾಯಕತ್ವದ ಕುರಿತಾದ ಚರ್ಚೆಗಳು ಮತ್ತೆ ಮುನ್ನೆಲೆಗೆ ಬಂದಿವೆ. ಮಾಜಿ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ ಅವರ ಬೆಂಬಲ ಮತ್ತು ಮಾರ್ಗದರ್ಶನ ವಿಜಯೇಂದ್ರ ಅವರ ಪಾಲಿಗೆ ರಕ್ಷಾಕವಚವಾಗಿದ್ದರೂ, ದೆಹಲಿಯ ವರಿಷ್ಠರು ಅಂತಿಮವಾಗಿ ಸಾಮಾಜಿಕ ನ್ಯಾಯ ಮತ್ತು 'ಸಂಘಟನಾ ಬಲ'ದ ನಡುವೆ ಸಮತೋಲನ ಕಂಡುಕೊಳ್ಳುವತ್ತ ಗಮನಹರಿಸಿದ್ದಾರೆ.

ಬಿಜೆಪಿ ಹೈಕಮಾಂಡ್ ಮೀನಮೇಷ ಎಣಿಸುತ್ತಿರುವುದು ಕೇವಲ ವಿಳಂಬವಲ್ಲ, ಬದಲಿಗೆ ಅಸ್ತಿತ್ವದ ಹೋರಾಟದ ಭಾಗವಾಗಿರುವ ಒಂದು ಜಾಗರೂಕತೆಯ ಹೆಜ್ಜೆಯಾಗಿದೆ. ಕಾರ್ಯಕರ್ತರ ಅಸಮಾಧಾನವನ್ನು ತಣಿಸಲು ಶೀಘ್ರವೇ ಸ್ಪಷ್ಟತೆಯೊಂದು ಅಗತ್ಯವಾಗಿದೆ ಎಂಬ ಮಾತುಗಳು ಪಕ್ಷದ ವಲಯದಲ್ಲಿ ಕೇಳಿಬರುತ್ತಿವೆ. ಕೇಂದ್ರ ಬಿಜೆಪಿ ನಾಯಕತ್ವವು ಹಲವು ರಾಜ್ಯಗಳಲ್ಲಿ ಆಂತರಿಕ ಸಂಘಟನೆಯನ್ನು ಬಲಪಡಿಸುತ್ತಿದ್ದರೂ, ಕರ್ನಾಟಕದ ವಿಷಯದಲ್ಲಿ ಹೆಚ್ಚಿನ ಮುನ್ನೆಚ್ಚರಿಕೆ ವಹಿಸುತ್ತಿದೆ. ಇದರ ಕಾರಣಗಳು ಅನೇಕ.

ರಾಜ್ಯದಲ್ಲಿ ಲಿಂಗಾಯತ, ಒಕ್ಕಲಿಗ ಮತ್ತು ಒಬಿಸಿ ಸಮುದಾಯಗಳ ನಡುವೆ ಸಮತೋಲನ ಕಾಯ್ದುಕೊಳ್ಳುವುದು ಬಿಜೆಪಿಗೆ ದೊಡ್ಡ ಸವಾಲಾಗಿದೆ. ವಿಜಯೇಂದ್ರ ಅವರ ನೇತೃತ್ವದಲ್ಲಿ ಪಕ್ಷವು ಒಂದು ವರ್ಗದ ಪ್ರಾಬಲ್ಯವನ್ನು ಹೊಂದಿದೆ ಎಂಬ ಆರೋಪವಿದ್ದು, ಇದನ್ನು ಸರಿದೂಗಿಸಲು ಬೇರೆ ಸಮುದಾಯದ ಮುಖಂಡರನ್ನು ಪರಿಗಣಿಸಬೇಕೆ ಎಂಬ ಚರ್ಚೆ ದೆಹಲಿ ಮಟ್ಟದಲ್ಲಿ ನಡೆಯುತ್ತಿದೆ. ವಿರೋಧ ಪಕ್ಷದ ನಾಯಕ ಆರ್. ಅಶೋಕ್ (ಒಕ್ಕಲಿಗ ಸಮುದಾಯ) ಮತ್ತು ರಾಜ್ಯಾಧ್ಯಕ್ಷ ವಿಜಯೇಂದ್ರ (ಲಿಂಗಾಯತ ಸಮುದಾಯ) ಅವರ ನಡುವಿನ ಸಮನ್ವಯವು ಪಕ್ಷದ ಕಾರ್ಯತಂತ್ರಕ್ಕೆ ನಿರ್ಣಾಯಕವಾಗಿದೆ. ಕಾಂಗ್ರೆಸ್‌ನಲ್ಲಿ ಡಿ.ಕೆ. ಶಿವಕುಮಾರ್ ಅವರಂತಹ ಪ್ರಬಲ ನಾಯಕರನ್ನು ಎದುರಿಸಲು ಬಿಜೆಪಿಗೆ ಒಗ್ಗಟ್ಟಿನ ನಾಯಕತ್ವದ ಅಗತ್ಯವಿದೆ.

### ಸಂಘಟನಾ ಕೌಶಲವನ್ನು ತಡೆಗಟ್ಟಲು ಬಿಜೆಪಿ ತಂತ್ರ

ರಾಜ್ಯದಲ್ಲಿ ಮುಖ್ಯಮಂತ್ರಿ ಆಗಿ ಡಿಕೆ ಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷರಾಗಿ ಬಿ.ಕೆ.ಹರಿಪ್ರಸಾದ್ ನೇಮಕವಾಗಿರುವುದು ಬಿಜೆಪಿಯ ತಂತ್ರಗಾರಿಕೆಯನ್ನು ಬದಲಾಯಿಸಿದೆ. ಡಿ.ಕೆ. ಶಿವಕುಮಾರ್ ಅವರ ರಾಜಕೀಯ ಚತುರತೆ ಮತ್ತು ಸಂಘಟನಾ ಕೌಶಲವನ್ನು ತಡೆಗಟ್ಟಲು ಬಿಜೆಪಿ ತನ್ನ ತಂತ್ರವನ್ನು ಮರುರೂಪಿಸುತ್ತಿದೆ. ಸದ್ಯದ ಪರಿಸ್ಥಿತಿಯಲ್ಲಿ, ವರಿಷ್ಠರು ತರಾತುರಿಯಲ್ಲಿ ಯಾವುದೇ ನಿರ್ಧಾರ ಕೈಗೊಳ್ಳುವ ಬದಲು, ಸ್ಥಳೀಯ ನಾಯಕರ ಅಭಿಪ್ರಾಯ ಮತ್ತು ರಾಜ್ಯದ ಸಾಮಾಜಿಕ ವಾಸ್ತವಗಳನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರ ಪ್ರಕಟಿಸುವ ಸಾಧ್ಯತೆಯಿದೆ.

### ಆಂತರಿಕ ಭಿನ್ನಾಭಿಪ್ರಾಯ

ಪಕ್ಷದ ಹಿರಿಯ ನಾಯಕರ ಒಂದು ಬಣವು ವಿಜಯೇಂದ್ರ ಅವರ ಕಾರ್ಯವೈಖರಿ ಮತ್ತು ನೇಮಕಾತಿಯ ಕುರಿತು ಅಸಮಾಧಾನ ವ್ಯಕ್ತಪಡಿಸುತ್ತಾ ಬಂದಿದೆ.
ಈ ಆಂತರಿಕ ಭಿನ್ನಮತಗಳು ಆಯ್ಕೆ ಪ್ರಕ್ರಿಯೆಯ ಸಮಯದಲ್ಲಿ ಗೊಂದಲಗಳಿಗೆ ಕಾರಣವಾಗಿದ್ದವು. ಕರ್ನಾಟಕದ ರಾಜಕೀಯದಲ್ಲಿ ವಿವಿಧ ಸಮುದಾಯಗಳ ಪ್ರಾತಿನಿಧ್ಯ ಬಹಳ ಮುಖ್ಯ. ಪಕ್ಷವು ರಾಜ್ಯದಲ್ಲಿ ಹೊಸದಾಗಿ ವಿರೋಧ ಪಕ್ಷದ ಪಾತ್ರವನ್ನು ನಿರ್ವಹಿಸಬೇಕಾದ ಸವಾಲು ಎದುರಿಸುತ್ತಿರುವಾಗ, ಜಾತಿ ಸಮೀಕರಣಗಳು ಮತ್ತು ನಾಯಕತ್ವದ ಆಯ್ಕೆ ಕುರಿತು ವರಿಷ್ಠರು ಹೆಚ್ಚು ಎಚ್ಚರಿಕೆಯ ಹೆಜ್ಜೆಗಳನ್ನು ಇಡಬೇಕಾಗುತ್ತದೆ.

### ಯಥಾಸ್ಥಿತಿ

ಕಳೆದ ಕೆಲವು ತಿಂಗಳುಗಳಿಂದ ಪಕ್ಷದೊಳಗಿನ ನಾಯಕರ ಭಿನ್ನಾಭಿಪ್ರಾಯ ಮತ್ತು ಸಂಘಟನಾತಕ ಚರ್ಚೆಗಳು ನಡೆಯುತ್ತಿದ್ದರೂ, ಬಿಜೆಪಿ ಹೈಕಮಾಂಡ್ ಸದ್ಯದ ಮಟ್ಟಿಗೆ ಬಿ.ವೈ. ವಿಜಯೇಂದ್ರ ಅವರ ನಾಯಕತ್ವದ ಮೇಲೆ ವಿಶ್ವಾಸ ವ್ಯಕ್ತಪಡಿಸಿದೆ. ಅವರ ನೇಮಕಾತಿಯ ಅವಧಿಯ ಕುರಿತಾದ ಅನಿಶ್ಚಿತತೆಗಳ ನಡುವೆಯೂ ಅವರು ಅಧ್ಯಕ್ಷ ಹುದ್ದೆಯಲ್ಲಿ ಮುಂದುವರೆಯುವ ಸಾಧ್ಯತೆ ಇದೆ.

## ರೌಡಿ ನಿಗ್ರಹ ಪಡೆ ರಚನೆ ಮಾಡಿ ಡಿಜೆ-ಐಜಿಪಿ ಎಂ.ಎ.ಸಲೀಂ ಆದೇಶ

• ಉದಯವಾಹಿನಿ, ಬೆಂಗಳೂರು

ಹೊಸದಾಗಿ ರೌಡಿ ನಿಗ್ರಹ ಪಡೆ ರಚನೆ ಮಾಡಿ ಡಿಜಿ-ಐಜಿಪಿ ಡಾ. ಎಂ.ಎ.ಸಲೀಂ ಆದೇಶ ಹೊರಡಿಸಿದ್ದಾರೆ. ಪ್ರತಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಆಯಾ ಸರ್ಕಲ್ ಇನ್ಸ್‌ಪೆಕ್ಟರ್‌ಗಳ ಉಸ್ತುವಾರಿಯಲ್ಲಿ ರೌಡಿ ನಿಗ್ರಹ ಪಡೆಗಳ ರಚನೆ ಮಾಡಿ ಆದೇಶಿಸಿದ್ದಾರೆ. ನೂತನ ಸಿಎಂ ಡಿ.ಕೆ.ಶಿವಕುಮಾರ್ ಮೊದಲ ಪತ್ರಿಕಾಗೋಷ್ಠಿಯಲ್ಲಿ ರೌಡಿಗಳನ್ನ ಹಾಗೂ ರೌಡಿ ಚಟುವಟಿಕೆಯನ್ನ ಮಟ್ಟ ಹಾಕಲು ರೌಡಿ ನಿಗ್ರಹ ದಳವನ್ನ ರಚನೆ ಮಾಡುವುದಾಗಿ ಘೋಷಣೆ ಮಾಡಿದ್ದರು. ಸಿಎಂ ಡಿ.ಕೆ.ಶಿವಕುಮಾರ್ ಸೂಚನೆಯ ಮೇರೆಗೆ ರೌಡಿ ನಿಗ್ರಹ ಪಡೆಯನ್ನ ರಚಿಸಿ ಆದೇಶಿಸಲಾಗಿದೆ. ವ್ಯಕ್ತಿಗಳ ವಿರುದ್ಧ ದಾಖಲಾಗಿರುವ ಕ್ರಿಮಿನಲ್ ಪ್ರಕರಣಗಳ ಪರಿಶೀಲನೆ ನಡೆಸಬೇಕು. ಪದೇ ಪದೇ ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾಗಿರುವುದು ಕಂಡು ಬಂದರೆ ಹೊಸ ರೌಡಿಶೀಟ್‌ಗಳನ್ನು ತೆರೆಯಬೇಕು. ಠಾಣಾ ವ್ಯಾಪ್ತಿಯ ರೌಡಿಶೀಟರ್‌ಗಳ ಮಾಹಿತಿ ಸಂಗ್ರಹವಾಗಿರಬೇಕು. ರೌಡಿಶೀಟರ್‌ಗಳ ಚಟುವಟಿಕೆಗಳು, ಚಲನವಲನಗಳ ಮೇಲೆ ಕಣ್ಣಾವಲು ಇಟ್ಟಿರಬೇಕು. ಆ್ಯಕ್ಟಿವ್ ರೌಡಿಗಳು, ಅಪರಾಧ ಚಟುವಟಿಯಲ್ಲಿ ಭಾಗಿಯಾಗುವ ಗ್ಯಾಂಗ್‌ಗಳ ಹಿನ್ನೆಲೆ, ಚಲನವಲನದ ಮೇಲೆ ನಿಗಾ ಇಟ್ಟಿರಬೇಕು. ನಿರಂತರ ಅಪರಾಧ




ಚಟುವಟಿಕೆಯಲ್ಲಿ ಭಾಗಿಯಾಗುವವರ ವಿರುದ್ಧ ಕೋಕಾ, ಗೂಂಡಾ ಕಾಯ್ದೆ, ಕೋಕಾ ಕಾಯ್ದೆ ಅಡಿಯಲ್ಲಿ ಕೇಸ್ ದಾಖಲು ಮಾಡಬೇಕು. ರೌಡಿಗಳ ವಿರುದ್ಧ ವಾರೆಂಟ್‌ಗಳು, ಬಾಂಡ್‌ಗಳು ಮತ್ತು ಇತರ ಕಾನೂನು ಪ್ರಕ್ರಿಯೆಗಳ ಪರಿಣಾಮಕಾರಿ ಜಾರಿಯನ್ನು ಖಚಿತಪಡಿಸಿಕೊಳ್ಳಬೇಕು. ಬೀಟ್ ಪೊಲೀಸರು ಮತ್ತು ಸ್ಥಳೀಯ ಗುಪ್ತಚರ ಮೂಲಗಳೊಂದಿಗೆ ನಿಕಟ ಸಂಪರ್ಕವನ್ನು ಕಾಪಾಡಿಕೊಳ್ಳಬೇಕು. ದುರ್ಬಲ ಪ್ರದೇಶಗಳಲ್ಲಿ ವಿಶೇಷ ಕಾರ್ಯಾಚರಣೆಗಳು ಮತ್ತು ಆಕಸ್ಮಿಕ ತಪಾಸಣೆಗಳನ್ನು ನಡೆಸಬೇಕು. ಕ್ರಿಮಿನಲ್ ಒಬ್ಬ ಪದೇ ಪದೇ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುತ್ತಿರುವ ವಿಚಾರ ತಿಳಿದು ಕ್ರಿಮಿನಲ್‌ಗಳ ವಿರುದ್ಧ ಕ್ರಮಕೈಗೊಳ್ಳುವಲ್ಲಿ ಅಧಿಕಾರಿಗಳು ವಿಫಲವಾದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದಾಗಿ ತಿಳಿಸಲಾಗಿದೆ.

## ರಾಜ್ಯದಲ್ಲಿ ಸರ್ಕಾರ ಇದ್ದರೂ ಕಳೆದೊಂದು ತಿಂಗಳಿನಿಂದ ಆಡಳಿತ ಸ್ತಬ್ಧ!

• ಉದಯವಾಹಿನಿ, ಬೆಂಗಳೂರು

ಅಧಿಕಾರ ಹಂಚಿಕೆಯ ಗೊಂದಲ, ಅನಂತರ ಸಂಭ್ರಮಾಚರಣೆಗಳಿಂದಾಗಿ ಸುಮಾರು ಒಂದು ತಿಂಗಳಿನಿಂದಲೂ ರಾಜ್ಯದಲ್ಲಿ ಆಡಳಿತ ನಿಶ್ಯಬ್ಧವಾಗಿದೆ. ಉಪಚುನಾವಣೆಯ ಕಾರಣಕ್ಕಾಗಿ ಕಳೆದ ಮೂರ್ನಾಲ್ಕು ತಿಂಗಳಿನಿಂದಲೂ ಸಚಿವರು ದಾವಣಗೆರೆ ದಕ್ಷಿಣ, ಬಾಗಲಕೋಟೆ ಕ್ಷೇತ್ರಗಳತ್ತ ಹೆಚ್ಚು ಗಮನಹರಿಸಿದ್ದರು. ಅನಂತರ ಪಂಚರಾಜ್ಯಗಳ ಚುನಾವಣೆಯ ಕಾರಣಕ್ಕಾಗಿ ನೆರೆಯ ತಮಿಳುನಾಡು, ಕೇರಳ ರಾಜ್ಯಗಳಲ್ಲಿ ಕೆಲ ಸಚಿವರು ಪ್ರವಾಸದಲ್ಲಿದ್ದರು. ಅದಾದ ಬಳಿಕ ಅಧಿಕಾರ ಹಂಚಿಕೆಯ ಚರ್ಚೆಗಳು ತೀವ್ರಗೊಂಡವು. ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಯಾಗಿದ್ದ ಡಿ.ಕೆ. ಶಿವಕುಮಾರ್ ಅವರನ್ನು ಹೈಕಮಾಂಡ್ ದೆಹಲಿಗೆ ಆಹ್ವಾನಿಸಿತ್ತು. 3 ದಿನಗಳ ಕಾಲ ಈ ಚರ್ಚೆಯಲ್ಲೇ ಕಾಲಹರಣವಾಯಿತು. ಅನಂತರ ಶಾಸಕಾಂಗ ಸಭೆ, ಹೊಸ ನಾಯಕನ ಆಯ್ಕೆ ಎಂದು ಮತ್ತಷ್ಟು ಕಾಲಹರಣವಾಯಿತು.

ಸಂಪುಟ ರಚನೆಯ ಕಸರತ್ತು 4 ದಿನ, ಹೀಗೆ ಸತತವಾಗಿ ಸರಿ ಸುಮಾರು 15 ದಿನಗಳ ಕಾಲ ಯಾವುದೇ ಚಟುವಟಿಕೆ ಇಲ್ಲದೇ ಸರ್ಕಾರ ನಿಷ್ಕ್ರಿಯವಾಗಿತ್ತು.ಸಿದ್ದರಾಮಯ್ಯ ರಾಜೀನಾಮೆ ಅಂಗೀಕಾರಗೊಂಡು ಡಿ.ಕೆ.ಶಿವಕುಮಾರ್ ಪ್ರಮಾಣವಚನ ಸ್ವೀಕರಿಸುವವರೆಗೂ ಸಚಿವ ಸಂಪುಟವೇ ಅಸ್ತಿತ್ವದಲ್ಲಿರಲಿಲ್ಲ. ಸಂಪುಟ ರಚನೆಯಾದ ಬಳಿಕವಾದರೂ ಸರ್ಕಾರ ಚುರುಕಾಗಬಹುದು ಎಂಬ ನಿರೀಕ್ಷೆಗಳಿದ್ದವು. ಖಾತೆ ಹಂಚಿಕೆ ಮತ್ತೊಂದು ದಿನ ತಡವಾಗಿತ್ತು. 3 ದಿನಗಳ ಹಿಂದೆ ಖಾತೆ



ಹಂಚಿಕೆಯೂ ಆಗಿದೆ. ಆದರೆ ಈವರೆಗೂ ಬಹಳಷ್ಟು ಸಚಿವರು ತಮ ಇಲಾಖೆಯ ಕಾರ್ಯಭಾರ ಆರಂಭಿಸಿಲ್ಲ.ಈ ಮೊದಲಿನ ಖಾತೆಯನ್ನೇ ಪಡೆದುಕೊಂಡಿದ್ದ ಎಂ.ಬಿ.ಪಾಟೀಲ್ ಅವರಂಥವರ ನಿಗದಿತ ಕಾರ್ಯ ಚಟುವಟಿಕೆಗಳನ್ನು ಹೊರತು ಪಡಿಸಿದರೇ ಹೆಚ್ಚಿನ ಕಾರ್ಯಕ್ರಮಗಳಲ್ಲಿ ಭಾಗವಹಿಸಿಲ್ಲ.

ಬೆಂಗಳೂರು ನಗಾರಭಿವೃದ್ಧಿ ಮತ್ತು ಜಲ ಸಂಪನೂಲ ಖಾತೆಯ ಹಂಚಿಕೆ ವಿಚಾರವಾಗಿ ಏರ್ಪಟ್ಟಿದ್ದ ಗೊಂದಲ ಮೂರು ದಿನದಿಂದಲೂ ಕಸರತ್ತಿನಂತೆ ನಡೆಯುತ್ತಿದೆ.

## ಹಿಟ್ಲರ್‌ನಿಂದ ಸ್ಫೂರ್ತಿ ಪಡೆದು ಒತ್ತುವರಿ ವಿರೋಧಿ ಪಡೆಗೆ ಹೈಡ್ರಾ ಎಂದು ಹೆಸರಿಟ್ಟಿದ್ದೇವೆ ರೇವಂತ್ ರೆಡ್ಡಿ

• ಉದಯವಾಹಿನಿ, ಬೆಂಗಳೂರು

ತೆಲಂಗಾಣ ಸರ್ಕಾರದ ಒತ್ತುವರಿ ವಿರೋಧಿ ಕಾರ್ಯಪಡೆಯಾದ ಹೈಡ್ರಾ (ಹೈದರಾಬಾದ್ ವಿಪತ್ತು ಮತ್ತು ಆಸ್ತಿ ರಕ್ಷಣೆ ಸಂಸ್ಥೆ) ಹೆಸರಿನ ಹಿಂದೆ ಜರ್ಮನಿಯ ಸರ್ವಾಧಿಕಾರಿ ಅಡಾಲ್ಫ್ ಹಿಟ್ಲರ್‌ನ ಸ್ಫೂರ್ತಿಯಿದೆ ಎನ್ನುವ ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿಯವರ ವಿವಾದಾತ್ಮಕ ಹೇಳಿಕೆ ಇದೀಗ ದೇಶದಾತ್ಯಂತ ಭಾರೀ ಚರ್ಚೆಗೆ ಗ್ರಾಸವಾಗಿದೆ.

ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿರುವ ಅವರು, ಹೈಡ್ರಾ ಎಂಬ ಪದವು ಹಿಟ್ಲರ್‌ನ ನೆಚ್ಚಿನ ಪದವಾಗಿತ್ತು. ಹಿಟ್ಲರ್‌ನ ಆಪ್ತ ಪಡೆಯನ್ನು ಹೈಡ್ರಾ ಎಂದು ಕರೆಯಲಾಗುತ್ತಿತ್ತು. ಅವರು ಯಾರನ್ನು ಬೇಕಾದರೂ ಹತ್ಯೆ ಮಾಡುವ ಸಾಮರ್ಥ್ಯ ಹೊಂದಿದ್ದರು. ನಾವು ಕೂಡ ಹಿಟ್ಲರ್‌ನಿಂದಲೇ ಸ್ಫೂರ್ತಿ ಪಡೆದು ಈ ಸಂಸ್ಥೆಗೆ ಹೈಡ್ರಾ ಎಂದು ಹೆಸರಿಟ್ಟಿದ್ದೇವೆ ಎಂದಿದ್ದಾರೆ. ರೇವಂತ್ ರೆಡ್ಡಿಯವರ ಈ ಹೇಳಿಕೆಯನ್ನ ಹಲವರು ತಳ್ಳಿಹಾಕಿದ್ದು, ಹಿಟ್ಲರ್‌ನ ಆಪ್ತ ವಲಯಕ್ಕೂ ಮತ್ತು ಹೈಡ್ರಾ ಪದಕ್ಕೂ ಸಂಬಂಧವಿತ್ತು ಎಂಬುದಕ್ಕೆ ಯಾವುದೇ ಐತಿಹಾಸಿಕ ಪುರಾವೆಗಳಿಲ್ಲ. ವಾಸ್ತವವಾಗಿ ಎರಡನೇ ಜಾಗತಿಕ ಯುದ್ಧದ ಸಮಯದಲ್ಲಿ ನಾಜಿ ಜರ್ಮನಿಯ ವಿರುದ್ಧ ಬ್ರಿಟಿಷ್ ರಾಯಲ್ ಏರ್‌ಫೋರ್ಸ್ ನಡೆಸಿದ ಬಾಂಬ್ ದಾಳಿಯ ಕಾರ್ಯಾಚರಣೆಗೆ ಹೈಡ್ರಾ ಎಂದು ಹೆಸರಿಡಲಾಗಿತ್ತು ಎಂದು ತಿಳಿಸಿದ್ದಾರೆ. ಪ್ರಾದೇಶಿಕ ಅಸಮಾನತೆ, ತೆರಿಗೆ ಹಂಚಿಕೆ ಹಾಗೂ ದೇಶದ ಪ್ರಮುಖ ನಾಯಕತ್ವಗಳು ಉತ್ತರ ಭಾರತದ ಕೇಂದ್ರಿತವಾಗಿವೆ. ದಕ್ಷಿಣದ ರಾಜ್ಯಗಳ ಮೇಲೆ ಹೆಚ್ಚಿನ ತೆರಿಗೆಯ ಹೊರೆ



ಹೇರಲಾಗುತ್ತಿದೆ. ದೇಶದ ರಾಷ್ಟ್ರಪತಿಗಳು ಮತ್ತು ಪ್ರಧಾನಮಂತ್ರಿಗಳು ಉತ್ತರ ಭಾರತದವರಾಗಿದ್ದಾರೆ. ನಾವು ದೆಹಲಿಗೆ ಸಲಾಂ ಹೊಡೆಯುತ್ತಾ ಮತ್ತು ತೆರಿಗೆ ಕಟ್ಟುತ್ತಾ ಎರಡನೇ ದರ್ಜೆಯ ನಾಗರಿಕರಾಗಿ ಬದುಕಲು ಬಯಸುವುದಿಲ್ಲ ಎಂದು ರೇವಂತ್ ರೆಡ್ಡಿ ಕಿಡಿಕಾರಿದ್ದರು. ರೇವಂತ್ ರೆಡ್ಡಿಯವರ ಈ ಹೇಳಿಕೆಯನ್ನು ಖಂಡಿಸಿರುವ ಪೂನಾವಾಲ, ಕಾಂಗ್ರೆಸ್ ನಾಯಕನ ಈ ಹೇಳಿಕೆ ದೇಶವನ್ನು ಒಡೆಯುವ ಮತ್ತು ವಿಭಜನೆಗೊಳಿಸುವ ಮನಸ್ಥಿತಿ ಹೊಂದಿದೆ. ರೇವಂತ್ ರೆಡ್ಡಿ ಅವರಲ್ಲಿ ಪಾಕಿಸ್ತಾನದ ಸಂಸ್ಥಾಪಕ ಮಹಮ್ಮದ್ ಅಲಿ ಜಿನ್ನಾ ಅವರ ಪ್ರವೃತ್ತಿ ಕಾಣಿಸುತ್ತಿದೆ ಮತ್ತು ಅವರು ದೇಶವನ್ನು ಉತ್ತರ ಮತ್ತು ದಕ್ಷಿಣವೆಂದು ವಿಭಜನೆ ಮಾಡಲು ಯತ್ನಿಸುತ್ತಿದ್ದಾರೆ. ದೇಶದ ಪ್ರಸ್ತುತ ಪ್ರಧಾನಿ ಗುಜರಾತ್‌ನವರಾಗಿದ್ದಾರೆ. ದೇಶದ ಮೊದಲ ಬುಡಕಟ್ಟು ಸಮುದಾಯದ ಮಹಿಳಾ ರಾಷ್ಟ್ರಪತಿ ಒಡಿಶಾದವರಾಗಿದ್ದಾರೆ.

## ಪೆಟ್ರೋಲ್-ಡೀಸೆಲ್ ಬೆಲೆ ಹೆಚ್ಚಿಸಲು ಕೇಂದ್ರ ಸರ್ಕಾರ ಮಧ್ಯಪ್ರಾಚ್ಯ ಯುದ್ಧವನ್ನು ಕವಚದಂತೆ ಬಳಸುತ್ತಿದೆ : ಡಿಸಿಎಂ ಪರಮೇಶ್ವರ್

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಳ ಮಾಡಲು ಮಧ್ಯಪ್ರಾಚ್ಯ ಯುದ್ಧ ಪರಿಸ್ಥಿತಿಯನ್ನು ಕವಚದಂತೆ ಬಳಕೆ ಮಾಡಿಕೊಳ್ಳುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಉಪ ಮುಖ್ಯಮಂತ್ರಿಯವರು ಸಿದ್ಧಗಂಗಾ ಮಠಕ್ಕೆ ತೆರಳಿ ಇಂದು ವಿಶೇಷ ಪೂಜೆ ಸಲ್ಲಿಸಿದರು. ತ್ರಿವಿಧ ದಾಸೋಹಿ ಶ್ರೀ ಶಿವಕುಮಾರ ಶಿವಯೋಗಿಯವರ ಕರ್ತೃ ಗದ್ದುಗೆಯ ದರ್ಶನ ಪಡೆದರು.

ಬಳಿಕ ಶ್ರೀ ಸಿದ್ದಲಿಂಗ ಸ್ವಾಮೀಜಿಯವರ ಆಶೀರ್ವಾದ ಪಡೆದು ಪ್ರಸಾದ ಸ್ವೀಕರಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಡುಗೆ ಅನಿಲ, ವಾಣಿಜ್ಯ ಬಳಕೆಯ ಸಿಲಿಂಡರ್‌ಗಳ ಬೆಲೆಯನ್ನು ಗಣನೀಯವಾಗಿ ಹೆಚ್ಚಿಸಲಾಗಿದೆ. ಮಧ್ಯಪ್ರಾಚ್ಯ ಯುದ್ಧ ನಡೆಯುತ್ತಿರುವುದು ನಮೆಲರ ಅರಿವಿಗಿದೆ. ಅದರ ನೆಪದಲ್ಲಿ ಈಗ ಬೆಲೆಗಳನ್ನು ಹೆಚ್ಚಿಸಲಾಗುತ್ತಿದೆ ಎಂದು ಆಕ್ಷೇಪಿಸಿದರು. ಇದಕ್ಕೂ ಮೊದಲು ಕಚ್ಚಾತೈಲದ ಬೆಲೆ ಕಡಿಮೆ ಇದ್ದಾಗ ಅದರ ಪ್ರಯೋಜನವನ್ನು ಕೇಂದ್ರ ಸರ್ಕಾರ ಗ್ರಾಹಕರಿಗೆ ವರ್ಗಾವಣೆ ಮಾಡಿರಲಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.
ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಅನೇಕ ಭರವಸೆಗಳನ್ನು ಘೋಷಿಸಿದ್ದಾರೆ. ಅವುಗಳನ್ನು ತಮದೇ ಆದ ರೀತಿಯಲ್ಲಿ ಜಾರಿಗೆ ತರಲು ನೀಲ ನಕ್ಷೆ ಸಿದ್ಧಪಡಿಸಿಕೊಂಡಿದ್ದಾರೆ.



ಉತ್ತಮ ಆಡಳಿತ ನೀಡುವ ಸಂಕಲ್ಪ ತೊಟ್ಟಿದ್ದೇವೆ ಎಂದು ಹೇಳಿದರು. ತುಮಕೂರು ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ನೀರಾವರಿ ಸಮಸ್ಯೆಗಳಿವೆ.

### ತ್ವರಿತ ಗತಿಯಲ್ಲಿ ಅಭಿವೃದ್ಧಿ ಕಾರ್ಯಗಳು

ಮುಂದಿನ ದಿನಗಳಲ್ಲಿ ನನಗೆ ಸಿಕ್ಕಿರುವಂತಹ ಕಂದಾಯ ಇಲಾಖೆಯಲ್ಲಿ ಕೆಲಸ ಮಾಡುವಾಗ ಇವರ ಆಶೀರ್ವಾದ ಮುಖ್ಯ ಅಂತ ನಾನು ಅಂದುಕೊಂಡಿದ್ದೇನೆ. ಡಿಕೆ ಶಿವಕುಮಾರ್ ಅವರು ಸಿಎಂ ಆಗಿ ಅಧಿಕಾರ ಸ್ವೀಕಾರ ಮಾಡಿ ಇಂದಿಗೆ ನಾಲ್ಕು ದಿವಸ ಆಗಿದೆ. ಅನೇಕ ಭರವಸೆಗಳ ಮಾತುಗಳನ್ನು ಅವರದೇ ಆದಂತ ರೀತಿಯಲ್ಲಿ ಅನುಷ್ಠಾನ ಮಾಡುವುದಕ್ಕೆ ಅವರು ಈಗಾಗಲೇ ನೀಲಿ ನಕ್ಷೆಯನ್ನು ಮಾಡಿಕೊಂಡಿದ್ದಾರೆ. ಆ ಹಿನ್ನೆಲೆಯಲ್ಲಿ ರಾಜ್ಯದ ಜನತೆಗೆ ಒಳ್ಳೆಯ ಆಡಳಿತವನ್ನು ಕೊಡಬೇಕು ಅಂತ ಹೇಳಿ ಈಗಾಗಲೇ ಹೇಳಿಕೆಗಳನ್ನು ಕೊಟ್ಟಿದ್ದಾರೆ. ಅವರ ಜೊತೆಯಲ್ಲಿ ನಾವೆಲ್ಲಾ ಸೇರಿ ರಾಜ್ಯದ ಅನೇಕ ಅಭಿವೃದ್ಧಿ ಕಾರ್ಯಗಳು ಇನ್ನು ತ್ವರಿತ ಗತಿಯಲ್ಲಿ ಆಗಬೇಕು ಎಂದರು.

ಅವುಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳುತ್ತೇವೆ ಎಂದರು.ಎತ್ತಿನಹೊಳೆ ಯೋಜನೆಯ ಮೂಲಕ ಜೂನ್, ಜುಲೈ ನೀರು ಹರಿಯಬೇಕಿತ್ತು. ಅರಣ್ಯ ಇಲಾಖೆ ಅನುಮತಿ ಕಾರಣಕ್ಕಾಗಿ ಕಾಮಗಾರಿ ನಿಂತಿದೆ. ಇತ್ತೀಚೆಗೆ ಕೇಂದ್ರ ಸರ್ಕಾರ ಅನುಮತಿ ನೀಡಲು ತಾತ್ವಿಕ ಸಹಮತ ಸೂಚಿಸಿದೆ ಎಂದು ತಿಳಿದು ಬಂದಿದೆ. ಅದನ್ನು ಬಳಸಿಕೊಂಡು ಶೀಘ್ರವೇ ಕಾಮಗಾರಿಯನ್ನು ಪೂರ್ಣಗೊಳಿಸುವುದಾಗಿ ತಿಳಿಸಿದ್ದಾರೆ.
ಹೊಸದಾಗಿ ಕಂದಾಯ ಇಲಾಖೆಯ ಜವಾಬ್ದಾರಿಯನ್ನು ವಹಿಸಿಕೊಂಡಿದ್ದೇನೆ. ಈ ಹಿಂದೆ ಸಚಿವ ಕೃಷ್ಣಭೈರೇಗೌಡ ಉತ್ತಮ ಕೆಲಸ ಮಾಡಿದ್ದಾರೆ. ಅದನ್ನೇ ಮುಂದುವರೆಸುತ್ತೇವೆ. ಹೊಸದಾಗಿ ಮತ್ತಷ್ಟು ಸುಧಾರಣೆಗಳನ್ನು ತರುತ್ತೇವೆ ಎಂದರು. ರೈತರಿಗೆ ತಮ ಜಮೀನಿನ ಮಾಲಿಕತ್ವ ಪಡೆಯಲು ಸಮಸ್ಯೆಗಳಿವೆ. ದಾಖಲಾತಿಗಳನ್ನು ಕ್ರಮಬದ್ಧಗೊಳಿಸುವ ಮೂಲಕ ಭೂಮಿ ಒಡೆತನವನ್ನು ಖಚಿತಪಡಿಸಲಾಗುವುದು. ಇಲಾಖೆಯಲ್ಲಿ ನೇಮಕಾತಿ ಹಾಗೂ ಬಡ್ತಿ ವಿಚಾರವಾಗಿ ಸಮಸ್ಯೆಗಳಿವೆ. ಅದನ್ನು ಸರಿ ಪಡಿಸುತ್ತೇವೆ ಎಂದು ಹೇಳಿದರು.

ಈ ಹಿಂದೆ ಗೃಹ ಸಚಿವನ್ನಾಗಿ ಮೂರು ವರ್ಷ ಶಾಂತಿ ಸುವ್ಯವಸ್ಥೆಯನ್ನು ಪಾಲನೆ ಮಾಡಿದ್ದೇನೆ. ಒಂದು ಕೋಮು ಗಲಭೆಯೂ ಆಗಿಲ್ಲ. ಕಂದಾಯ ಇಲಾಖೆಯಲ್ಲಿ ಹೊಸ ಸವಾಲುಗಳನ್ನು ನಿಭಾಯಿಸಲಾಗುವುದು ಎಂದರು. ಯಾವುದೇ ಶುಭ ಕಾರ್ಯಗಳನ್ನು ಆರಂಭಿಸುವ ಮುನ್ನ ಶ್ರೀ ಮಠಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸುವುದು ತಾವು ಪಾಲಿಸಿಕೊಂಡು ಬಂದಿರುವ ಸಂಪ್ರದಾಯವಾಗಿದೆ. ಹೀಗಾಗಿ ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವನಾಗಿ ಕಾರ್ಯ ಆರಂಭಿಸುವ ಮುನ್ನ ಶ್ರೀ ಮಠಕ್ಕೆ ಭೇಟಿ ಮಾಡಿ ಪೂಜೆ ಸಲ್ಲಿಸಿದ್ದೇನೆ ಎಂದು ಹೇಳಿದರು.

**ಈ ದಿನದ ದರ** ಪೆಟ್ರೋಲ್: 110.89 ₹/L ಡೀಸೆಲ್ : 98.80₹/L ಬಂಗಾರ: ₹ 15,273/Gram 24ct ₹14,000 /Gram 22ct ಬೆಳ್ಳಿ: ₹265.00/Gram

# ಜೀರೋ ಟ್ರಾಫಿಕ್‌ನಿಂದ ಜನರಿಗೆ ತೊಂದ್ರೆ ತಪ್ಪಿಸಲು ಮೆಟ್ರೋ ರೈಲಿನಲ್ಲಿ ಪ್ರಯಾಣಿಸಿದ ಸಿಎಂ ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಹಾರೋಹಳ್ಳಿ, ಕನಕಪುರ ಕೃತಜ್ಞತೆ ಸಮರ್ಪಣಾ ಪ್ರವಾಸ ಸಂದರ್ಭದಲ್ಲಿ ಜೀರೋ ಟ್ರಾಫಿಕ್‌ನಿಂದ ಸಾರ್ವಜನಿಕರಿಗೆ ತೊಂದರೆಯಾಗುವುದನ್ನು ತಪ್ಪಿಸಲು ಸಿಎಂ ಡಿ.ಕೆ. ಶಿವಕುಮಾರ್ ಅವರು ವಿಧಾನಸೌಧ ಬಳಿಯ ಡಾ. ಬಿ.ಆರ್.ಅಂಬೇಡ್ಕರ್ ಮೆಟ್ರೋ ನಿಲ್ದಾಣದ ಬಳಿಯಿಂದ ಕನಕಪುರ ರಸ್ತೆಯ ಕೊನೆ ನಿಲ್ದಾಣ ಸಿಲ್ಕ್ ಇನ್ಸ್ಟಿಟ್ಯೂಟ್ ವರೆಗೆ ಮೆಟ್ರೋ ರೈಲಿನಲ್ಲಿ ಭಾನುವಾರ ಪ್ರಯಾಣ ಮಾಡಿದರು. ಪ್ರಯಾಣದ ವೇಳೆ ಸಾರ್ವಜನಿಕರ ಕುಶಲ ವಿಚಾರಿಸಿದರು.

ಯುವಕ, ಯುವತಿಯರು ಸೇರಿದಂತೆ ಪ್ರಯಾಣಿಕರು ಸಿಎಂ ಜತೆ ಸೆಲ್ಫಿ ತೆಗೆದುಕೊಂಡರು. ಸಿಎಂ ಅವರು ಪ್ರಯಾಣಿಕರ ಮೆಟ್ರೊ ಪ್ರಯಾಣದ ಅನುಭವ ಆಲಿಸಿದರು. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿರುವ ಸಿಎಂ ಅವರು, ಇಂದು ನನ್ನೂರು ಕನಕಪುರಕ್ಕೆ ಹೋಗುವಾಗ, ನಮ್ಮ ಮೆಟ್ರೋದಲ್ಲಿ ಸಾರ್ವಜನಿಕರೊಂದಿಗೆ ಪ್ರಯಾಣಿಸುವ ಅವಕಾಶ ಸಿಕ್ಕಿತು. ಮೆಟ್ರೋದಲ್ಲಿ ಪ್ರಯಾಣಿಸುತ್ತಿರುವ ಬೆಂಗಳೂರಿನ ನಾಗರಿಕರ ಮುಖದಲ್ಲಿನ ನೆಮ್ಮದಿಯನ್ನು ಕಂಡಾಗ, ಸುರಕ್ಷಿತ, ಜನಸ್ನೇಹಿ ಹಾಗೂ ಕೈಗೆಟುಕುವ ಸಾರ್ವಜನಿಕ ಸಾರಿಗೆ ನಮ್ಮ ಕರ್ನಾಟಕದ ಜನತೆಗೆ ಎಷ್ಟು ಮುಖ್ಯ ಎಂಬುದು ಮತ್ತೊಮ್ಮೆ ಮನವರಿಕೆಯಾಯಿತು ಎಂದು ಹೇಳಿದ್ದಾರೆ.

ಬೆಂಗಳೂರು ನಮ್ಮೆಲ್ಲರ ಹೆಮ್ಮೆ ಪ್ರತಿಯೊಬ್ಬ ನಾಗರಿಕನ ದೈನಂದಿನ ಬದುಕನ್ನು ಸುಗಮಗೊಳಿಸಿ, ಇಡೀ ನಗರವನ್ನು ಬೆಸೆಯುವಂತಹ ದೂರದೃಷ್ಟಿಯುಳ್ಳ ಯೋಜನೆಗಳಲ್ಲೇ ನಮ್ಮ ಬೆಂಗಳೂರಿನ ಭವಿಷ್ಯ ಅಡಗಿದೆ. ಈ ನಿಟ್ಟಿನಲ್ಲಿ ನಮ್ಮ ಮೆಟ್ರೋ ಮಹತ್ತರ ಪಾತ್ರ ವಹಿಸುತ್ತಿದೆ ಎಂದು ತಿಳಿಸಿದ್ದಾರೆ. ಪ್ರಯಾಣದ ಉದ್ದಕ್ಕೂ ಪ್ರೀತಿಯಿಂದ ಮಾತನಾಡಿಸಿ, ಶುಭ ಹಾರೈಸಿದ ಪ್ರತಿಯೊಬ್ಬರಿಗೂ ನನ್ನ ಹೃದಯಪೂರ್ವಕ ಧನ್ಯವಾದಗಳು.

ಸಾರ್ವಜನಿಕ ಸೇವೆ ಎಂದರೆ ಕೇವಲ ಅಧಿಕಾರವಲ್ಲ, ಅದು ಜನರ ಆಶೋತ್ತರಗಳಿಗೆ ಕಿವಿಯಾಗುವುದು, ಸದಾ ಕಲಿಯುವುದು ಮತ್ತು ಜನರೊಂದಿಗೆ ಸದಾ ಸಂಪರ್ಕದಲ್ಲಿರುವುದು ಎಂಬುದನ್ನು ಸಾರ್ವಜನಿಕ ಸಾರಿಗೆ ನಮ್ಮ ಕರ್ನಾಟಕದ ಜನತೆಗೆ ಎಷ್ಟು ಮುಖ್ಯ ಇಂದಿನ ಒಡನಾಟ ನನಗೆ ಮತ್ತೊಮ್ಮೆ ನೆನಪಿಸಿಕೊಟ್ಟಿದೆ.

ಬನ್ನಿ, ನಾವೆಲ್ಲರೂ ಕೈಜೋಡಿಸಿ ಇನ್ನಷ್ಟು ಸಮೃದ್ಧ, ಬಲಿಷ್ಠ ಮತ್ತು ಜನಸ್ನೇಹಿ ಕರ್ನಾಟಕವನ್ನು ಕಟ್ಟೋಣ ಎಂದು ಕರೆ ನೀಡಿದ್ದಾರೆ.

ಉದಯವಾಹಿನಿ ಚಿತ್ರ




## ರಾಜ್ಯದಲ್ಲಿ ಮುಂಗಾರು ಚುರುಕು: ಮೂರು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್

ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮುಂಗಾರು ಮಳೆಯ ಅಬ್ಬರ ಚುರುಕುಗೊಂಡಿದೆ. ಮುಂದಿನ ಕೆಲ ದಿನಗಳು ಕರಾವಳಿ ಮತ್ತು ಉತ್ತರ ಒಳನಾಡಿನ ಹಲವೆಡೆ ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದ್ದು, ಉಳಿದ ವಿವಿಧ ಜಿಲ್ಲೆಗಳಲ್ಲಿಯೂ ಭಾರಿ ಮಳೆ ನಿರೀಕ್ಷಿಸಲಾಗಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಜಿಲ್ಲೆಗಳಲ್ಲಿ ಮಳೆಯ ಆರ್ಭಟ ಜೋರಾಗಿರಲಿದ್ದು, ಉತ್ತರ ಕನ್ನಡ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಉಳಿದಂತೆ ಬೆಳಗಾವಿ, ರಾಯಚೂರು, ಧಾರವಾಡ, ಹಾವೇರಿ, ಗದಗ, ಕೊಪ್ಪಳ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನ ಚಿಕ್ಕಮಗಳೂರು, ಹಾಸನ, ಕೊಡಗು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಯೆಲ್ಲೋ ಅಲರ್ಟ್ ನೀಡಲಾಗಿದೆ.

**ಬಿರುಗಾಳಿಯೊಂದಿಗೆ ಭಾರಿ ಮಳೆ:** ಉತ್ತರ ಒಳನಾಡಿನಲ್ಲಿ ಗುಡುಗು ಸಹಿತ ಮಳೆ ಹೆಚ್ಚಿರಲಿದ್ದು, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು ಮತ್ತು ಬೆಳಗಾವಿ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗಂಟೆಗೆ 40 ರಿಂದ 50 ಕಿಲೋಮೀಟರ್ ವೇಗದ ಬಲವಾದ ಬಿರುಗಾಳಿಯೊಂದಿಗೆ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಬಾಗಲಕೋಟೆ, ಕಲಬುರಗಿ, ಬೀದರ್, ಯಾದಗಿರಿ, ವಿಜಯಪುರ ಜಿಲ್ಲೆಗಳ ಅನೇಕ ಕಡೆಗಳಲ್ಲಿ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

# ಚಿನ್ನಸ್ವಾಮಿ ಸ್ಟೇಡಿಯಂ ಸಿಸಿಟಿವಿ ವಿವಾದಕ್ಕೆ ಭಾರಿ ಟ್ವಿಸ್ಟ್

## ಬಾಕಿ ಹಣ ನೀಡದೆ ಅಮಾಯಕರ ಮೇಲೆ ಸುಳ್ಳು ಕೇಸ್ ಹಾಕಿದ ಆರೋಪ

**ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಸಿಸಿಟಿವಿ ವೈರ್ ಕಟ್ ಪ್ರಕರಣಕ್ಕೆ ಭಾರಿ ಟ್ವಿಸ್ಟ್ ಸಿಕ್ಕಿದ್ದು, ಕಂಪನಿಗಳು ಬಾಕಿ ಹಣ ನೀಡದೆ ವಂಚಿಸಲು ಅಮಾಯಕರ ಮೇಲೆ ಸುಳ್ಳು ಕೇಸ್ ದಾಖಲಿಸಿವೆ ಎಂಬ ಆರೋಪ ಕೇಳಿಬಂದಿದೆ. ಕೋರ್ಟ್ ನೀಡಿದ್ದ ಎಸ್‌ಒಪಿ ನಿಯಮ ಉಲ್ಲಂಘಿಸಿ ಎಐ ಹೆಸರಿನಲ್ಲಿ ಸಾಮಾನ್ಯ ಕ್ಯಾಮೆರಾ ಅಳವಡಿಸಿ ಕಣ್ಣಿಗೆ ಮಣ್ಣೆರಚಲಾಗಿದ್ದು, ತಾಂತ್ರಿಕ ದೋಷದಿಂದ ಸಿಸಿಟಿವಿ ಆಫ್ ಆಗಿದ್ದನ್ನೇ ದುಷ್ಕೃತ್ಯ ಎಂದು ಬಿಂಬಿಸಲಾಗಿದೆ ಎಂದು ಐವಿಎಸ್ ಸಿಬ್ಬಂದಿ ದೂರಿದ್ದಾರೆ.**

• ಉದಯವಾಹಿನಿ, ಬೆಂಗಳೂರು

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯಗಳ ವೇಳೆ ಸಿಸಿಟಿವಿ ವೈರ್ ಕಟ್ ಮಾಡಲಾಗಿತ್ತು ಎಂಬ ಆರೋಪದ ಬೆನ್ನಲ್ಲೇ ಈಗ ಪ್ರಕರಣಕ್ಕೆ ಭಾರಿ ಟ್ವಿಸ್ಟ್ ಸಿಕ್ಕಿದೆ. ಪಂದ್ಯದ ವೇಳೆ ಯಾವುದೇ ದುಷ್ಕೃತ್ಯ ಅಥವಾ ಭದ್ರತಾ ಲೋಪ ಆಗಿರಲಿಲ್ಲ, ಬದಲಿಗೆ ಬಾಕಿ ಹಣ ನೀಡದೇ ವಂಚಿಸಲು ಸಿಸಿಟಿವಿ ತಂತ್ರಜ್ಞಾನ ಸಂಸ್ಥೆಗಳು ಅಮಾಯಕರ ಮೇಲೆ ಸುಳ್ಳು ಕೇಸ್ ದಾಖಲಿಸಿ ಕಣ್ಣಿಗೆ ಮಣ್ಣೆರಚುವ ಕೆಲಸ ಮಾಡಿವೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಆರ್‌ಸಿಬಿ ಮತ್ತು ಕೆಎಸ್‌ಸಿಎ ಮುಖಾಂತರ ಸ್ಟೇಡಿಯಂನ ಭದ್ರತಾ ನಿಯಮಾವಳಿ ಸಂಬಂಧಿಸಿದಂತೆ ಒಟ್ಟು 7 ಕೋಟಿ ರೂಪಾಯಿಗಳ ಯೋಜನೆ ಸಿದ್ಧವಾಗಿತ್ತು. ಇದರಲ್ಲಿ ಹರಿಯಾಣ ಮೂಲದ ಸ್ಟಾಕು ಸಂಸ್ಥೆಗೆ 4.5 ಕೋಟಿಗೆ ಟೆಂಡರ್ ನೀಡಲಾಗಿತ್ತು. ಆ ಬಳಿಕ ಎರಡನೇ ವೆಂಡರ್ ಆಗಿ ಗುಜರಾತ್ ಮೂಲದ ಟೆಕ್‌ಸ್ಟಿಚ್ ಸಂಸ್ಥೆ ಹಾಗೂ ಅಂತಿಮವಾಗಿ ಪುಣೆ ಮೂಲದ ಐವಿಎಸ್ ಟೆಕ್ ಸೆಕ್ಯೂರ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಸಿಸಿಟಿವಿ ಅಳವಡಿಕೆಯ ಹೊಣೆ ಸಿಕ್ಕಿತ್ತು.

**ಬಾಕಿ ನಲವತ್ತು ಲಕ್ಷ ರೂ. ನೀಡದೆ ವಂಚಿಸಿರುವ ಆರೋಪ ಕೇಳಿಬಂದಿದೆ.**

ಕೊನೆಯ ಪಂದ್ಯಕ್ಕೂ ಮುನ್ನ ಕ್ರೀಡಾಂಗಣದಲ್ಲಿ ಪವರ್ ಸಮಸ್ಯೆಯಿಂದಾಗಿ ಸಿಸಿಟಿವಿ ಆಫ್ ಆಗಿತ್ತು. ಈ ವೇಳೆ ಐವಿಎಸ್ ಸಂಸ್ಥೆಯು ಬಾಕಿ ಹಣ ನೀಡುವಂತೆ ಕೇಳಿತ್ತಾದರೂ, ಪಂದ್ಯಕ್ಕೆ ತೊಂದರೆಯಾಗಬಾರದು ಎಂಬ ಕಾರಣಕ್ಕೆ ಅಬ್ದುಲ್ ಕಲಾಂ ಮತ್ತು ಮಂಜುನಾಥ್ ಎಂಬ ಇಬ್ಬರು ಸಿಬ್ಬಂದಿಯನ್ನು ಸ್ಥಳಕ್ಕೆ ಕಳುಹಿಸಿತ್ತು. ಆದರೆ ತಾಂತ್ರಿಕ ಸಮಸ್ಯೆ ಬಗೆಹರಿಸಲಾಗದೆ ಅವರು ಟೆಕ್ನಿಕಲ್ ಟೀಮ್ ಕರೆಯಲು ವಾಪಸ್ ಬಂದಿದ್ದರು. ಇದೇ ಸಿಸಿಟಿವಿ ದೃಶ್ಯಾವಳಿಗಳನ್ನು ಇಟ್ಟುಕೊಂಡು ಸ್ಟಾಕು ಕಂಪನಿಯ ಆದಿತ್ಯ ಭಟ್ ಎಂಬುವವರು ವೈರ್ ಕಟ್ ಮಾಡಿದ್ದಾರೆ ಎಂದು ಅಮಾಯಕರ ಮೇಲೆ ಸುಳ್ಳು ದೂರು ನೀಡಿದ್ದರು.

### ಯುವಕರಿಗೆ ಸ್ಟೇಷನ್ ಬೇಲ್

**ಕ್ರೀಡಾಂಗಣದಲ್ಲಿ ಕೆಲಸ ಮಾಡಲು ಕೆಎಸ್‌ಸಿಎ ಐಟಿ ಹೆಡ್ ಎನ್ನಲಾದ ರವಿ ಎಂಬಾತ ಆನ್‌ಲೈನ್ ಮೂಲಕ 40 ಸಾವಿರ ಹಾಗೂ ನಗದು ರೂಪದಲ್ಲಿ 2 ಲಕ್ಷಕ್ಕೂ ಅಧಿಕ ಹಣವನ್ನು ಲಂಚವಾಗಿ ಪಡೆದಿದ್ದಾನೆ ಎಂಬ ಆರೋಪವೂ ಕೇಳಿಬಂದಿದೆ. ಈಗ ಬಾಕಿ ಹಣ ಕೇಳಿದರೆ ಕೆಎಸ್‌ಸಿಎ ಹಾಗೂ ಟೆಕ್‌ಸ್ಟಿಚ್ ಕಂಪನಿಗಳು ಒಬ್ಬರ ಮೇಲೊಬ್ಬರು ಕೈ ತೋರಿಸುತ್ತಾ ಜಾರಿಕೊಳ್ಳುತ್ತಿವೆ.**

**ಪೊಲೀಸ್ ತನಿಖೆಯಲ್ಲೂ ಇದು ಹಣಕಾಸಿನ ವಿಚಾರಕ್ಕೆ ನಡೆದ ಗಲಾಟೆ ಎಂಬುದು ಪತ್ತೆಯಾಗಿದ್ದು, ಇಬ್ಬರು ಯುವಕರಿಗೆ ಸ್ಟೇಷನ್ ಬೇಲ್ ನೀಡಲಾಗಿದೆ. ಆದರೆ ಸುಳ್ಳು ಆರೋಪದಿಂದಾಗಿ ಯುವಕರು ಮುಜುಗರಕ್ಕೊಳಗಾಗಿದ್ದಾರೆ. ಈ ಭದ್ರತಾ ಗೊಂದಲ ಹಾಗೂ 10 ಸಾವಿರ ಐಪಿಎಲ್ ಟಿಕೆಟ್‌ಗಳ ಬೇಡಿಕೆಯೇ ಐಪಿಎಲ್‌ನ ಅಂತಿಮ ಪಂದ್ಯಗಳನ್ನು ಗುಜರಾತ್‌ಗೆ ಸ್ಥಳಾಂತರಿಸಲು ಪ್ರಮುಖ ಕಾರಣವಾಗಿತ್ತು ಎಂಬ ಆಘಾತಕಾರಿ ಅಂಶವೂ ಬೆಳಕಿಗೆ ಬಂದಿದೆ.**



ಉದಯವಾಹಿನಿ ಚಿತ್ರ



### ಲಕ್ಷ ರೂಪಾಯಿ ಬಾಕಿ ಹಣ

**ಐವಿಎಸ್ ಸಂಸ್ಥೆಯು ಬೆಂಗಳೂರಿನ ಸಿಬ್ಬಂದಿ ಮೂಲಕ 1.2 ಕೋಟಿ ರೂಪಾಯಿಯ ಕೊಟೇಷನ್ ನೀಡಿ ಕೆಲಸ ಮುಗಿಸಿತ್ತು. ಆದರೆ ಮೂರು ಪಂದ್ಯಗಳು ಮುಗಿದ ಬಳಿಕ 1 ಕೋಟಿ ರೂಪಾಯಿ ನೀಡಿ, ಇನ್ನುಳಿದ 40 ಲಕ್ಷ ರೂಪಾಯಿ ಬಾಕಿ ಹಣ ನೀಡದೇ ಕಂಪನಿಗಳು ಸತಾಯಿಸಿದ್ದವು.**

### ತಪ್ಪು ಮುಚ್ಚಿಕೊಳ್ಳಲು ಅಮಾಯಕ ಯುವಕರ ಮೇಲೆ ಸುಳ್ಳು ಕೇಸ್

### ಕಣ್ಣುಕಟ್ಟಿದ ತಂತ್ರಜ್ಞಾನ

**ಕಾಲ್ತುಳಿತ ದುರಂತದ ಬಳಿಕ ಎಸ್‌ಒಪಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕೋರ್ಟ್ ಸೂಚಿಸಿತ್ತು. ಎಐ ಕ್ಯಾಮೆರಾಗಳನ್ನು ಅಳವಡಿಸುವುದಾಗಿ ಹೇಳಿ, ಕೇವಲ ಹೆಡ್ ಕೌಂಟ್ ಮಾತ್ರ ಸಾಧ್ಯವಿರುವ ಸಾಮಾನ್ಯ ಕ್ಯಾಮೆರಾಗಳನ್ನು ಅಳವಡಿಸಿ ವಂಚಿಸಲಾಗಿದೆ ಎಂದು ಐವಿಎಸ್ ಪ್ರಾಜೆಕ್ಟ್ ಮ್ಯಾನೇಜರ್ ವರುಣ್ ಹಾಗೂ ಸಿಬ್ಬಂದಿ ಅಚ್ಯುತ್ ಆರೋಪಿಸಿದ್ದಾರೆ. 1.5 ಕೋಟಿ ಬಜೆಟ್‌ನಲ್ಲಿ ಎಐ ಕ್ಯಾಮೆರಾ ಅಳವಡಿಸಲು ಸಾಧ್ಯವೇ ಇಲ್ಲದಿದ್ದರೂ ತಪ್ಪು ಮುಚ್ಚಿಹಾಕಲು ಈ ಹೂಡಿಕೆ ನಾಟಕವಾಡಲಾಗಿದೆ ಎನ್ನಲಾಗಿದೆ.**

## ಮದುವೆ ಆಗೋದಾಗಿ ನಂಬಿಸಿ ಯುವಕನಿಗೆ 35 ಲಕ್ಷ ರೂ ವಂಚಿಸಿದ

ಉದಯವಾಹಿನಿ ಚಿತ್ರ




• ಉದಯವಾಹಿನಿ, ಬೆಂಗಳೂರು

ಮದುವೆ ಆಗೋದಾಗಿ ನಂಬಿಸಿ ಯುವಕನೋರ್ವನಿಗೆ ಯುವತಿ ಬರೋಬ್ಬರಿ 35 ಲಕ್ಷ ರೂ ವಂಚಿಸಿರುವಂತಹ ಘಟನೆ ನಗರದಲ್ಲಿ ಬೆಳಕಿಗೆ ಬಂದಿದೆ. ಅನಿಲ್ ಎಂಬಾತನಿಗೆ ಲಕ್ಷ್ಮೀ ವಂಚಿಸಿದ್ದಾಳೆ. ಸದ್ಯ ಯುವಕ ನೀಡಿದ ದೂರಿನನ್ವಯ ಬೆಂಗಳೂರಿನ ಆಗ್ನೇಯ ವಿಭಾಗದ ಸೈಬರ್ ಕ್ರೈಮ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅನಿಲ್ ಮ್ಯಾಟ್ರಿಮೋನಿ ವೆಬ್‌ಸೈಟ್ ಮೂಲಕ ಹುಡುಗಿ ಹುಡುಕುತ್ತಿದ್ದರು. ಈ ವೇಳೆ ಭಾಸ್ಕರ್ ರಾವ್ ಎಂಬಾತ ಅನಿಲ್‌ಗೆ ಕರೆ ಮಾಡಿದ್ದರು. ನಿಮ್ಮ ಪ್ರೊಫೈಲ್ ಇಷ್ಟ ಆಗಿದೆ, ಲಕ್ಷ್ಮೀಗೆ ನಂಬರ್ ನೀಡಿದ್ದೀನಿ ಎಂದಿದ್ದ. ಬಳಿಕ ಖುದ್ದು ಲಕ್ಷ್ಮೀ ಅನಿಲ್‌ಗೆ ಕರೆ ಮಾಡಿದ್ದಾಳೆ. ಇಬ್ಬರು ಕೆಲ ದಿನ ಮಾತುಕತೆ ನಡೆಸಿದ್ದಾರೆ. ಇನ್ನು ಭವಿಷ್ಯದ ದೃಷ್ಟಿಯಿಂದ ಆನ್‌ಲೈನ್‌ನಲ್ಲಿ ಹೂಡಿಕೆ ಮಾಡಿರುವುದಾಗಿ ಹೇಳಿದ ಲಕ್ಷ್ಮೀ, ಕ್ರಿಪ್ಟೋ ಕರೆನ್ಸಿಯಲ್ಲಿ ಹಣ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭ ಗಳಿಸಬಹುದು ಎಂದು ಆಮಿಷ ಒಡ್ಡಿದ್ದಾಳೆ. 'ನೀನು ಈಗಲೇ ಹಣ ಹೂಡಿಕೆ ಮಾಡು, ಮದುವೆಯ ನಂತರ ಅದೇ ಲಾಭದ ಹಣದಲ್ಲಿ ಚೆನ್ನಾಗಿ ಸೆಟಲ್ ಆಗೋಣ' ಎಂದು ನಂಬಿಸಿದ್ದಾಳೆ. ಇದಕ್ಕೆ ಅನಿಲ್ 'ಈಗ ಬೇಡ, ಮದುವೆಯಾದ ಬಳಿಕ ನೋಡೋಣ' ಎಂದು ನಿರಾಕರಿಸಿದರೂ ಬಿಡದ ಲಕ್ಷ್ಮೀ, ಹಠಕ್ಕೆ ಬಿದ್ದು ಹಣ ಹೂಡುವಂತೆ ಸತತವಾಗಿ ಪ್ರೇರೇಪಿಸಿದ್ದಾಳೆ. ಕೊನೆಗೆ ಆಕೆಯ ಮಾತು ನಂಬಿದ ಅನಿಲ್, ಹಂತ ಹಂತವಾಗಿ ಬರೋಬ್ಬರಿ 35 ಲಕ್ಷ ರೂ ಹೂಡಿಕೆ ಮಾಡಿದ್ದಾರೆ.

## ರಾಜ್ಯ ಪೊಲೀಸ್ ಇಲಾಖೆಯಿಂದ 3,395 ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ!

• ಉದಯವಾಹಿನಿ, ಬೆಂಗಳೂರು

ರಾಜ್ಯ ಪೊಲೀಸ್ ಇಲಾಖೆಯ ಮಿಕ್ಕುಳಿದ ವೃಂದದಲ್ಲಿನ ವಿವಿಧ ಜಿಲ್ಲಾ, ನಗರ ಹಾಗೂ ಘಟಕಗಳಲ್ಲಿ ಖಾಲಿ ಇರುವ ಒಟ್ಟು 3,395 ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ನೇಮಕಾತಿಯ ಪ್ರಮುಖ ಪ್ರಕ್ರಿಯೆಯಾದ ಸ್ಪರ್ಧಾತ್ಮಕ ಲಿಖಿತ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸಲಿದ್ದು, ಆಫ್‌ಲೈನ್-ಒಎಂಆರ್ ಮಾದರಿಯಲ್ಲಿ ಪರೀಕ್ಷೆಗಳು ಜರುಗಲಿವೆ.

ಒಟ್ಟು 3,395 ಹುದ್ದೆಗಳಲ್ಲಿ ಪುರುಷ ಅಭ್ಯರ್ಥಿಗಳಿಗೆ 2266, ಮಹಿಳಾ ಅಭ್ಯರ್ಥಿಗಳಿಗೆ 755, ಸೇವಾನಿರತ ಪುರುಷರಿಗೆ 257, ಸೇವಾನಿರತ ಮಹಿಳೆಯರಿಗೆ 82 ಹಾಗೂ ತೃತೀಯ ಲಿಂಗಿ ಅಭ್ಯರ್ಥಿಗಳಿಗೆ 35 ಹುದ್ದೆಗಳನ್ನು ಕಾಯ್ದಿರಿಸಲಾಗಿದೆ. ಆಯ್ಕೆಯಾಗುವ ಅಭ್ಯರ್ಥಿಗಳಿಗೆ 37,500 ರಿಂದ 76,100 ರವರೆಗಿನ ವೇತನ ಶ್ರೇಣಿ ಅನ್ವಯವಾಗಲಿದ್ದು, ರಾಷ್ಟ್ರೀಯ ಪಿಂಚಣಿ ಯೋಜನೆ ಸೌಲಭ್ಯ ದೊರೆಯಲಿದೆ.

## ಪ್ರಿಯಕರನ ಜೊತೆ ಸೇರಿ ಹೆತ್ತ ಮಗಳನ್ನೇ ಕೊಂದ ತಾಯಿ 3 ತಿಂಗಳ ಬಳಿಕ ಕೊಲೆ ಕೇಸ್ ದಾಖಲು

• ಉದಯವಾಹಿನಿ, ಬೆಂಗಳೂರು

ಜಗತ್ತಿನಲ್ಲಿ ತಾಯಿಗೆ ಅತ್ಯಂತ ಪೂಜ್ಯನೀಯ ಸ್ಥಾನವಿದೆ. ಜಗತ್ತಿನ ಎಲ್ಲಾ ಹೊರ ಶಕ್ತಿಗಳಿಂದ ಮಗುವನ್ನ ರಕ್ಷಿಸಬೇಕಾದವಳು ತಾಯಿ. ಆದರೆ ಇಲ್ಲಿ ರಕ್ಷಕಿಯಾಗಬೇಕಿದ್ದ ತಾಯಿಯೇ ಮಗಳ ಪಾಲಿನ ಮೃತ್ಯುಸ್ವರೂಪಿಯಾಗಿದ್ದಾಳೆ. ಇದಕ್ಕೆ ಬೆಂಗಳೂರಿನಲ್ಲಿ ನಡೆದಿರುವ ಕೊಲೆ ಪ್ರಕರಣವೇ ತಾಜಾ ಉದಾಹರಣೆಯಾಗಿದೆ.

ಕಳ್ಳಸಂಬಂಧ ಹೊಂದಿದ್ದ ಮಹಿಳೆಯೊಬ್ಬಳು ತನ್ನ ಪ್ರಿಯಕರನ ಜೊತೆ ಸೇರಿ ತಾನು ಹೆತ್ತ ಮಗುವನ್ನೇ ಕೊಲೆಗೈದು ವಿಕೃತಿ ಮೆರೆದಿದ್ದಾಳೆ. ಅಕ್ರಮ ಸಂಬಂಧ, ಮಗುವಿನ ಬಣ್ಣದ ಕಾರಣಕ್ಕೆ ಕೊಲೆ ಮಾಡಿರುವ ಆರೋಪ ಕೇಳಿಬಂದಿದೆ.

ನಗರದ ಕಾಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯ ಸೀಗೆಹಳ್ಳಿ ವಿಲ್ಲಾವೊಂದರಲ್ಲಿ ಘಟನೆ ನಡೆದಿದ್ದು, ಮೃತಪಟ್ಟಿರುವ ಮಗುವನ್ನು ವೆನ್ನಿಲಾ (6ವರ್ಷ) ಎಂದು ಗುರುತಿಸಲಾಗಿದೆ. ಘಟನೆ ಸಂಬಂಧ 3 ತಿಂಗಳ ಬಳಿಕ ಕೊಲೆ ಕೇಸ್ ದಾಖಲಾಗಿದೆ. ಪ್ರಿಯಾಂಕಾ ಹಾಗೂ ದಾವಣಗೆರೆಯ ಪ್ರವೀಣ್ 2007ರಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ರು.

## ವಿಶ್ವ ಪರಿಸರ ದಿನಾಚರಣೆ: ಬೆಂಗಳೂರು ಪೂರ್ವ ನಗರ ಪಾಲಿಕೆಯಿಂದ 100 ಟನ್ ತ್ಯಾಜ್ಯ ತೆರವು..!

• ಉದಯವಾಹಿನಿ, ಬೆಂಗಳೂರು

ವಿಶ್ವ ಪರಿಸರ ದಿನದ ಅಂಗವಾಗಿ ಬೆಂಗಳೂರು ಪೂರ್ವ ನಗರ ಪಾಲಿಕೆ ವತಿಯಿಂದ ಕೆ.ಆರ್.ಪುರಂ ಮತ್ತು ದೊಡ್ಡನೆಕ್ಕುಂದಿ ವಾರ್ಡ್‌ಗಳಲ್ಲಿ ಭಾರಿ ಸ್ವಚ್ಛತಾ ಅಭಿಯಾನ ಹಾಗೂ ವೃಕ್ಷಾರೋಪಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, 100 ಟನ್‌ಗಿಂತ ಹೆಚ್ಚು ತ್ಯಾಜ್ಯ ಮತ್ತು ಕಟ್ಟಡ ಅವಶೇಷಗಳನ್ನು ತೆರವುಗೊಳಿಸಲಾಗಿದೆ.

ಈ ಕುರಿತು ಮಾಹಿತಿ ನೀಡಿದ ಬೆಂಗಳೂರು ಪೂರ್ವ ನಗರ ಪಾಲಿಕೆ ಆಯುಕ್ತ ಡಿ.ಎಸ್. ರಮೇಶ್ ಅವರು, ಅಭಿಯಾನದ ವೇಳೆ 18 ಬ್ಲಾಕ್ ಸ್ಪಾಟ್‌ಗಳನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ. ಸ್ವಚ್ಛತಾ ಕಾರ್ಯಕ್ಕಾಗಿ 1,600ಕ್ಕೂ ಹೆಚ್ಚು ಪೌರಕಾರ್ಮಿಕರು, ಆಟೋ ಟಿಪ್ಪರ್ ಚಾಲಕರು, ಮಾರ್ಷಲ್‌ಗಳು ಹಾಗೂ ಸ್ವಯಂಸೇವಕರನ್ನು ನಿಯೋಜಿಸಲಾಗಿತ್ತು. ಜೊತೆಗೆ 14 ಟ್ರ್ಯಾಕ್ಟರ್‌ಗಳು, 6 ಟಿಪ್ಪರ್ ಲಾರಿಗಳು, 6 ಕಾಂಪ್ಯಾಕ್ಟರ್ ವಾಹನಗಳು, 20 ಆಟೋ ಟಿಪ್ಪರ್‌ಗಳು ಮತ್ತು 3 ಭೂ ಅಗೆಯುವ ಯಂತ್ರಗಳನ್ನು ಬಳಸಿಕೊಳ್ಳಲಾಯಿತು. ಗಂಗಶೆಟ್ಟಿ ಕೆರೆ, ಸರ್ಕಾರಿ ಶಾಲೆಗಳು, ಕಾಲೇಜುಗಳು ಹಾಗೂ ಸರ್ಕಾರಿ ಆಸ್ಪತ್ರೆ ಸೇರಿದಂತೆ ಹಲವು ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತಾ ಕಾರ್ಯ ನಡೆಸಲಾಯಿತು. ಪ್ರಮುಖ ರಸ್ತೆಗಳು, ವಾರ್ಡ್ ರಸ್ತೆಗಳು, ರಸ್ತೆ ವಿಭಜಕಗಳು, ಬಸ್ ನಿಲ್ದಾಣಗಳು, ಉದ್ಯಾನಗಳು, ಪಾದಚಾರಿ ಮಾರ್ಗಗಳು ಸೇರಿದಂತೆ ಸಾರ್ವಜನಿಕ ಪ್ರದೇಶಗಳನ್ನು ಶುಚಿಗೊಳಿಸಲಾಯಿತು.

ಪರಿಸರ ಸಂರಕ್ಷಣೆಯ ಭಾಗವಾಗಿ ವೆಂಗಯ್ಯನ ಕೆರೆ ಪ್ರದೇಶದಲ್ಲಿ 60 ಸಸಿಗಳನ್ನು ನೆಡಲಾಗಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಗಿಡಗಳನ್ನು ನೆಡಲು ಅಧಿಕಾರಿಗಳಿಗೆ ಕಾರ್ಯಯೋಜನೆ ಸಿದ್ಧಪಡಿಸುವಂತೆ ಸೂಚಿಸಲಾಗಿದೆ.

ಇದಲ್ಲದೆ, ಹಲವು ಸರ್ಕಾರಿ ಕಟ್ಟಡಗಳ ಕಾಂಪೌಂಡ್ ಗೋಡೆಗಳ ಮೇಲೆ ಪರಿಸರ ಜಾಗೃತಿ ಮೂಡಿಸುವ ಭಿತ್ತಿಚಿತ್ರಗಳು ಮತ್ತು ಕಲಾಕೃತಿಗಳನ್ನು ರಚಿಸಲಾಗಿದೆ.

ಉದಯವಾಹಿನಿ ಚಿತ್ರ



### ವಿಶೇಷ ಕಾರ್ಯಾಚರಣೆ

**ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ಬಳಕೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆಯುವವರ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸಿದ ಪಾಲಿಕೆ ಅಧಿಕಾರಿಗಳು 26 ಪ್ರಕರಣಗಳನ್ನು ದಾಖಲಿಸಿ, ಒಟ್ಟು ರೂ. 30 ಸಾವಿರ ದಂಡ ವಸೂಲಿ ಮಾಡಿದ್ದಾರೆ.**

## ಪರಪ್ಪನ ಅಗ್ರಹಾರದಲ್ಲಿ ಕೈದಿಗಳ ಪುಂಡಾಟ: ವಾರ್ಡರ್ ಮೇಲೆ ಹಲ್ಲೆಗೆ ಯತ್ನ!

• ಉದಯವಾಹಿನಿ, ಬೆಂಗಳೂರು

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಬಾಂಬ್ ಸ್ಫೋಟ ಪ್ರಕರಣದ ಕೈದಿಗಳು ಜೈಲು ಸಿಬ್ಬಂದಿ ಜೊತೆ ವಾಗ್ವಾದ ನಡೆಸಿ, ಧರ್ಮದ ಪರ ಘೋಷಣೆಗಳನ್ನು ಕೂಗಿ ಪುಂಡಾಟ ನಡೆಸಿರುವ ಗಂಭೀರ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಕಳೆದ ಮೂರು ದಿನಗಳ ಹಿಂದೆ ನಡೆದ ಈ ಘಟನೆಯಿಂದಾಗಿ ಜೈಲು ಆವರಣದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು. ವಾರ್ಡರ್ ಪ್ರಶ್ನಿಸುತ್ತಿದ್ದಂತೆ ಜೈಲಿನಲ್ಲಿದ್ದ ಇತರ ಬಾಂಬ್ ಸ್ಫೋಟ ಪ್ರಕರಣದ 50ಕ್ಕೂ ಹೆಚ್ಚು ಉಗ್ರ ಕೈದಿಗಳು ತಕ್ಷಣ ಒಂದೆಡೆ ಜಮಾವಣೆಗೊಂಡಿದ್ದಾರೆ. ವಾರ್ಡರ್ ಕ್ರಮವನ್ನು ವಿರೋಧಿಸಿದ ಕೈದಿಗಳ ಗುಂಪು, ಜೈಲಿನೊಳಗೇ ಒಂದು ಧರ್ಮದ ಪರವಾಗಿ ಜೋರಾಗಿ ಘೋಷಣೆಗಳನ್ನು ಕೂಗುತ್ತಾ ಪ್ರತಿಭಟನೆ ಆರಂಭಿಸಿದೆ. ಅಷ್ಟೇ ಅಲ್ಲದೆ, ಕರ್ತವ್ಯದಲ್ಲಿದ್ದ ಜೈಲು ವಾರ್ಡರ್ ಮೇಲೆ ಹಲ್ಲೆ ಮಾಡಲು ಸಹ ಕೈದಿಗಳು ಯತ್ನಿಸಿದ್ದಾರೆ ಎಂದು ತಿಳಿದುಬಂದಿದೆ.

ಘಟನೆಯಿಂದ ಜೈಲಿನಲ್ಲಿ ಗೊಂದಲದ ವಾತಾವರಣ ಸೃಷ್ಟಿಯಾಗುತ್ತಿದ್ದಂತೆ ಎಚ್ಚೆತ್ತ ಜೈಲಿನ ಹಿರಿಯ ಅಧಿಕಾರಿಗಳು ಮತ್ತು ಪರಪ್ಪನ ಅಗ್ರಹಾರ ಠಾಣೆಯ ಪೊಲೀಸರು ತಕ್ಷಣ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಪ್ರತಿಭಟನೆ ನಡೆಸುತ್ತಿದ್ದ ಕೈದಿಗಳನ್ನು ಮನವೊಲಿಸಿ, ಪರಿಸ್ಥಿತಿಯನ್ನು ಹತೋಟಿಗೆ ತಂದಿದ್ದಾರೆ. ಪರಪ್ಪನ ಅಗ್ರಹಾರ ಜೈಲಿನಲ್ಲಿ ಬಾಂಬ್ ಸ್ಫೋಟದ ಕೈದಿಗಳು ಪುಂಡಾಟ ನಡೆಸಿದ್ದಾರೆ. ನಿಯಮ ಉಲ್ಲಂಘನೆ ಪ್ರಶ್ನಿಸಿದ ಜೈಲು ವಾರ್ಡರ್ ಮೇಲೆ ಹಲ್ಲೆಗೆ ಯತ್ನಿಸಲಾಗಿದೆ. ಐವತ್ತಕ್ಕೂ ಹೆಚ್ಚು ಕೈದಿಗಳು ಒಟ್ಟಾಗಿ ಧರ್ಮದ ಪರ ಘೋಷಣೆ ಕೂಗಿದ್ದಾರೆ. ಸದ್ಯ ಜೈಲಿನಲ್ಲಿ ಪರಿಸ್ಥಿತಿ ಶಾಂತವಾಗಿದ್ದು, ಮುಂಜಾಗ್ರತಾ ಕ್ರಮವಾಗಿ ಬಿಗಿ ಭದ್ರತೆ ವಹಿಸಲಾಗಿದೆ. ಆದರೆ, ಇಷ್ಟೆಲ್ಲಾ ಹಂಗಾಮಾ ನಡೆದಿದ್ದರೂ ಈ ಘಟನೆಗೆ ಸಂಬಂಧಿಸಿದಂತೆ ಇದುವರೆಗೆ ಯಾವುದೇ ಅಧಿಕೃತ ದೂರು ದಾಖಲಾಗಿಲ್ಲ ಎಂದು ಮೂಲಗಳು ತಿಳಿಸಿವೆ.

ಉದಯವಾಹಿನಿ ಚಿತ್ರ




## ಎಲ್‌ಪಿಜಿ ಸಿಲಿಂಡರ್ ಬೆಲೆ ಏರಿಕೆ ವರದಿ ಕೇಳಿದ ಸಿಎಂ ಡಿ.ಕೆ. ಶಿವಕುಮಾರ್

• ಉದಯವಾಹಿನಿ, ಬೆಂಗಳೂರು


ಎಲ್‌ಪಿಜಿ ಬೆಲೆ ಏರಿಕೆ ಕುರಿತು ಅಧಿಕಾರಿಗಳಿಂದ ವರದಿ ಕೇಳಿರುವುದಾಗಿ ಸಿಎಂ ಡಿ ಕೆ ಶಿವಕುಮಾರ್ ತಿಳಿಸಿದರು. ಜೊತೆಗೆ ಕೈಗಾರಿಕಾ ಅನಿಲ ಹಾಗೂ ಕೈಗಾರಿಕಾ ಡೀಸೆಲ್ ದರಗಳು ಆತಂಕಕಾರಿ ಮಟ್ಟದಲ್ಲಿ ಏರಿಕೆಯಾಗಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರವು 14.2 ಕೆಜಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗೆ 29 ರೂಪಾಯಿ ಹೆಚ್ಚಳ ಮಾಡಿ ಆದೇಶ ಹೊರಡಿಸಿದೆ.

ಜಾಗತಿಕ ವೆಚ್ಚಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರಿ ತೈಲ ಮಾರುಕಟ್ಟೆ ಕಂಪನಿಗಳು ಒತ್ತಡ ಎದುರಿಸುತ್ತಿರುವ ಕಾರಣ, ಕಳೆದ ಮೂರು ತಿಂಗಳಲ್ಲಿ ಇದು ಎರಡನೇ ಬಾರಿ ದರ ಏರಿಕೆಯಾಗಿದೆ. ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಡಿ ಕೆ ಶಿವಕುಮಾರ್, ಎಲ್ ಪಿಜಿ ದರ ಏರಿಕೆ ಬಗ್ಗೆ ನಾನು ವರದಿ ಕೇಳಿದ್ದೇನೆ. ಅದಕ್ಕಿಂತಲೂ ಹೆಚ್ಚು ಕೈಗಾರಿಕಾ ಅನಿಲ ಮತ್ತು ಕೈಗಾರಿಕಾ ಡೀಸೆಲ್ ದರಗಳು ಆತಂಕಕಾರಿ ಪ್ರಮಾಣದಲ್ಲಿ ಏರಿಕೆ ಕಂಡಿವೆ. ಈ ಕುರಿತು ವರದಿ ಪಡೆಯುತ್ತಿದ್ದೇನೆ. ನಾಳೆ ಈ ವಿಷಯದ ಬಗ್ಗೆ ಮಾತನಾಡುತ್ತೇನೆ ಎಂದು ಹೇಳಿದರು. ಪಶ್ಚಿಮ ಏಷ್ಯಾದಲ್ಲಿ ಸಂಘರ್ಷದಿಂದ ಜಾಗತಿಕ ಮಟ್ಟದಲ್ಲಿ ಎಲ್‌ಪಿಜಿ ದರಗಳು ಗಣನೀಯವಾಗಿ ಏರಿಕೆಯಾಗಿದ್ದರೂ, ಭಾರತದಲ್ಲಿ ಇನ್ನೂ ವಿಶ್ವದಲ್ಲೇ ಅತ್ಯಂತ ಕಡಿಮೆ ಅಡುಗೆ ಅನಿಲ ದರವಿದೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

ಇದೇ ವರ್ಷದ ಮಾರ್ಚ್ 7ರಂದು ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು 60 ರೂಪಾಯಿ ಹೆಚ್ಚಿಸಲಾಗಿತ್ತು. ಇದೀಗ ಮತ್ತೊಮ್ಮೆ 29 ರೂಪಾಯಿ ಏರಿಕೆ ಮಾಡಲಾಗಿದೆ.

ಉದಯವಾಹಿನಿ ಚಿತ್ರ



### ಸಿಲಿಂಡರ್ ಮೇಲೂ 703 ರೂ. ನಷ್ಟ

**ಇತ್ತೀಚಿನ ಪರಿಷ್ಕರಣೆಗೆ ಮುನ್ನ, ಸರ್ಕಾರಿ ತೈಲ ಮಾರುಕಟ್ಟೆ ಕಂಪನಿಗಳು ಮಾರಾಟವಾಗುವ ಪ್ರತಿಯೊಂದು ಎಲ್‌ಪಿಜಿ ಸಿಲಿಂಡರ್ ಮೇಲೂ ಸುಮಾರು 703ರೂ. ನಷ್ಟ ಅನುಭವಿಸುತ್ತಿದ್ದವು ಎಂದು ಅಂದಾಜಿಸಲಾಗಿದೆ.**

## ಮುಂಗಾರು ಅಬ್ಬರ; ಸೋರುತಿದೆ ಆಸ್ಪತ್ರೆ, ಸರ್ಕಾರಿ ಶಾಲೆ ಜಲಾವೃತ

• ಉದಯವಾಹಿನಿ, ಬೆಂಗಳೂರು

ರಾಜ್ಯಕ್ಕೆ ಮುಂಗಾರು ಮಳೆ ಎಂಟ್ರಿ ಕೊಟ್ಟಿದೆ. ಮುಂಗಾರು ಪ್ರವೇಶಿಸಿದ ಮೊದಲ ದಿನವೇ ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಮಳೆಯಾಗಿದೆ. ಬೆಳಗಾವಿಯ ಅಥಣಿ ಪಟ್ಟಣದ ಹಲ್ಯಾಳ ರಸ್ತೆಯಲ್ಲಿರುವ ಎರಡಂತಸ್ತಿನ ಕಟ್ಟಡ ನೆಲಕ್ಕುರುಳಿದೆ. ಕಟ್ಟಡ ಬೀಳುವ ದೃಶ್ಯಗಳು ಸ್ಥಳೀಯರ ಮೊಬೈಲ್‌ನಲ್ಲಿ ಸೆರೆಯಾಗಿದೆ. ರಾಯಚೂರು ಜಿಲ್ಲೆ ಮಸ್ಕಿ ತಾಲೂಕಿನ ಅಡವಿಬಾವಿ ತಾಂಡದ ಸರ್ಕಾರಿ ಶಾಲೆ ಜಲಾವೃತವಾಗಿದೆ. ಚಿಕ್ಕಮಗಳೂರಿನ ಎನ್.ಆರ್ ಪುರ ತಾಲೂಕು ಆಸ್ಪತ್ರೆ ಸೋರುತ್ತಿದ್ದು, ಅಧಿಕಾರಿಗಳ ವಿರುದ್ಧ ಸ್ಥಳೀಯರು ಆಕ್ರೋಶ ಹೊರಹಾಕಿದ್ದಾರೆ. ಕರ್ನಾಟಕ ಕರಾವಳಿ ದಕ್ಷಿಣ ಕನ್ನಡದಲ್ಲಿ ಮಳೆ ಬಿರುಸುಗೊಂಡಿದ್ದು, ಹಲವು ಕಡೆ ಹಾನಿಯಾಗಿದೆ. ಮೂಡುಬಿದಿರೆಯ ಮಿಜಾರಿನಲ್ಲಿ ರಾಷ್ಟ್ರೀಯ ಹೆದ್ದಾರಿಯ ರಸ್ತೆಯ ಒಂದು ಬದಿ ಕೊಚ್ಚಿಹೋಗಿದೆ.

ಈ ಮಧ್ಯೆ, ಮುಂಗಾರು ಪ್ರವೇಶ ಹಿನ್ನೆಲೆ ಬೀದರ್ ಜಿಲ್ಲೆಯ ರೈತರು ಬಿತ್ತನೆಗೆ ಸಕಲ ಸಿದ್ಧತೆ ನಡೆಸಿದ್ದು, ಸೊಸೈಟಿಗಳಲ್ಲಿ ಗೊಬ್ಬರ ಸಿಗದೇ ಪರದಾಡುತ್ತಿದ್ದಾರೆ.

# ರಾಜ್ಯಪಾಲರ ಭಾಷಣ ಬೇರೆ ಸರ್ಕಾರಗಳನ್ನು ಟೀಕಿಸುವಂತಿರಬಾರದು

### ಅಭಿವೃದ್ಧಿ ಯೋಜನೆಗಳ ದಿಕ್ಸೂಚಿ

• ಉದಯವಾಹಿನಿ, ಬೆಂಗಳೂರು

ಹೊಸ ಸರ್ಕಾರ ರಚನೆ ಮತ್ತು ವರ್ಷದ ಮೊದಲ ನಡೆಯುವ ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರ ಭಾಷಣ ಆಯಾ ರಾಜ್ಯಗಳ ಮುಂದಿನ ಒಂದು ವರ್ಷದಲ್ಲಿ ಹಮ್ಮಿಕೊಳ್ಳುವ ಅಭಿವೃದ್ಧಿ ಯೋಜನೆಗಳ ದಿಕ್ಸೂಚಿ ಭಾಷಣವಾಗಬೇಕೆ ವಿನಃ ಮತ್ತೊಂದು ರಾಜ್ಯ ಇಲ್ಲವೇ ಕೇಂದ್ರ ಸರ್ಕಾರವನ್ನು ಟೀಕಿಸುವಂತಿರಬಾರದು ಎಂದು ಕೇರಳ ಮತ್ತು ತಮಿಳುನಾಡು ರಾಜ್ಯಪಾಲ ರಾಜೇಂದ್ರ ಅರಳೇಕರ್ ತಿಳಿಸಿದ್ದಾರೆ.

ನಗರದ ಸರ್ಕಾರಿ ನೌಕರರ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಮಾಜಿ ಕಾರ್ಯದರ್ಶಿ ಧ್ರುವ ಕುಮಾರ್ ಅವರ ರಚಿಸಿರುವ ಸಂಸತ್ತಿನ ಹಕ್ಕು ಬಾಧ್ಯತಾ ನೋಟಗಳು ಎಂಬ ಪುಸ್ತಕ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ರಾಜ್ಯಗಳಲ್ಲಿ ಹೊಸ ಸರ್ಕಾರಗಳು ರಚನೆಯಾದ ಸಂದರ್ಭ ಮತ್ತು ಪ್ರತಿ ವರ್ಷದ ಆರಂಭದಲ್ಲಿ ನಡೆಯುವ ಜಂಟಿ ಅಧಿವೇಶನದಲ್ಲಿ, ಆ ರಾಜ್ಯವು ಮುಂದಿನ ಒಂದು ವರ್ಷದಲ್ಲಿ ಜನಪರ ಯೋಜನೆಗಳನ್ನು ಹಮ್ಮಿಕೊಳ್ಳುವ ಕುರಿತಂತೆ ಮಾಹಿತಿಯನ್ನು ನೀಡುವಂತಿರಬೇಕು. ಆದರೆ, ಪ್ರಸ್ತುತ ಕೇಂದ್ರ ಸರ್ಕಾರ ಇಲ್ಲವೇ ನೆರೆ ರಾಜ್ಯಗಳ ವಿರುದ್ಧವಾಗಿ ಟೀಕಿಸುವ ಕಾರ್ಯ ನಡೆಯುತ್ತಿದೆ. ಇದು ಬದಲಾಗಬೇಕಾದ ಅಗತ್ಯವಿದೆ ಎಂದು ತಿಳಿಸಿದರು.

ರಾಜ್ಯಪಾಲರ ಭಾಷಣವು ಸರ್ಕಾರದ ಯೋಜನೆಗಳನ್ನು ವಿವರಿಸಬೇಕು ಎಂಬುದಾಗಿ ಸಂವಿಧಾನದಲ್ಲಿ ತಿಳಿಸಲಾಗಿದೆ. ಶಾಸನ ಸಭೆಗಳ ಮುಖ್ಯ ಉದ್ದೇಶವೇ ಅಭಿವೃದ್ಧಿಯ ಕುರಿತು ಚರ್ಚಿಸುವುದಾಗಿದೆ. ಒಂದು ಸರ್ಕಾರ ಮತ್ತೊಂದು ಸರ್ಕಾರದೊಂದಿಗೆ ಉತ್ತಮ ಸಂಬಂಧಗಳನ್ನು ಹೊಂದಿರಬೇಕು. ಆದರೆ, ಪ್ರಸ್ತುತ ಅದಕ್ಕೆ ತದ್ವಿರುದ್ಧವಾಗಿ ನಡೆಯುತ್ತಿದೆ ಎಂದು ಹೇಳಿದರು. ಒಂದು ವೇಳೆ ಮತ್ತೊಂದು ಸರ್ಕಾರವನ್ನು ಟೀಕಿಸಬೇಕು ಎಂದಾದರೆ ರಾಜಕೀಯ ಪಕ್ಷಗಳ ವೇದಿಕೆಗಳಲ್ಲಿ ಅದನ್ನು ಮಾಡಬಹುದು. ಅದಕ್ಕೆ ಬದಲಾಗಿ ಶಾಸನ ರಚನಾ ಸಭೆಯಲ್ಲಿ ಆ ಕಾರ್ಯ ಮಾಡುವುದಕ್ಕೆ ಅವಕಾಶವಿಲ್ಲ ಎಂದರು.

ರಾಜ್ಯ ಸರ್ಕಾರ ರಚನೆ ಮಾಡುವುದಕ್ಕಾಗಿ ಅಗತ್ಯ ಸಂಖ್ಯಾಬಲ ಇದೆ ಎಂಬ ಅಂಶದ ಬಗ್ಗೆ ರಾಜ್ಯಪಾಲರಿಗೆ ಭರವಸೆಯಿದ್ದಾಗ ಮಾತ್ರ ಸರ್ಕಾರ ರಚನೆಗೆ ಅವಕಾಶ ನೀಡಬೇಕು ಎಂದು ಎಸ್.ಆರ್.ಬೊಮ್ಮಾಯಿ ಪ್ರಕರಣದಲ್ಲಿ ಸ್ಪಷ್ಟವಾಗಿ ತಿಳಿಸಲಾಗಿದೆ. ಕರ್ನಾಟಕ, ಮಹಾರಾಷ್ಟ್ರ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಸಂಖ್ಯಾಬಲವಿಲ್ಲದಿದ್ದರೂ, ಸರ್ಕಾರ ರಚನೆಗೆ ಅನುಮತಿ ನೀಡಲಾಗಿತ್ತು. ಬಳಿಕ ಕೆಲವೇ ದಿನಗಳಲ್ಲಿ ಸರ್ಕಾರ ಬಿದ್ದಿತ್ತು. ಅದೇ ರೀತಿಯಲ್ಲಿ ತಮಿಳುನಾಡಿನಲ್ಲಿ ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಅತಿ ಹೆಚ್ಚು ಸಂಖ್ಯೆ ಹೊಂದಿರುವ ಪಕ್ಷಕ್ಕೆ ಅಧಿಕಾರ ರಚನೆಗೆ ಅವಕಾಶ ನೀಡಬೇಕು ಎಂಬ ಮನವಿ ಇತ್ತು. ಇದನ್ನು ತಿರಸ್ಕರಿಸಿ ಸಂಪೂರ್ಣ ಸಂಖ್ಯಾ ಬಲದೊಂದಿಗೆ ಮತ್ತು ಬೆಂಬಲಿತ ಪಕ್ಷಗಳ ಪತ್ರದೊಂದಿಗೆ ಬರುವುದಕ್ಕೆ ಸೂಚನೆ ನೀಡಿದ್ದೆ. ಈ ಅಭಿಪ್ರಾಯದ ಕುರಿತಂತೆ ಹಲವು ಟೀಕೆಗಳು ಬಂದಿದ್ದವು. ಅದಕ್ಕೆ ತಲೆ ಕೆಡೆಸಿಕೊಳ್ಳಲಿಲ್ಲ. ನಾವೆಲ್ಲರೂ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿದ್ದು, ಅದನ್ನು ಚಾಚೂ ತಪ್ಪದೇ ಪಾಲಿಸಬೇಕು ಎಂದು ತಿಳಿಸಿದರು.

ಉದಯವಾಹಿನಿ ಚಿತ್ರ




### ಜನಪ್ರತಿನಿಧಿಗಳಿಗೆ ಶಿಕ್ಷಣ ಅತ್ಯಗತ್ಯ

**ನಮ್ಮನ್ನಾಳುವುದಕ್ಕಾಗಿ ನಾವು ಆಯ್ಕೆ ಮಾಡುವ ಹಲವು ಜನಪ್ರತಿನಿಧಿಗಳಿಗೆ ಕನಿಷ್ಠ ಓದುವುದು ಮತ್ತು ಬರೆಯುವುದಕ್ಕೂ ಬರುವುದಿಲ್ಲ. ನಮ್ಮನ್ನು ಶಾಸನ ಸಭೆಗಳಲ್ಲಿ ಪ್ರತಿನಿಧಿಸುವವರಿಗೆ ಕನಿಷ್ಠ ಶೈಕ್ಷಣಿಗೆ ಅರ್ಹತೆ ಬೇಡವೇ?, ಕಂಡಿತವಾಗಿಯೂ ಇರಬೇಕಲ್ಲವೇ. ಕಾರು ಚಾಲಕನಿಗೆ ಅರ್ಹತೆ ಇದೆ. ನಮ್ಮ ಕಚೇರಿಯ ಜವಾನನಿಗೂ ಶೈಕ್ಷಣಿಕ ಅರ್ಹತೆ ಕೇಳುತ್ತೇವೆ. ಆದರೆ, ನಮ್ಮ ಜನಪ್ರತಿನಿಧಿಗಳಿಗೆ ಅದು ಬೇಡವೇ?. ಆದರೂ ನಮ್ಮ ಜನ ಕೇಳುತ್ತಿಲ್ಲ. ಇದು ಏಕೆ ಹೀಗಾಗುತ್ತಿದೆ ಎಂದು ಪ್ರಶ್ನಿಸಿದರು. ನಮ್ಮ ಜನಪ್ರತಿನಿಧಿಗಳು ರಸ್ತೆ ಬದಿಯಲ್ಲಿ ನೀಡುವ ಭಾಷಣವನ್ನೇ ಶಾಸನ ಸಭೆಯಗಳಲ್ಲಿಯೂ ಮಾಡುತ್ತಾರೆ. ಅಸಾಂವಿಧಾನಿಕ ಪದಗಳನ್ನು ಬಳಸುತ್ತಿದ್ದಾರೆ. ಅದನ್ನು ತಡೆಯಲು ನಮ್ಮ ಜನರಿಗೆ ಅವಕಾಶವಿದೆ. ಹೀಗಾಗಿ ನಮ್ಮ ಜನಪ್ರತಿನಿಧಿಗಳಾಗುವವರಿಗೆ ಕನಿಷ್ಠ ಶೈಕ್ಷಣಿಕ ಅರ್ಹತೆ ಬೇಕಾಗಿದೆ. ಅಲ್ಲದೆ, ಶಾಸನ ಸಭೆಗಳಲ್ಲಿ ಹೇಗೆ ನಡೆದುಕೊಳ್ಳಬೇಕು. ಚರ್ಚೆ ಮಾಡುವುದು ಮತ್ತು ಪ್ರಶ್ನೆಗಳನ್ನು ಕೇಳುವುದಕ್ಕೆ ಸಂಬಂಧಿಸಿದಂತೆ ನಿಯಮಗಳನ್ನು ಅನುಸರಿಸುವ ಕುರಿತು ಶಾಸಕರಿಗೆ ತರಬೇತಿ ನೀಡಬೇಕಾದ ಅಗತ್ಯವಿದೆ ಎಂದು ಹೇಳಿದರು.**

# ಜನರಲ್ಲಿ ಜಿಎಸ್‌ಟಿ ಅರಿವು ಹೆಚ್ಚಲಿ: ಜಂಟಿ ಆಯುಕ್ತ ಎಂ. ಬಾಲಸುಬ್ರಹ್ಮಣ್ಯ

• ಉದಯವಾಹಿನಿ,ಮೈಸೂರು



ಉದಯವಾಹಿನಿ ಚಿತ್ರ

ಒಂದು ದೇಶ, ಒಂದು ತೆರಿಗೆ' ಪರಿಕಲ್ಪನೆಯಲ್ಲಿ ದೇಶದಾದ್ಯಂತ ಏಕರೂಪ ಸರಕು ಮತ್ತು ಸೇವೆಗಳ ತೆರಿಗೆ (ಜಿಎಸ್‌ಟಿ) ಜಾರಿಯಲ್ಲಿದ್ದು, ಈ ಬಗ್ಗೆ ವರ್ತಕರು, ಜನಸಾಮಾನ್ಯರಲ್ಲೂ ಅರಿವು ಹೆಚ್ಚಬೇಕಿದೆ' ಎಂದು ವಾಣಿಜ್ಯ ತೆರಿಗೆ ಇಲಾಖೆ ಜಂಟಿ ಆಯುಕ್ತ (ಆಡಳಿತ) ಎಂ. ಬಾಲಸುಬ್ರಹ್ಮಣ್ಯ ಹೇಳಿದರು.

ಇಲ್ಲಿನ ಟಿ.ಕೆ. ಬಡಾವಣೆಯ ಬ್ರಹ್ಮಸ್ಥಾನ ಕಲ್ಯಾಣ ಮಂಟಪದಲ್ಲಿ ಶನಿವಾರ ತೆರಿಗೆ ಸಲಹೆಗಾರ ಎಸ್. ಪ್ರಸಾದ್ ಅವರ 'ಜಿಎಸ್‌ಟಿ ಆ್ಯಂಡ್ ನ್ಯಾಚುರಲ್ ಜಸ್ಟಿಸ್: ಎ ಪ್ರಾಕ್ಟಿಷನರ್ ಪರ್ಸ್ಪೆಕ್ಟಿವ್' ಪುಸ್ತಕ ಬಿಡುಗಡೆಕಾರ್ಯಕ್ರಮದಲ್ಲಿ ಮಾತನಾಡಿದರು.

'ಜಿಎಸ್‌ಟಿ ಅರ್ಥೈಸಿಕೊಳ್ಳುವುದುಸರಳವಲ್ಲ. ಉಳಿದ ಸಾಹಿತ್ಯಕ್ಕೆ ಹೋಲಿಸಿದರೆ ಈ ಬಗ್ಗೆ ಬಂದಿರುವ ಪುಸ್ತಕಗಳೂ ಕಡಿಮೆ. ಸರಳ, ಸ್ಪಷ್ಟ, ನಿಖರ ಮಾಹಿತಿ ಒಳಗೊಂಡಿರುವ ಪುಸ್ತಕಗಳು ಬಂದರೆ ತೆರಿಗೆದಾರರಿಗೆ ಅನುಕೂಲವಾಗುತ್ತದೆ. ಅಧಿಕಾರಿಗಳು ಮತ್ತು ಜಿಎಸ್‌ಟಿ ಕುರಿತು ವಕಾಲತ್ತು ವಹಿಸುವ ವಕೀಲರ ಜ್ಞಾನವೂ ವಿಸ್ತಾರವಾಗುತ್ತದೆ' ಎಂದರು.

6 ಎಐ ನಂಬದಿರಿ: ಕೆಎಟಿ ಸದಸ್ಯ, ಜಗನ್ನಾಥ ಸಾಗರ್, ' ಕೃತಕ ಬುದ್ಧಿಮತ್ತೆ ತಂತ್ರಜ್ಞಾನವು ನೀಡುವ ಕೇಸ್ ಲಾಗಳನ್ನು ಪರಿಶೀಲಿಸದೇ ನಂಬದಿರಿ' ಎಂದು ಸಲಹೆ ನೀಡಿದರು. 'ಈಚೆಗಷ್ಟೇ ಸುಪ್ರೀಂ ಕೋರ್ಟ್ ಕಾನೂನು ವಿಚಾರದಲ್ಲಿ ಎ.ಐ. ಬಳಕೆ ಬಗ್ಗೆ ಹಲವು ನಿರ್ಬಂಧ ಹೇರಿದ್ದು, ಕಾನೂನು ವಲಯದ ಅಭಿಪ್ರಾಯವನ್ನೂ ಕೇಳಿದೆ. ಈ ವಲಯದಲ್ಲಿ ಕೆಲಸ ಮಾಡುವವರು ನೈಜ ಸಂಗತಿಗಳಿಗೆ ಆದ್ಯತೆ ನೀಡಬೇಕು. ಅದು ಸರಿಯಿದ್ದರಷ್ಟೇ ಯಾವುದೇ ತೀರ್ಪುಗಳನ್ನು ನ್ಯಾಯಯುತವಾಗಿ ಕೊಡಲು ಸಾಧ್ಯ' ಎಂದರು. ಕೆಎಲ್‌ಟಿ ಪ್ರಕಾಶಕರಾದ ಸತ್ಪಾಲ್ ಪುಲನಿ, ವಿನಾಯಕ್ ಪುಲನಿ, ಕೆಎಸ್ ಟಿಪಿಎ ಅಧ್ಯಕ್ಷ ವಿಷ್ಣುತೀರ್ಥ ಜಮಖಂಡಿ, ಎಂಡಿಟಿಪಿಎ ಅಧ್ಯಕ್ಷ ಬಿ.ಎಸ್.ವೆಂಕಟರಾಮು, ಲೇಖಕ ಎಸ್. ಪ್ರಸಾದ್ ಇದ್ದರು.

# ಚೇತರಿಕೆ ಕಂಡ ಪ್ರವಾಸೋದ್ಯಮ; ಜಿಲ್ಲೆಗೆ ಪ್ರವಾಸಿಗರ ದಾಂಗುಡಿ

• ಉದಯವಾಹಿನಿ, ಚಾಮರಾಜನಗರ

ಪ್ರಸಿದ್ಧ ಧಾರ್ಮಿಕ ಯಾತ್ರಾ ಸ್ಥಳಗಳು, ಹುಲಿ ಸಂರಕ್ಷಿತ ಪ್ರದೇಶಗಳು, ವನ್ಯಜೀವಿ ಧಾಮಗಳು, ಜಲಪಾತಗಳು, ಐತಿಹಾಸಿಕ ಸ್ಥಳಗಳನ್ನು ಹೊಂದಿರುವ ಚಾಮರಾಜನಗರ ಜಿಲ್ಲೆಗೆ ಭೇಟಿನೀಡುವ ಪ್ರವಾಸಿಗರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. ಕೋವಿಡ್ ಸಂದರ್ಭದಲ್ಲಿ ಮಂಕಾಗಿದ್ದ ಪ್ರವಾಸೋದ್ಯಮ ಕ್ಷೇತ್ರ, ಬಳಿಕ ಗರಿಗೆದರಿದ್ದು ಪ್ರತಿವರ್ಷ 1 ಕೋಟಿಗೂ ಹೆಚ್ಚು ಪ್ರವಾಸಿಗರು ಜಿಲ್ಲೆಯ ಪ್ರವಾಸಿ ತಾಣಗಳಿಗೆ ಬರುತ್ತಿದ್ದಾರೆ. ಪ್ರವಾಸೋದ್ಯಮ ಇಲಾಖೆಯ ಅಂಕಿ ಅಂಶಗಳ ಪ್ರಕಾರ 2024ರಲ್ಲಿ 1.6 ಕೋಟಿಗೂ ಹೆಚ್ಚು ಪ್ರವಾಸಿಗರು ಜಿಲ್ಲೆಗೆ ಭೇಟಿ ನೀಡಿದ್ದಾರೆ, 2025ರಲ್ಲಿ 16.14 ಕೋಟಿ, 2026ರಲ್ಲಿ ಮಾರ್ಚ್ ಅಂತ್ಯಕ್ಕೆ 30 ಲಕ್ಷ ಪ್ರವಾಸಿಗರು ಬಂದಿದ್ದಾರೆ. ಅಭಿವೃದ್ಧಿಯಲ್ಲಿ ತೀರಾ ಹಿಂದುಳಿದ ಜಿಲ್ಲೆಯಾದರೂ ಪ್ರಾಕೃತಿಕ, ಧಾರ್ಮಿಕ ಹಾಗೂ ಜನಪದೀಯವಾಗಿ ಶ್ರೀಮಂತವಾಗಿರುವ ಜಿಲ್ಲೆಗೆ ಬರುವ ಪ್ರವಾಸಿಗರ ಸಂಖ್ಯೆ ಗಣನೀಯ ಪ್ರಮಾಣದಲ್ಲಿ ಹೆಚ್ಚಳವಾಗುತ್ತಿರುವುದು ಜಿಲ್ಲೆಯ ಆರ್ಥಿಕತೆಯ ಅಭಿವೃದ್ಧಿ ದೃಷ್ಟಿಯಿಂದ ಸಕಾರಾತ್ಮಕ ಬೆಳವಣಿಗೆ ಎಂದೇ ವಿಶ್ಲೇಷಿಸಲಾಗುತ್ತಿದೆ.

**ಪ್ರವಾಸಿಗರ ಸಂಖ್ಯೆ ಹೆಚ್ಚಲು ಕಾರಣ:** ಪ್ರಾಕೃತಿಕವಾಗಿ ಸಂಪದ್ಭರಿತವಾಗಿರುವ ಜಿಲ್ಲೆಯಲ್ಲಿ ಬಂಡೀಪುರ ಹಾಗೂ ಬಿಳಿಗಿರಿ ರಂಗನಾಥ ಹುಲಿ ಸಂರಕ್ಷಿತ ಪ್ರದೇಶ, ಕಾವೇರಿ ಹಾಗೂ ಮಲೆ ಮಹದೇಶ್ವರ ವನ್ಯಜೀವಿ ಧಾಮಗಳು ಇದ್ದು, ರಾಜ್ಯದಲ್ಲೇ ಅತಿ ಹೆಚ್ಚು ಹುಲಿಗಳು ಹಾಗೂ ಆನೆಗಳ ಆವಾಸ ಇರುವ ಜಿಲ್ಲೆ ಎಂಬ ಹೆಗ್ಗಳಿಕೆಯನ್ನೂ ಹೊಂದಿದೆ. ಅಪರೂಪದ ಜೀವವೈವಿಧ್ಯಗಳ ಆಶ್ರಯ ತಾಣವಾಗಿರುವ, ಒಟ್ಟು ಭೌಗೋಳಿಕ ಭೂಭಾಗದ ಪೈಕಿ ಶೇ50ಕ್ಕಿಂತ ಹೆಚ್ಚು ಅರಣ್ಯವೇ ತುಂಬಿರುವ ಜಿಲ್ಲೆಯ ಪ್ರಾಕೃತಿಕ ಸೊಬಗನ್ನು ಸವಿಯಲು ಪ್ರವಾಸಿಗರು ಉತ್ಸಾಹ ತೋರುತ್ತಿದ್ದಾರೆ. 2024ರಲ್ಲಿ 1.41ಲಕ್ಷ ಪ್ರವಾಸಿಗರು ಬಂಡೀಪುರ ಅರಣ್ಯದಲ್ಲಿ ಸಫಾರಿ ಮಾಡಿದ್ದು, 2025ರಲ್ಲಿ ಕೇವಲ 10 ತಿಂಗಳಲ್ಲಿ 2.81 ಲಕ್ಷ ಪ್ರವಾಸಿಗರು ಸಫಾರಿ ಮಾಡಿದ್ದಾರೆ. ಇದೀಗ ಹೆಚ್ಚುವರಿಯಾಗಿ ಹನೂರು ತಾಲ್ಲೂಕಿನ ಮಲೆಮಹದೇಶ್ವರ ವನ್ಯಜೀವಿಧಾಮದ ಹನೂರು ಬಫರ್ ವಲಯ ಹಾಗೂ ಪಿ.ಜಿ.ಪಾಳ್ಯ ವಲಯದಲ್ಲೂ ಸಫಾರಿ ಆರಂಭವಾಗಿದ್ದು ಪ್ರವಾಸೋದ್ಯಮ ಕ್ಷೇತ್ರದ ಅಭಿವೃದ್ಧಿಗೆ ಪೂರಕವಾಗಿದೆ.



ಉದಯವಾಹಿನಿ ಚಿತ್ರ



### ಸೌಕರ್ಯಗಳ ಕೊರತೆ

ಒಂದೆಡೆ ಜಿಲ್ಲೆಗೆ ಬರುವ ಪ್ರವಾಸಿಗರ ಸಂಖ್ಯೆ ಹೆಚ್ಚಾಗುತ್ತಿದ್ದರೂ ಪ್ರವಾಸಿತಾಣಗಳಲ್ಲಿ ಮೂಲಸೌಕರ್ಯಗಳ ಕೊರತೆ ಎದ್ದು ಕಾಣುತ್ತಿದೆ. ವನ್ಯಜೀವಿ ಧಾಮ ಹಾಗೂ ಹುಲಿ ಸಂರಕ್ಷಿತ ಪ್ರದೇಶದೊಳಗೆ ಇರುವ ಧಾರ್ಮಿಕ ಕ್ಷೇತ್ರಗಳಲ್ಲಿ ವಾಸ್ತವ್ಯ, ಹೋಟೆಲ್‌ಗಳ ನಿರ್ಮಾಣಕ್ಕೆ ಅರಣ್ಯ ಕಾನೂನುಗಳು ಅಡ್ಡಿಯಾಗಿವೆ. ಕ್ಷೇತ್ರಕ್ಕೆ ಸಂಪರ್ಕಿಸುವ ರಸ್ತೆಗಳ ವಿಸ್ತರಣೆ ಹಾಗೂ ಅಭಿವೃದ್ಧಿಗೂ ತೊಡಕಾಗಿದೆ.

### ಪ್ರವಾಸಿತಾಣ ಪ್ರಚಾರದ ಕೊರತೆ

ಜಿಲ್ಲೆಯಲ್ಲಿ ಯಾವೆಲ್ಲ ಪ್ರವಾಸಿತಾಣಗಳು ವೀಕ್ಷಣೆಗೆ ಲಭ್ಯವಿದೆ, ಏನೆಲ್ಲ ಸೌಲಭ್ಯಗಳು ಇವೆ ಎಂಬ ಸಮರ್ಪಕ ಮಾಹಿತಿ ದೊರಕುತ್ತಿಲ್ಲ, ಜಿಲ್ಲೆಯ ಆಯಕಟ್ಟಿನ ಜಾಗಗಳಲ್ಲಿ ಪ್ರವಾಸೋದ್ಯಮ ಸ್ಥಳಗಳ ಕುರಿತು ಮಾಹಿತಿ ಫಲಕಗಳು ಕಾಣಸಿಗುವುದಿಲ್ಲ, ಹೋಟೆಲ್, ರೆಸಾರ್ಟ್, ಲಾಡ್ಜ್‌ಗಳಲ್ಲೂ ಪ್ರವಾಸಿತಾಣಗಳ ಬಗ್ಗೆ ಪ್ರಚಾರ ನಡೆಯುತ್ತಿಲ್ಲ. ಪ್ರವಾಸಿ ತಾಣಗಳಿಗೆ ಸಮರ್ಪಕ ಸಾರಿಗೆ ವ್ಯವಸ್ಥೆಯಾಗಲಿ, ಪ್ರವಾಸಿತಾಣಗಳ ಬಳಿ ವಾಸ್ತವ್ಯಕ್ಕೆ ಸರಿಯಾದ ವ್ಯವಸ್ಥೆಗಳು ಇಲ್ಲ ಎಂಬ ದೂರುಗಳು ವ್ಯಾಪಕವಾಗಿವೆ.

### ಮಾದಪ್ಪನ ಸನ್ನಿಧಿಗೆ ಕೋಟ್ಯಂತರ ಭಕ್ತರು

ರಾಜ್ಯದಲ್ಲಿ ಅತಿ ಹೆಚ್ಚು ಆದಾಯ ತರುವ ದೇಗುಲಗಳ ಪೈಕಿ ಹನೂರು ತಾಲ್ಲೂಕಿನ ಮಲೆ ಮಹದೇಶ್ವರನ ದೇವಾಲಯವೂ ಒಂದು. 77 ಮಲೆಗಳ ಒಡೆಯ ಮಾದಪ್ಪನ ಕ್ಷೇತ್ರಕ್ಕೆ ಭಕ್ತರ ದಂಡೇ ಹರಿದು ಬರುತ್ತಿದೆ. 2024ರಲ್ಲಿ 76.28 ಲಕ್ಷ, 2025ರಲ್ಲಿ 1.06 ಕೋಟಿ, 2026ರ ಏಪ್ರಿಲ್ ಅಂತ್ಯಕ್ಕೆ 28 ಲಕ್ಷ ಮಂದಿ ಮಾದಪ್ಪನ ದರ್ಶನ ಪಡೆದಿದ್ದಾರೆ. ರಾಜ್ಯ ಸರ್ಕಾರದ ಶಕ್ತಿ ಯೋಜನೆ ಜಾರಿಯಾದ ಬಳಿಕ ಕ್ಷೇತ್ರಕ್ಕೆ ಬರುವ ಭಕ್ತರ ಸಂಖ್ಯೆ ದುಪ್ಪಟ್ಟಾಗಿದೆ ಎನ್ನುತ್ತಾರೆ ಮಲೆ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಿದ ಅಧಿಕಾರಿಗಳು.

### ರಂಗನಾಥನ ದರ್ಶನಕ್ಕೂ ಭಕ್ತಸಾಗರ

**ಹಿಮದಿಂದ ಆವೃತ್ತವಾಗಿರುವ, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶಕ್ಕೆ ಹೊಂದಿಕೊಂಡಿರುವ ಗುಂಡ್ಲುಪೇಟೆ ತಾಲ್ಲೂಕಿನ ಹಿಮವದ್ ಗೋಪಾಲಸ್ವಾಮಿ ದೇವಸ್ಥಾನ ಹಾಗೂ ಯಳಂದೂರು ತಾಲ್ಲೂಕಿನ ಬಿಳಿಗಿರಿ ರಂಗನಾಥ ಸ್ವಾಮಿ ದೇವಸ್ಥಾನ ಅಪಾರ ಸಂಖ್ಯೆಯ ಭಕ್ತರನ್ನು ಸೆಳೆಯುತ್ತಿದೆ.**

**ಕಡಿದಾದ ಅರಣ್ಯ ಮಾರ್ಗದೊಳಗೆ ಬೆಟ್ಟದ ಮೇಲೆ ವಿರಾಜಮಾನವಾಗಿರುವ ಗೋಪಾಲಸ್ವಾಮಿ ಹಾಗೂ ಬಿಳಿಗಿರಿ ರಂಗನಾಥನನ್ನು ನೋಡಲು ನಾಡಿನ ಮೂಲೆ ಮೂಲೆಗಳಿಂದ ಭಕ್ತರು ಬರುತ್ತಾರೆ. ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ 2024ರಲ್ಲಿ 5.65 ಲಕ್ಷ, 2025ರಲ್ಲಿ 7.50 ಲಕ್ಷ ಹಾಗೂ 2026ರ ಏಪ್ರಿಲ್ ಅಂತ್ಯಕ್ಕೆ 2.72 ಲಕ್ಷ ಭಕ್ತರು ಬಂದಿದ್ದಾರೆ. ಬಿಳಿಗಿರಿ ರಂಗನಾಥನ ದೇವಸ್ಥಾನಕ್ಕೆ 2024ರಲ್ಲಿ 12.20 ಲಕ್ಷ, 2025ರಲ್ಲಿ ಬರೋಬ್ಬರಿ 29.51 ಲಕ್ಷ ಹಾಗೂ 2026ರ ಏಪ್ರಿಲ್ ಅಂತ್ಯದವರೆಗೆ 4.17 ಲಕ್ಷ ಭಕ್ತರು ರಂಗನಾಥನ ದರ್ಶನ ಪಡೆದಿದ್ದಾರೆ.**

**ಇದಲ್ಲದೆ ಭರಚುಕ್ಕಿ ಜಲಪಾತ, ಹುಲುಗನಮರಡಿ ವೆಂಕಟರಮಣಸ್ವಾಮಿ ದೇವಸ್ಥಾನ, ಮಧ್ಯರಂಗನಾಥ ಸ್ವಾಮಿ ದೇಗುಲ, ಒಡೆಯರ ಪಾಳ್ಯದಲ್ಲಿರುವ ಟಿಬೇಟಿಯನ್ ಸೆಟ್ಲಮೆಂಟ್ ಕ್ಯಾಂಪ್‌ಗೆ ಭೇಟಿನೀಡುವ ಪ್ರವಾಸಿಗರ ಸಂಖ್ಯೆಯೂ ಏರಿಕೆಯಾಗಿದೆ.**

# ತಾಲ್ಲೂಕು ಘಟಕಕ್ಕೆ ಮಾದರ ಮಹಾಸಭಾಗೆ ನೂತನ ಪದಾಧಿಕಾರಿಗಳ ಆಯ್ಕೆ

• ಉದಯವಾಹಿನಿ, ಮಳವಳ್ಳಿ



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ಕರ್ನಾಟಕ ಮಾದರ ಮಹಾಸಭಾದ ತಾಲ್ಲೂಕು ಘಟಕಕ್ಕೆ ನೂತನವಾಗಿ ಕಾರ್ಯಕಾರಿಣಿ ಸಮಿತಿ ಸದಸ್ಯರನ್ನು ಆಯ್ಕೆ ಮಾಡಲಾಯಿತು.

ಮಹಾಸಭಾದ ಜಿಲ್ಲಾ ಉಸ್ತುವಾರಿ ಎನ್.ಆರ್. ಚಂದ್ರಶೇಖರ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತಾಲ್ಲೂಕು ಘಟಕದ ನೂತನ ಅಧ್ಯಕ್ಷರಾಗಿ ಅಣ್ಣೆಕೊಪ್ಪಲು ಗ್ರಾಮದ ಚಿಕ್ಕನಿಂಗಯ್ಯ, ಉಪಾಧ್ಯಕ್ಷ-ಹಿಟ್ಟನಹಳ್ಳಿಕೊಪ್ಪಲು ಮುತ್ತುರಾಜು, ಪ್ರಧಾನ ಕಾರ್ಯದರ್ಶಿ-ಎಂ.ಎನ್. ರಾಚಪ್ಪ, ಖಜಾಂಚಿ-ಸಿದ್ದರಾಜು, ನಿರ್ದೇಶಕರಾಗಿ ಮಹೇಶ್, ಮಂಜು, ಸಿದ್ದರಾಜು, ಪ್ರಮೀಳಾ, ಎಸ್. ಜೆ.ಸಿದ್ದರಾಜು, ವಿಶೇಷ ಆಹ್ವಾನಿತರಾಗಿ ಕುಮಾರ್, ಸಿದ್ದರಾಜು, ಚಂದ್ರು, ಚಲುವರಾಜು, ಎಚ್.ಹರೀಶ್, ವೆಂಕಟೇಶ್, ಎಂ.ಆರ್.ರವಿ, ಮಹೇಶ್ ಅವರನ್ನು ನೇಮಕ ಮಾಡಲಾಯಿತು.

ಮಹಾಸಭಾದ ಜಿಲ್ಲಾ ಉಸ್ತುವಾರಿ ಎನ್. ಆರ್.ಚಂದ್ರಶೇಖರ್ ಮಾತನಾಡಿ, ಸಚಿವ ಕೆ.ಎಚ್. ಮುನಿಯಪ್ಪ ಅವರ ಸೂಚನೆಯಂತೆ ಮಾದರ ಒಕ್ಕೂಟದ ಎಲ್ಲಾ ಸಂಘಟನೆಗಳನ್ನು ಒಂದೆಡೆ ಸೇರಿ ನಮಗೆ ದೊರೆಯಬೇಕಾದ ಸೌಲಭ್ಯಗಳನ್ನು ಪಡೆಯುವ ನಿಟ್ಟಿನಲ್ಲಿ ಹೋರಾಟ ಮಾಡಲು ಒಂದೇ ವೇದಿಕೆಗೆ ಕರೆತರುವ ಪ್ರಯತ್ನ ಮಾಡಲಾಗುತ್ತಿದೆ ಎಂದು ಹೇಳಿದರು.

ನೂತನ ಅಧ್ಯಕ್ಷ ಚಿಕ್ಕನಿಂಗಯ್ಯ ಮಾತನಾಡಿ, ಮಾದರ ಸಮುದಾಯವನ್ನು ಒಗ್ಗೂಡಿಸಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹಿರಿಯ ಮಾರ್ಗದರ್ಶನದಲ್ಲಿ ಕೆಲಸ ಮಾಡಲಾಗುವುದು ಎಂದು ಹೇಳಿದರು. ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಚಾಮನಹಳ್ಳಿ ಮಂಜು, ಜಿಲ್ಲಾ ನಿರ್ದೇಶಕ ಬಾಳೆಹೊನ್ನಿಗ ಕುಮಾರ್, ಮುಖಂಡರಾದ ವೆಂಕಟೇಶ್, ಮಂಜು ಪಾಲ್ಗೊಂಡಿದ್ದರು.

## ರಸ್ತೆ ಅಭಿವೃದ್ಧಿ ಕಾಮಗಾರಿ ಪರಿಶೀಲನೆ

• ಉದಯವಾಹಿನಿ, ಮದ್ದೂರು

ನಗರದ ಹಳೇ ಗೊರವನಹಳ್ಳಿ ರಸ್ತೆ ಮುಖ್ಯ ರಸ್ತೆಗಳಲ್ಲಿ ಒಂದಾಗಿದ್ದು ನಡೆಯುತ್ತಿರುವ ರಸ್ತೆ ಅಭಿವೃದ್ಧಿ ಕಾಮಗಾರಿ ಉತ್ತಮ ಗುಣಮಟ್ಟವನ್ನು ಹೊಂದಿರಬೇಕು ಎಂದು ಅಧಿಕಾರಿಗಳಿಗೆ ಶಾಸಕ ಕೆ.ಎಂ. ಉದಯ್ ತಾಕೀತು ಮಾಡಿದರು. ಸುಮಾರು ಎರಡು ತಿಂಗಳಿಂದ ನಡೆಯುತ್ತಿರುವ ಗೊರವನಹಳ್ಳಿ ರಸ್ತೆ ಅಭಿವೃದ್ಧಿ ಕಾಮಗಾರಿಯ ಪರಿಶೀಲನೆಯನ್ನು ಶನಿವಾರ ನಡೆಸಿ ಅವರು ಮಾತನಾಡಿದರು. 'ಈ ರಸ್ತೆಯಲ್ಲಿ ಬರುವ ವಿದ್ಯುತ್ ಕಂಬಗಳನ್ನು ಸ್ಥಳಾಂತರ ಸೇರಿದಂತೆ ರಸ್ತೆಯಲ್ಲೇ ಇರುವ ಕೆಲವು ಮರಗಳ ತೆರವು, ರಸ್ತೆಯ ಮಧ್ಯೆ ಬರುವ ಕೆಲವು ಡೆಕ್‌ಗಳ ಕೆಲಸಗಳು ಬಾಕಿ ಇವೆ. ಇನ್ನುಳಿದಂತೆ ಕಾಮಗಾರಿ ಪ್ರಗತಿಯಲ್ಲಿದೆ' ಎಂದರು. ನಗರಸಭಾ ಪೌರಾಯುಕ್ತ ರಾಧಿಕಾ, ನೀರಾವರಿ ಇಲಾಖೆಯ ಅಧಿಕಾರಿ ನಾಗರಾಜ್, ಪಿಡಬ್ಲ್ಯೂಡಿ ಅಧಿಕಾರಿ ಹನುಮಂತು, ಒಳಚರಂಡಿ ಹಾಗೂ ಕುಡಿಯುವ ನೀರು ಮಂಡಳಿಯ ಅಧಿಕಾರಿ ನದಾಫ್, ಮುಖಂಡರಾದ ಶಿವರಾಮು, ಬೋರ್ವೆಲ್ ಪ್ರದೀಪ್, ಸಾಲರ್, ಪುರಸಭಾ ಮಾಜಿ ಸದಸ್ಯ ಸಚಿನ್ ಹಾಜರಿದ್ದರು.

# ಮನುಷ್ಯನ ದುರಾಸೆ; ವಿನಾಶದೆಡೆಗೆ ಪರಿಸರ: ಸಿವಿಲ್ ನ್ಯಾಯಾಧೀಶ

• ಉದಯವಾಹಿನಿ, ಪಾಂಡವಪುರ



ಉದಯವಾಹಿನಿ ಚಿತ್ರ

ಇತ್ತೀಚಿನ ದಿನಗಳಲ್ಲಿ ಮನುಷ್ಯನ ಆಸೆ ಮೀತಿಮೀರಿದ್ದು, ಪರಿಸರ ವಿನಾಶ ಮಾಡುವ ಕಡೆಗೆ ತೊಡಗಿದ್ದಾನೆ. ಹೀಗಾಗಿ ಮುಂದಿನ ದಿನಗಳಲ್ಲಿ ಕುಡಿಯುವ ನೀರು, ಆಮ್ಲಜನಕ ಸೇವನೆಗಾಗಿ ಯುದ್ಧ ನಡೆಯುವ ಸಾಧ್ಯತೆ ಇದೆ. ಆದ್ದರಿಂದ ಪ್ರತಿಯೊಬ್ಬರೂ ಪರಿಸರ ಸಂರಕ್ಷಣೆ ಮಾಡಬೇಕು' ಎಂದು ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶ ಆರ್.ಮಹೇಶ್ ಹೇಳಿದರು.

ತಾಲ್ಲೂಕಿನ ಕೆ.ಬೆಟ್ಟಹಳ್ಳಿ ಸರ್ಕಾರಿ ಶಾಲಾ ಆವರಣ ಹಾಗೂ ವಿನಾಯಕ ಎಜುಕೇಶನ್ ಟ್ರಸ್ಟ್ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಸಾಮಾಜಿಕ ಹಾಗೂ ವಲಯ ಅರಣ್ಯ ಇಲಾಖೆಗಳ ಸಹಯೋಗದಲ್ಲಿ ವಿಶ್ವ ಪರಿಸರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಮಾನವ ತನ್ನ ಅಗತ್ಯಗಳಿಗಿಂತಲೂ ಹೆಚ್ಚಾಗಿ ನೈಸರ್ಗಿಕ ಸಂಪನ್ಮೂಲಗಳನ್ನು ದುರುಪಯೋಗಪಡಿಸಿಕೊಂಡು ಅವುಗಳ ನಾಶಕ್ಕೆ ಮುಂದಾಗಿದ್ದಾನೆ. ಆದ್ದರಿಂದ ಪರಿಸರ ಸಮತೋಲನ ಹದಗೆಡುತ್ತಿದೆ. ಪರಿಸರದಲ್ಲಿನ ಗಾಳಿ, ನೀರು, ಬೆಳಕು ಮತ್ತು ಮಣ್ಣು ಅತ್ಯಮೂಲ್ಯವಾದ ಸಂಪನ್ಮೂಲಗಳಾಗಿದೆ. ಹೀಗಾಗಿ ಮುಂದಿನ ಪೀಳಿಗೆಗೆ ಅವುಗಳನ್ನು ಉಳಿಸಬೇಕಾದ ಅನಿವಾರ್ಯತೆ ಎದುರಾಗಿದೆ' ಎಂದು ತಿಳಿಸಿದರು.

'ಶಾಲಾ ಆವರಣದಲ್ಲಿ ವಿದ್ಯಾರ್ಥಿಗಳು ಗಿಡ ನೆಟ್ಟು ಬೆಳೆಸಬೇಕಿದೆ. ನಾವು ವೃಕ್ಷವನ್ನು ಬೆಳೆಸಿದರೆ ಅದು ನಮ್ಮನ್ನು ರಕ್ಷಣೆ ಮಾಡುತ್ತದೆ. 1972ರಲ್ಲಿ ವಿಶ್ವಸಂಸ್ಥೆ ಪರಿಸರ ಸಮ್ಮೇಳನ ಆಯೋಜಿಸಿತು. ಬಳಿಕ 1973ರಿಂದ ಪ್ರತಿ ವರ್ಷ ಪರಿಸರ ದಿನಾಚರಣೆ ಆಚರಿಸಿಕೊಂಡು ಬರಲಾಗುತ್ತಿದೆ' ಎಂದರು.

ಪ್ರಧಾನ ಸಿವಿಲ್ ನ್ಯಾಯಾಧೀಶೆ ಎಚ್.ಎಸ್.ಪೂಜಾ ಮಾತನಾಡಿ, 'ಪ್ರತಿಯೊಬ್ಬ ವಿದ್ಯಾರ್ಥಿಗಳು ಗಿಡಕ್ಕೆ ನೀರೆರೆದು ಪೋಷಿಸಬೇಕು. ಹೆಚ್ಚು ಮರಗಳನ್ನು ಕಡಿಯುತ್ತಿರುವುದರಿಂದ ಭೂಮಿ ಹಾಗೂ ನಮಗೆ ಸಾಕಷ್ಟು ಹಾನಿಯಾಗಿದೆ. ಅದರಲ್ಲೂ ಮುಂದಿನ ಪೀಳಿಗೆಗೆ ಇದರ ನೇರ ಪರಿಣಾಮ ಬೀರಲಿದೆ' ಎಂದು ಎಚ್ಚರಿಸಿದರು.

# ಸಮಸ್ಯೆಗಳ ಪರಿಹಾರಕ್ಕೆ ತಟ್ಟನೆ ನೆನಪಾಗುವುದು ಅಶಕ್ತರ ಆಸರೆ ಶೌರ್ಯ ವಿಪತ್ತು ನಿರ್ವಹಣಾ ತಂಡ

• ಉದಯವಾಹಿನಿ, ನಾಪೋಕ್ಲು



ಉದಯವಾಹಿನಿ ಚಿತ್ರ

ಬಿರುಸಿನ ಮಳೆ ಸುರಿದಾಗ ನಡೆದಾಡುವ ರಸ್ತೆಯಲ್ಲಿನ ಹೊಂಡಗಳಲ್ಲಿ ನೀರು ತುಂಬಿಕೊಂಡು ಸಂಚಾರ ದುಸ್ತರ, ಶಾಲೆಯ ಚಾವಣಿಯಲ್ಲಿ ಕಸ ಕಡ್ಡಿ ಸೇರಿಕೊಂಡು ಕೊಠಡಿಗಳಲ್ಲಿ ನೀರು ಜಿನುಗುತ್ತಿದೆ, ವೃದ್ಧರು ವಾಸಿಸುವ ಮನೆ ಸುಣ್ಣ ಬಣ್ಣವಿಲ್ಲದೇ ಕಳೆಗುಂದಿದ್ದು ಬಣ್ಣ ಬಳಿಯುವವರು ಇಲ್ಲ ಎಂಬ ಚಿಂತೆ, ಕಾವೇರಿ ನದಿ ಒಡಲಲ್ಲಿ ತ್ಯಾಜ್ಯ ತುಂಬಿ ಕಲುಷಿತಗೊಂಡ ನೀರು, ಚರಂಡಿ ವ್ಯವಸ್ಥೆ ಇಲ್ಲದೇ ಹರಿಯುವ ಮಳೆ ನೀರು, ಅನಾರೋಗ್ಯದಿಂದ ಬಳಲುವ ಕೂಲಿಕಾರ್ಮಿಕರು... ಇಂತಹ ನಿತ್ಯದ ಸಮಸ್ಯೆಗಳ ಪರಿಹಾರಕ್ಕೆ ತಟ್ಟನೆ ನೆನಪಾಗುವುದು ಶೌರ್ಯ ವಿಪತ್ತು ನಿರ್ವಹಣಾ ತಂಡ. ಬಡವರ, ಅಸಹಾಯಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಶೌರ್ಯ ತಂಡ ಹಲವು ಜನಪರ ಕಾರ್ಯಕ್ರಮಗಳನ್ನು ಮಾಡಿ ಮನ್ನಣೆ ಗಳಿಸುತ್ತಿದೆ. ಇಲ್ಲಿನ ಶೌರ್ಯ ತಂಡದ ಸದಸ್ಯರು ಬಡವರ ಸಮಸ್ಯೆಗಳಿಗೆ ಸ್ಪಂದಿಸುತ್ತ ತಮ್ಮ ಕೈಲಾದ ಸಹಾಯ ಮಾಡುತ್ತಾ ಸದ್ದಿಲ್ಲದೇ ಸೇವೆ ಮಾಡುತ್ತಿದ್ದಾರೆ. ಪ್ರಸ್ತುತ ತಂಡದಲ್ಲಿ 15 ಸದಸ್ಯರು ಬಿಡುವಿನ ದಿನಗಳಲ್ಲಿ ಅಗತ್ಯವುಳ್ಳವರಿಗೆ ನೆರವಿನ ಹಸ್ತ ಚಾಚುತ್ತಿದ್ದಾರೆ.

2019ರಲ್ಲಿ ಕೊಡಗಿನಲ್ಲಿ ಧಾರಾಕಾರ ಮಳೆಯಿಂದ ಪ್ರಾಕೃತಿಕ ವಿಕೋಪದಿಂದಾಗಿ ಜನರು ಸಂಕಷ್ಟ ಅನುಭವಿಸಿದಾಗ ಅವರ ನೆರವಿಗೆ ಧಾವಿಸಿದ್ದು ಶೌರ್ಯ ವಿಪತ್ತು ನಿರ್ವಹಣಾ ತಂಡ. ಡಾ.ವೀರೇಂದ್ರ ಹೆಗ್ಗಡೆ ಅವರ ಕನಸಿನ ಕೂಸಾದ ಶೌರ್ಯ ವಿಪತ್ತು ನಿರ್ವಹಣಾ ತಂಡ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಕರ್ನಾಟಕದಾದ್ಯಂತ ಕಾರ್ಯನಿರ್ವಹಿಸುತ್ತಿವೆ. ನಾಪೋಕ್ಲುವಿನ ಈ ತಂಡ ಹಲವು ಜನಪರ ಕಾರ್ಯಕ್ರಮಗಳಿಂದ ರಾಜ್ಯ ಮಟ್ಟದಲ್ಲಿ ಹೆಸರು ಮಾಡಿದೆ. ಜೂನ್ 5ರಂದು ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಮೀಪದ ಚೆರಿಯಪರಂಬುವಿನ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಹಣ್ಣಿನ ಗಿಡಗಳನ್ನು ನೆಟ್ಟು ಪರಿಸರ ಪೂರಕ ಕಾರ್ಯಕ್ರಮ ಮಾಡಿದ್ದಾರೆ. ಹಿಂದೂ ರುದ್ರಭೂಮಿಯಲ್ಲೂ 50 ವಿವಿಧ ಹಣ್ಣು ಮತ್ತು ಔಷಧಿ ಸಸ್ಯಗಳನ್ನು ನೆಡಲಾಯಿತು. ಈಚೆಗೆ ಕಾವೇರಿ ನದಿಯಲ್ಲಿನ ಮಾಲಿನ್ಯವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಪ್ಲಾಸ್ಟಿಕ್ ಕಸ ಕಡ್ಡಿಗಳನ್ನು ಹಾಕಿ ಸ್ವಚ್ಛಗೊಳಿಸಿದ್ದಾರೆ. ಸಮೀಪದ ಚೆರಿಯಪರಂಬು ಬಳಿಯ ರಸ್ತೆ ಚರಂಡಿ ಮೋರಿಗಳನ್ನು ಸ್ವಚ್ಛಗೊಳಿಸಿದ್ದಾರೆ. ಕಾವೇರಿ ನದಿ ದಡದ ಪ್ರದೇಶಗಳ ಇಕ್ಕೆಲಗಳಲ್ಲಿ ತುಂಬಿಕೊಂಡಿದ್ದ ಅಗಾಧ ಪ್ರಮಾಣದ ಕಸ ಕಡ್ಡಿಗಳನ್ನು ಹಾಗೂ ತ್ಯಾಜ್ಯಗಳನ್ನು ಸ್ವಚ್ಛಗೊಳಿಸಿ ಮಳೆ ನೀರು ಸರಾಗವಾಗಿ ಚರಂಡಿಯಲ್ಲಿ ಹರಿಯುವಂತೆ ಕೆಲಸ ನಿರ್ವಹಿಸಿ ಸಾರ್ವಜನಿಕರು ಹಾಗೂ ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟು ಗ್ರಾಮಸ್ಥರ ಪ್ರಶಂಸೆಗೆ ಪಾತ್ರರಾಗಿದ್ದಾರೆ. ಸಮೀಪದ ಬೇತು ಗ್ರಾಮದ ಬಲಮುರಿ ಪಾರಾಣೆ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಎರಡು ಬದಿಗಳಲ್ಲಿ ಬೇಲಿಗಳಲ್ಲಿ ಅಪಾರ ಪ್ರಮಾಣದಲ್ಲಿ ಬೆಳೆದಿದ್ದ ಮುಳ್ಳುಗಿಡಗಳನ್ನು ಕಡಿದು ಸಂಚಾರಕ್ಕೆ ಅನುವು ಮಾಡಿಕೊಟ್ಟಿದ್ದಾರೆ.

# ತಂತ್ರಜ್ಞಾನ ಅಳವಡಿಕೆಗೆ ಯುವಕರಿಗೆ ಮುಕ್ತ ಆಹ್ವಾನ : ಗೋವಿನಾಯಕ್

• ಉದಯವಾಹಿನಿ,ಗುಂಡ್ಲುಪೇಟೆ



ಉದಯವಾಹಿನಿ ಚಿತ್ರ

ರಾಷ್ಟ್ರೀಯ ತಂತ್ರಜ್ಞಾನ ದಿನವು ಕೇವಲ ವಿಜ್ಞಾನಿಗಳು ಹಾಗೂ ಎಂಜಿನಿಯರ್ ಗೆ ಸೀಮಿತವಾದುದಲ್ಲ ಈ ದಿನವು ಪ್ರತಿಯೊಬ್ಬರು ಆಚರಿಸಬೇಕಾದ ದಿನವಾಗಿದೆ , ವಿಜ್ಞಾನ ತಂತ್ರಜ್ಞಾನ ಎಂಜಿನಿಯರಿಂಗ್ ಮತ್ತು ಗಣಿತ ವನ್ನು ಅಳವಡಿಸಿಕೊಳ್ಳಲು ಯುವಕರಿಗೆ ಮುಕ್ತ ಆಹ್ವಾನವಾಗಿದೆ ಎಂದು ಜಾರಕಿ ಹೊಳಿ ಬ್ರಿಗೇಡ್ ಸಂಸ್ಥಾಪಕ ಅಧ್ಯಕ್ಷ ಗೋವಿನಾಯಕ್ ಅಭಿಪ್ರಾಯಪಟ್ಟರು.

ಪಟ್ಟಣದ ಅಂಬೇಡ್ಕರ್ ವಿದ್ಯಾರ್ಥಿ ನಿಲಯದಲ್ಲಿ ಮೈ ಭಾರತ್ ಕೇಂದ್ರ ಚಾಮರಾಜನಗರ ವತಿಯಿಂದ ಆಯೋಜಿಸಿದ್ದ ನ್ಯಾಷನಲ್ ಟೆಕ್ನಾಲಜಿ ದಿನಚಾರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಭವಿಷ್ಯದಲ್ಲಿ ಹೊಸತನವನ್ನ ಕಂಡುಕೊಳ್ಳುವುದರಲ್ಲಿ ಆಸಕ್ತಿ ಇರುವಂತವರು ಸದುಪಯೋಗಪಡೆದುಕೊಳ್ಳಬೇಕು, ಸುಸ್ಥಿರ ಹಸಿರು ತಂತ್ರಜ್ಞಾನ ಅಭಿವೃದ್ಧಿ, ಕೃತಕ ಬುದ್ದಿಮತ್ತೆ ಆರೋಗ್ಯ ರಕ್ಷಣಾ ಪ್ರಗತಿಯೊಂದಿಗೆ ಭಾರತದ ಮುಂದಿನ ಏಳ್ಗೆಯು ತರಗತಿ ಕೊಠಡಿಗಳಿಂದಲೇ ಸಾಭೀತಾಗಲಿದೆ.

ಭಾರತವು ಮೇ 11ರ 1998 ರಂದು ಮಾಡಿದ ಸಾಧನೆಯ ಪ್ರತೀಕವಾಗಿ ರಾಷ್ಟ್ರೀಯ ತಂತ್ರಜ್ಞಾನ ದಿನವು ಭಾರತೀಯ ಕ್ಯಾಲೆಂಡರ್‌ನಲ್ಲಿ ಗುರುತಿಸಲ್ಪಟ್ಟಿದ್ದು ಪ್ರಮುಖ ದಿನವಾಗಿದೆ. ಅಟಲ್ ಬಿಹಾರಿ ವಾಜಪೇಯಿ ಭಾರತವನ್ನ ಪರಮಾಣು ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಬಯಸಿದ್ದರ ಪರಿಣಾಮ ಭಾರತೀಯ ರಕ್ಷಣಾ ಸಿಬ್ಬಂದಿ ಮತ್ತು ಡಾ.ಅಬ್ದುಲ್ ಕಲಾಂ, ಚಿದಂಬರಂ ಸೇರಿದಂತೆ ವಿಜ್ಞಾನಿಗಳ ರಹಸ್ಯ ಕಾರ್ಯಾಚರಣೆಯಲ್ಲಿ ಪ್ರಮುಖ ಪಾತ್ರವಹಿಸಿದ್ದರು ಎಂದು ತಿಳಿಸಿದರು. ಪರಮಾಣು ಪರೀಕ್ಷೆಗಳ ಯಶಸ್ವಿ ಪರೀಕ್ಷೆಯನ್ನು ಖಚಿತಪಡಿಸಿಕೊಳ್ಳಲು, ಮೇ 11 ಅನ್ನು ವಾರ್ಷಿಕವಾಗಿ ಇಡೀ ದೇಶದಲ್ಲಿ ರಾಷ್ಟ್ರೀಯ ತಂತ್ರಜ್ಞಾನ ದಿನವನ್ನಾಗಿ ಆಚರಿಸಲಾಗುವುದು ಎಂದು ಭಾರತದ ಪ್ರಧಾನಿ ಘೋಷಿಸಿದರು.

ಈ ಸಂಧರ್ಭದಲ್ಲಿ ಪೊಲೀಸ್ ಇಲಾಖೆಯ ಮಹೇಶ್ ರವರು ಮತನಾಡಿ ತಂತ್ರಜ್ಞಾನವು ಹೇಗೆಲ್ಲ ದುರಪಯೋಗವಾಗುತ್ತಿದೆ ಇದರಿಂದ ಸಾರ್ವಜನಿಕರು ಎಷ್ಟೆಲ್ಲ ಮೋಸ ಹೋಗುತ್ತಿದ್ದಾರೆ ಎಂದು ಸವಿವರವಾಗಿ ವಿವರಿಸಿದರು. ಅಪರಾಧ ಪ್ರಕರಣಗಳು ತಂತ್ರಜ್ಞಾನ ಬಳಕೆಯಿಂದಲೇ ವರದಿಯಾಗುತ್ತಲಿದ್ದು ಹೆಚ್ಚು ಜನರು ಮೋಸ ಹೋಗುವುದು ಹಣ ಕಳೆದುಕೊಳ್ಳುವುದು ಇನ್ನು ಹಲವು ಕಡೆ ಜೀವಹಾನಿಯಾಗಿರುವುದರ ಬಗ್ಗೆ ಪ್ರತಿದಿನ ದೂರುಗಳನ್ನು ನೋಡುತ್ತಿರುತ್ತೇವೆ, ವಿಧ್ಯಾರ್ಥಿಗಳು ಇದರ ಬಗ್ಗೆ ತಿಳಿದುಕೊಂಡು ನಿಮ್ಮ ಸುತ್ತಮುತ್ತಲಿರುವವರಿಗೂ ಅರಿವು ಮೂಡಿಸಲು ಮುಂದಾಗಬೇಕು. ನಿಮಗೆ ತಿಳಿದವರು ಮೋಸದ ಜಾಲಕ್ಕೆ ಬಲಿಯಾಗಿ ಹಣ ಕಳೆದುಕೊಂಡರೆ ತಕ್ಷಣ 1903 ಗೆ ಕರೆ ಮಾಡಿ ದೂರು ದಾಖಲಿಸಿ, ಹಣ ಕಳೆದುಕೊಂಡ 3 ಗಂಟೆಯ ಒಳಗೆ ದೂರು ದಾಖಲಿಸಿದಲ್ಲಿ ಶೀಘ್ರವೇ ನಿಮ್ಮ ಹಣ ನಿಮಗೆ ವಾಪಸ್ಸು ಸಿಗುತ್ತದೆ ಎಂದು ತಿಳಿಸಿದರು.

ಈ ಸಂಧರ್ಭದಲ್ಲಿ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಅಧ್ಯಕ್ಷರಾದ ಬಸವಾರಜು ಎಸ್ ಹಂಗಳ, ನಿಲಯಪಾಲಕರಾದ ಗುರು ಆರಾಧ್ಯ , ಜಾರಕಿಹೊಳಿ ಬ್ರಿಗೇಡ್ ನ ಅಧ್ಯಕ್ಷರಾದ ರಮೇಶ್ ಉಪಸ್ಥಿತರಿದ್ದರು.

### ಪ್ರಗತಿ ಸಾಧಿಸಲು ಭಾರತ ಬದ್ಧ

ಭಾರತ ಪರಮಾಣು ರಾಷ್ಟ್ರವಾಗಿ ಸುಮಾರು 26 ವರ್ಷಗಳು ಕಳೆದಿವೆ ಮತ್ತು ಅಂದಿನಿಂದ ಭಾರತವು ಬಹಳಷ್ಟು ಸಾಧಿಸಿದೆ. ಇಂದು, ಭಾರತವು ತಾಂತ್ರಿಕವಾಗಿ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ದೇಶಗಳಲ್ಲಿ ಒಂದಾಗಿದೆ. ಐಫೋನ್‌ಗಳ ತಯಾರಿಕೆಯಿಂದ ಹಿಡಿದು ಬ್ರಹ್ಮೋಸ್ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿಯನ್ನು ರಫ್ತು ಮಾಡುವವರೆಗೆ, ಭವಿಷ್ಯದಲ್ಲಿ ಹೆಚ್ಚಿನ ತಾಂತ್ರಿಕ ಪ್ರಗತಿಯನ್ನು ಸಾಧಿಸಲು ಭಾರತ ಬದ್ಧವಾಗಿದೆ. ಈ ವರ್ಷ, ಭಾರತದ ತಾಂತ್ರಿಕ ಮತ್ತು ಮಿಲಿಟರಿ ಬೆಳವಣಿಗೆಗಳಿಗೆ ಗಣನೀಯ ಕೊಡುಗೆ ನೀಡಿದ ವ್ಯಕ್ತಿಗಳಿಗೆ ಭಾರತ ಸರ್ಕಾರವು ರಾಷ್ಟ್ರೀಯ ವಿಜ್ಞಾನ ಪುರಸ್ಕಾರವನ್ನು ರಾಷ್ಟ್ರೀಯ ತಂತ್ರಜ್ಞಾನ ದಿನದಂದು ನೀಡಲಿದೆ ಆದ್ದರಿಂದ



## ಮಿನಿ ನ್ಯೂಸ್

# ತಮಗೊಂದು ನ್ಯಾಯ, 2026ರಲ್ಲಿ ದಲಿತರಿಗೊಂದು ನ್ಯಾಯವೇ?




ಉದಯವಾಹಿನಿ ಚಿತ್ರ

• ಉದಯವಾಹಿನಿ, ತುಮಕೂರು

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಮಾಜಿ ಮುಖ್ಯಮಂತ್ರಿ ದಿವಂಗತ ದೇವರಾಜ ಅರಸು ಅವರ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಪ್ರಕಟಿಸಿದ್ದ ಸರ್ಕಾರಿ ಜಾಹೀರಾತಿನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಭಾವಚಿತ್ರ ಮಾತ್ರ ಪ್ರಕಟವಾಗಿದ್ದು, ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರ ಚಿತ್ರವನ್ನು ಕೈಬಿಟ್ಟಿರುವ ವಿಚಾರ ರಾಜಕೀಯ ಚರ್ಚೆಗೆ ಕಾರಣವಾಗಿದೆ. ಈ ವಿಚಾರವನ್ನು ತೀವ್ರವಾಗಿ ಟೀಕಿಸಿರುವ ಜೆಡಿಎಸ್, ಸಾಮಾಜಿಕ ನ್ಯಾಯದ ಬಗ್ಗೆ ನಿರಂತರವಾಗಿ ಮಾತನಾಡುವ ಕಾಂಗ್ರೆಸ್‌ನ ನಿಜವಾದ ಮುಖ ಇಂದು ಬಯಲಾಗಿದೆ ಎಂದು ಆರೋಪಿಸಿದೆ. ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ನೀವೇ ಉಪ ಮುಖ್ಯಮಂತ್ರಿಯಾಗಿದ್ದಾಗ ನಿಮ್ಮ ಫೋಟೋ ಕಡ್ಡಾಯವಾಗಿತ್ತು. ಆದರೆ, ಈಗ ಒಬ್ಬ ದಲಿತ ನಾಯಕ ಉಪ ಮುಖ್ಯಮಂತ್ರಿಯಾಗಿದ್ದಾಗ ಅವರ ಫೋಟೋಗೆ ಜಾಗ ಇಲ್ಲವೇ ಮುಖ್ಯಮಂತ್ರಿಗಳೇ? ಎಂದು ಪ್ರಶ್ನಿಸಿದೆ. ಅಲ್ಲದೆ, ಹಿಂದುಳಿದ ವರ್ಗಗಳು ಮತ್ತು ದಲಿತ ಸಮುದಾಯದ ಏಳಿಗೆಗಾಗಿ ಜೀವನವನ್ನೇ ಮುಡಿಪಾಗಿಟ್ಟಿದ್ದ ದೇವರಾಜ ಅರಸು ಅವರ ಕಾರ್ಯಕ್ರಮದ ಜಾಹೀರಾತಿನಲ್ಲೇ ಹಾಲಿ ಉಪ ಮುಖ್ಯಮಂತ್ರಿ, ಹಾಗೂ ಪ್ರಮುಖ ದಲಿತ ನಾಯಕ ಡಾ. ಜಿ. ಪರಮೇಶ್ವರ್ ಅವರ ಚಿತ್ರವನ್ನು ಸಂಪೂರ್ಣವಾಗಿ ಕೈಬಿಡುವ ಮೂಲಕ ಡಿ.ಕೆ. ಶಿವಕುಮಾರ್ ತಮ್ಮ ಏಕಸ್ವಾಮ್ಯ ಧೋರಣೆ ಮತ್ತು ಅಹಂಕಾರವನ್ನು ಪ್ರದರ್ಶಿಸಿದ್ದಾರೆ ಎಂದು ಕಿಡಿಕಾರಿದೆ.


## ಉಚಿತ ಪಿಜಿ- ಸಿಇಟಿ ತರಬೇತಿ ಇಂದಿನಿಂದ

• ಉದಯವಾಹಿನಿ, ನಂಜನಗೂಡು

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸುವ ಸಲುವಾಗಿ ತಾಂಡವಪುರ ಎಂಐಟಿ ಕಾಲೇಜಿನಲ್ಲಿ ಜೂನ್ 8, 9ರಂದು ಎರಡು ದಿನಗಳ ಉಚಿತ ಪಿಜಿ- ಸಿಇಟಿ ತರಬೇತಿ ಕಾರ್ಯಕ್ರಮ ನಡೆಸಲಾಗುವುದು ಎಂದು ಎಂಐಟಿ ಕಾಲೇಜಿನ ಜಂಟಿ ಕಾರ್ಯದರ್ಶಿ ಎಚ್.ಕೆ.ಚೇತನ್ ಹೇಳಿದರು. ನಗರದಲ್ಲಿ ಸುದ್ದಿಗೋಷ್ಠಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಆರ್ಥಿಕವಾಗಿ ಹಿಂದುಳಿದ ಪ್ರತಿಭಾನ್ವಿತ ವಿದ್ಯಾರ್ಥಿಗಳು ಪಿಜಿ -ಸಿಇಟಿ ತರಬೇತಿ ಪಡೆಯದ ಕಾರಣ ಅವರು ಉನ್ನತ ವ್ಯಾಸಂಗದಿಂದ ವಂಚಿತರಾಗುತ್ತಿದ್ದಾರೆ. ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸುವ ಸಲುವಾಗಿ ತರಬೇತಿ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ತರಬೇತಿಯಲ್ಲಿ ಉಚಿತ ಬಸ್ ವ್ಯವಸ್ಥೆ, ಊಟದ ವ್ಯವಸ್ಥೆ ಮತ್ತು ವ್ಯಾಸಂಗ ಸಾಮಗ್ರಿಗಳನ್ನು ಉಚಿತವಾಗಿ ನೀಡಲಾಗುತ್ತದೆ. ಈಗಾಗಲೇ ನರಸೀಪುರ, ಕೊಳ್ಳೇಗಾಲ, ಗುಂಡ್ಲುಪೇಟೆ ಸೇರಿದಂತೆ 21 ಕಾಲೇಜಿನಿಂದ ತರಬೇತಿಗೆ ನೋಂದಣೆ ಮಾಡಿಕೊಂಡಿದ್ದಾರೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ತರಬೇತಿ ಕಾರ್ಯಕ್ರಮಕ್ಕೆ ಹಾಜರಾಗಿ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಪ್ರೊ.ಸಲಾಮತ್ ಮಾತನಾಡಿ, ಎಂಐಟಿ ಕಾಲೇಜು 3 ವರ್ಷಗಳಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗಾಗಿ ಉಚಿತ ತರಬೇತಿ ಕಾರ್ಯಕ್ರಮ ನಡೆಸುತ್ತಾ ಬಂದಿದೆ. ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವ ಮೂಲಕ ಸೌಲಭ್ಯ ಬಳಸಿಕೊಳ್ಳಬೇಕು ಎಂದು ಹೇಳಿದರು. ಪ್ರೊ. ಶಶಿ, ಪ್ರೊ.ಶ್ಯಾಮ್, ಪ್ರೊ.ರಮೇಶ್ ಉಪಸ್ಥಿತರಿದ್ದರು.

## ಸಚಿವ ಯತೀಂದ್ರಗೆ ಅಭಿನಂದನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ತಿ.ನರಸೀಪುರ

ತಂದೆ ಸಿದ್ದರಾಮಯ್ಯನವರಂತೆ ಸಾಮಾಜಿಕ ನ್ಯಾಯ ಪ್ರತಿಪಾದಿಸುವ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಭವಿಷ್ಯದ ಅಹಿಂದ ನಾಯಕರಾಗಲಿದ್ದಾರೆ ಎಂದು ಕೆಪಿಸಿಸಿ ಹಿಂದುಳಿದ ವರ್ಗಗಳ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ. ರಮೇಶ್ ಹೇಳಿದರು.

ವರುಣಾ ಕ್ಷೇತ್ರದ ಮುಖಂಡರು ನಗರಾಭಿವೃದ್ಧಿ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿರುವ ಡಾ.ಯತೀಂದ್ರ ಸಿದ್ದರಾಮಯ್ಯ ಅವರನ್ನು ಬೆಂಗಳೂರಿನಲ್ಲಿ ಅಭಿನಂಧಿಸಿ ಮಾತನಾಡಿದರು.

ಹೆಚ್ಚು ಬಜೆಟ್ ಮಂಡಿಸಿ, ಹೆಚ್ಚು ಅವಧಿ ಮುಖ್ಯಮಂತ್ರಿ ಆಗಿದ್ದಂತಹ ಜನನಾಯಕ ಸಿದ್ದರಾಮಯ್ಯನವರ ಮಾರ್ಗದರ್ಶನದಲ್ಲಿ ಜನಪರ ಆಡಳಿತ ನೀಡುವಂತೆ ಡಾ.ಯತೀಂದ್ರ ಅವರಿಗೆ ನಾವು ಮನವಿ ಮಾಡಲಾಗಿದೆ. ಅಧಿಕಾರವನ್ನು ಬಳಸಿಕೊಂಡು ಸಮಾಜದ ಕಟ್ಟ ಕಡೆಯ ಮನುಷ್ಯನಿಗೂ ಅನುಕೂಲ ಕಲ್ಪಿಸುವ ಹೊಣೆಗಾರಿಕೆಯನ್ನು ಸಮರ್ಥವಾಗಿ ನಿಭಾಯಿಸುವ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು. ಆಲಗೂಡು ಸಹಕಾರ ಪತ್ತಿನ ಸಂಘದ ನಿರ್ದೇಶಕ ಸಹದೇವ, ಕಾಂಗ್ರೆಸ್ ಮುಖಂಡರಾದ ಎಂ. ಗಿರೀಶ್, ಕೆಂಪಯ್ಯನಹುಂಡಿ ಮಹದೇವಸ್ವಾಮಿ, ವರುಣಾ ಬ್ಲಾಕ್ ಕಾರ್ಮಿಕ ಘಟಕದ ಉಪಾಧ್ಯಕ್ಷ ಮಂಜುನಾಥ್ ಇದ್ದರು.

## ಸಚಿವರ ರಾಜೀನಾಮೆಗೆ ಒತ್ತಾಯ

• ಉದಯವಾಹಿನಿ,ಮೈಸೂರು

ನೀಟ್ ಹಾಗೂ ಸಿಬಿಎಸ್‌ಇ ಪರೀಕ್ಷೆ ವ್ಯವಸ್ಥೆಯಲ್ಲಿನ ಅಕ್ರಮ ಖಂಡಿಸಿ ಕಾಕ್ರೋಚ್ ಜನತಾ ಪಾರ್ಟಿಯು ಕರೆ ನೀಡಿರುವ ಯುವಜನರ ಚಳವಳಿಗೆ ಬೆಂಬಲ ಸೂಚಿಸಿ ನಗರದಲ್ಲಿ ಶನಿವಾರ ಪ್ರತಿಭಟನೆ ನಡೆಯಿತು. ಪುರಭವನದ ಆವರಣದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆ ಎದುರು ವಿವಿಧ ಸಂಘಟನೆಗಳ ಮುಖಂಡರು, ಸಾಹಿತಿಗಳು ಹಾಗೂ ಹೋರಾಟಗಾರರು ಪ್ರತಿಭಟನೆ ನಡೆಸಿ ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಶಿಕ್ಷಣ ಕ್ಷೇತ್ರದಲ್ಲಿ ಉಂಟಾಗಿರುವ ವಿವಾದಗಳ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ಪರೀಕ್ಷಾ ವ್ಯವಸ್ಥೆಯಲ್ಲಿನ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಪ್ರತಿಭಟನಕಾರರು ಒತ್ತಾಯಿಸಿದರು.

**ಸೋಲಾರ್ ಪಾರ್ಕ್ ಯೋಜನೆಗಾಗಿ ಅನೇಕ ಖಾಸಗಿ ಕಂಪನಿಗಳು ನೇರವಾಗಿ ರೈತರನ್ನು ಭೇಟಿಯಾಗಿ ಜಮೀನು ಪಡೆಯುತ್ತಿವೆ.**

# ನನ್ನ ಬಹುದಿನದ ಕನಸಿನ ಯೋಜನೆ: ಶಾಸಕ ಪ್ರಭು ಚವ್ಹಾಣ

• **ಉದಯವಾಹಿನಿ, ಕಮಲನಗರ**

ತಾಲ್ಲೂಕಿನಲ್ಲಿ ಬೃಹತ್ ಪವರ್ ಗ್ರಿಡ್ ಉಪ ಕೇಂದ್ರದ ಜೊತೆಗೆ ಸುಮಾರು 25 ಸಾವಿರ ಎಕರೆಯಲ್ಲಿ ಬೃಹತ್ ಸೋಲಾರ್ ಪಾರ್ಕ್ ಯೋಜನೆ ನಡೆಯುತ್ತಿದೆ. ಈ ಯೋಜನೆಗೆ ಜಮೀನು ನೀಡುತ್ತಿರುವ ರೈತರಿಗೆ ಅನ್ಯಾಯವಾಗಬಾರದು ಎಂದು ಮಾಜಿ ಸಚಿವರು ಹಾಗೂ

1 : ಪವರ್ ಗ್ರಿಡ್ ಉಪ ಕೇಂದ್ರ ಪರಿಶೀಲನೆ.
2 : 2360ಕೋಟಿ ಮೊತ್ತದ ಬೃಹತ್ ಯೋಜನೆ.
3 : ಮೂರು ರಾಜ್ಯಗಳಿಗೆ ಸರಬರಾಜು.

ಔರಾದ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು. ಮಾಳೆಗಾಂವ-ಚಿಮ್ಮೇಗಾಂವ ವ್ಯಾಪ್ತಿಯಲ್ಲಿ ನಿರ್ಮಾಣವಾಗುತ್ತಿರುವ ಪವರ್ ಗ್ರಿಡ್ ಸಬ್ ಸ್ಟೇಷನ್ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ವೀಕ್ಷಿಸಿ ಅವರು ಮಾತನಾಡಿದರು. ಸೋಲಾರ್ ಪಾರ್ಕ್ ಯೋಜನೆಗಾಗಿ ಅನೇಕ ಖಾಸಗಿ ಕಂಪನಿಗಳು ನೇರವಾಗಿ ರೈತರನ್ನು ಭೇಟಿಯಾಗಿ ಜಮೀನು ಪಡೆಯುತ್ತಿವೆ.

ರೈತರ ಮುಗ್ಧತೆಯನ್ನು ದುರುಪಯೋಗ ಮಾಡಿಕೊಂಡು ಕಡಿಮೆ ಹಣ ಕೊಡುತ್ತಿರುವುದು ಗಮನಕ್ಕೆ ಬಂದಿದೆ ಎಂದು ಬೇಸರ ವ್ಯಕ್ತಪಡಿಸಿದರು.



ಕಮಲನಗರ ತಾಲ್ಲೂಕಿನ ಮುರ್ಕಿ, ಠಾಣಾ ಕುಶನೂರ, ಚಿಕ್ಲಿ(ಯು), ಚಿಮ್ಮೇಗಾಂವ ಸೇರಿದಂತೆ ಮತ್ತಿತರೆ ಗ್ರಾಮಗಳಲ್ಲಿ ಯೋಜನೆಗಾಗಿ ಜಮೀನು ಪಡೆಯುವ ಕೆಲಸ ನಡೆಯುತ್ತಿದೆ.

ಈ ಭಾಗದ ಅಭಿವೃದ್ಧಿಯ ದೃಷ್ಟಿಯಿಂದ ಈ ಯೋಜನೆ ಯಶಸ್ವಿಯಾಗಬೇಕು. ಆದರೆ ತಮ್ಮ ಬದುಕಿಗೆ ಆಸರೆಯಾದ ಜಮೀನನ್ನು ನೀಡುತ್ತಿರುವ ರೈತರಿಗೆ ಯಾವುದೇ ರೀತಿಯ ಅನ್ಯಾಯವಾಗಬಾರದು ಎಂದು ಖಾಸಗಿ ಕಂಪನಿಗಳಿಗೆ ಎಚ್ಚರಿಸಿದರು.

ಇಂತಹದ್ದೇ ಯೋಜನೆಗೆ ಲೀಸ್ ಆಧಾರದ ಮೇಲೆ ಪಡೆಯಲು ಮಹಾರಾಷ್ಟ್ರದಲ್ಲಿ ಪ್ರತಿ ಎಕರೆಗೆ ವರ್ಷಕ್ಕೆ 50 ಸಾವಿರ ನಿಗದಿಪಡಿಸಲಾಗಿದೆ. ಆದರೆ ನಮ್ಮ ಭಾಗದಲ್ಲಿ 30 ರಿಂದ 35 ಸಾವಿರ ಮಾತ್ರ ನೀಡಲಾಗುತ್ತಿದೆ ಎಂದು ಬಹಳಷ್ಟು ರೈತರು ನನ್ನನ್ನು ಭೇಟಿಯಾಗಿ ತಮ್ಮ ಸಮಸ್ಯೆಗಳನ್ನು ಹಂಚಿಕೊಂಡಿದ್ದಾರೆ.

ಕಂಪನಿಗಳು ಈ ರೀತಿಯ ತಾರತಮ್ಯ ಮಾಡದೇ, ನಮ್ಮ ರೈತರಿಗೆ ನ್ಯಾಯಯುತ ಹಾಗೂ ಸೂಕ್ತ ಬೆಲೆ ನೀಡಬೇಕು ಎಂದು ಒತ್ತಾಯಿಸಿದರು. ಅಲ್ಲದೇ ನಮ್ಮಲ್ಲಿಯೂ ಕನಿಷ್ಠ 50 ಸಾವಿರ ಬಾಡಿಗೆ ದರ ನಿಗದಿಪಡಿಸಬೇಕು ಎಂದರು. ಪವರ್ ಗ್ರಿಡ್ ಉಪ ಕೇಂದ್ರದಲ್ಲಿ ಸಂಚರಿಸಿ ಎಲ್ಲ ಕಾಮಗಾರಿಗಳ ಬಗ್ಗೆ ಮಾಹಿತಿ ಪಡೆದರು. ಕಾಮಗಾರಿ ಗುಣಮಟ್ಟದಿಂದ ಮತ್ತು ಕಾಲಮಿತಿಯೊಳಗಾಗಿ ಪೂರ್ಣಗೊಳಿಸಬೇಕು. ಕ್ಯೂರಿಂಗ್ ಸರಿಯಾಗಿ ಮಾಡಬೇಕು. ಗುಣಮಟ್ಟದ ಕುರಿತಂತೆ ಯಾವುದೇ ರೀತಿಯ ದೂರುಗಳು ಬಾರದಂತೆ ಒಳ್ಳೆಯ ರೀತಿ ಕೆಲಸ ಮಾಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

**ಆಶಯದಂತೆ ಕಾಮಗಾರಿ ಸ್ಥಳದಲ್ಲಿ ತಾಂತ್ರಿಕ ಹುದ್ದೆ**

**ನನ್ನ ಆಶಯದಂತೆ ಕಾಮಗಾರಿ ಸ್ಥಳದಲ್ಲಿ ತಾಂತ್ರಿಕ ಹುದ್ದೆಗಳನ್ನು ಹೊರತುಪಡಿಸಿ ಉಳಿದೆಲ್ಲರೂ ಸ್ಥಳೀಯರೇ ಕೆಲಸ ಮಾಡುತ್ತಿದ್ದಾರೆ. ಇಲ್ಲಿ ಬಳಕೆಯಾಗುವ ಟ್ರಾಕ್ಟರ್, ಟಿಪ್ಪರ್, ಜೆಸಿಬಿ ಯಂತ್ರಗಳು ಒಳಗೊಂಡತೆ ಯಂತ್ರೋಪಕರಣಗಳು ಸ್ಥಳೀಯರದ್ದೇ ಪಡೆಯಲಾಗಿದೆ. ಸಣ್ಣ ಪುಟ್ಟ ಕೆಲಸಗಾರರು ಕೂಡ ಸ್ಥಳೀಯರನ್ನೇ ನೇಮಿಸಲಾಗಿದೆ. ಮುಂದಿನ ದಿನಗಳಲ್ಲಿಯೂ ಸ್ಥಳೀಯರಿಗೆ ಆದ್ಯತೆ ನೀಡುವಂತೆ ತಿಳಿಸಿದ್ದೇನೆ ಎಂದು ಹೇಳಿದರು.**

**ಇಲ್ಲಿಂದ ಹೈದ್ರಾಬಾದ್, ಕರನೂಲ, ಮಹಾರಾಷ್ಟ್ರ ರಾಜ್ಯದ ಪರಳಿಗೆ ವಿದ್ಯುತ್ ಲೈನ್ ಹೋಗುತ್ತದೆ. ಈ ಯೋಜನೆಯ ಕಾಮಗಾರಿ ಶೇ.80ರಷ್ಟು ಪೂರ್ಣಗೊಂಡಿದೆ. ಪ್ರಧಾನಿಯವರಿಂದಾಗಿ ಈ ಯೋಜನೆ ಕಾರ್ಯರೂಪಕ್ಕೆ ಬಂದಿದ್ದರಿಂದ ಪ್ರಧಾನಿ ನರೇಂದ್ರ ಮೋದಿಯವರು ಉದ್ಘಾಟನೆಗೆ ಬರಬೇಕೆಂಬುದು ನನ್ನ ಬಯಕೆಯಾಗಿದೆ. ಅವರನ್ನು ಬರುವಂತೆ ಪ್ರಾರ್ಥಿಸುತ್ತೇನೆ ಎಂದು ತಿಳಿಸಿದರು.**

**ಶಾಸಕ ಪ್ರಭು ಬಿ.ಚವ್ಹಾಣ**

ಔರಾದ ಕ್ಷೇತ್ರಕ್ಕೆ ದೊಡ್ಡ ಯೋಜನೆ ತರಬೇಕೆಂಬುದು ನನ್ನ ಬಹಳಷ್ಟು ದಿನಗಳ ಕನಸಾಗಿತ್ತು. ಇದಕ್ಕಾಗಿ ಸುಮಾರು 15 ವರ್ಷಗಳ ಕಾಲ ಸತತ ಪ್ರಯತ್ನಪಟ್ಟಿದ್ದೇನೆ. ಅದರಂತೆ ಸಾಕಷ್ಟು ಪ್ರಯತ್ನ ವಹಿಸಿ ಪವರ್ ಗ್ರಿಡ್ ಉಪ ಕೇಂದ್ರವನ್ನು ತಂದಿದ್ದೇನೆ. ಕೇಂದ್ರ ಸರ್ಕಾರದ ಯೋಜನೆ ಇದಾಗಿದ್ದು, 2360 ಕೋಟಿ ಮೊತ್ತದ ಬೃಹತ್ ಯೋಜನೆಯಾಗಿದ್ದು, 164 ಎಕರೆಯಲ್ಲಿ ಭವ್ಯವಾಗಿ ಸೋಲಾರ್ ಪಾರ್ಕ್ ನಿರ್ಮಾಣಗೊಳ್ಳುತ್ತಿದೆ.

# ಗೃಹಲಕ್ಷ್ಮಿ: 9,251 ಮಂದಿ ಹೆಸರು ಕಡಿತ

• **ಉದಯವಾಹಿನಿ,ಮಂಗಳೂರು:**




ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾಗಿರುವ 'ಗೃಹಲಕ್ಷ್ಮಿ' ಯೋಜನೆಯ ಫಲಾನುಭವಿಗಳಲ್ಲಿ ಮೃತರಾದವರನ್ನು ಗುರುತಿಸುವ ಕಾರ್ಯ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆಯುತ್ತಿದ್ದು, ಈ ವರೆಗೆ 9,251 ಮಂದಿಯ ಹೆಸರು ಕಡಿತಗೊಂಡಿದೆ.

'ಗೃಹಲಕ್ಷ್ಮಿ' ಯೋಜನೆಯಡಿ ಪ್ರತಿ ಕುಟುಂಬದ ಯಜಮಾನಿಗೆ ಪ್ರತಿ ತಿಂಗಳು 2 ಸಾವಿರ ಮೊತ್ತವನ್ನು ಸರ್ಕಾರ ಪಾವತಿಸುತ್ತದೆ. ಯೋಜನೆ ಆರಂಭವಾದ 2023ರ ಆಗಸ್ಟ್‌ನಿಂದ ಜಿಲ್ಲೆಯಲ್ಲಿ 3.82 ಲಕ್ಷ ಮಹಿಳೆಯರು ಹೆಸರು ನೋಂದಾಯಿಸಿಕೊಂಡಿದ್ದರು. ಅವರಲ್ಲಿ ಅನೇಕರು ಮೃತಪಟ್ಟಿದ್ದು, ಅವರ ಖಾತೆಗೂ ಹಣ ಸಂದಾಯವಾಗುತ್ತಿತ್ತು. ಇದನ್ನು ತಡೆಯುವ ಉದ್ದೇಶದಿಂದ, ಯೋಜನೆ ಅನುಷ್ಠಾನದ ಹೊಣೆ ನಿರ್ವಹಿಸುತ್ತಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೃತ ಫಲಾನುಭವಿಗಳ ಪತ್ತೆ ಕಾರ್ಯ ನಡೆಸುತ್ತಿದೆ.'ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಾಗಲು ಅರ್ಹತೆಯಿದ್ದರೂ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆ ಸೀಡಿಂಗ್ ಆಗದವರನ್ನು ಗುರುತಿಸಿ, ಅವರನ್ನು ಯೋಜನೆ ವ್ಯಾಪ್ತಿಗೆ ತರಲಾಗಿದ್ದು, ಪ್ರಸ್ತುತ 293 ಮಂದಿಯ ಅರ್ಜಿಯ ಮ್ಯಾಪಿಂಗ್ ಕಾರ್ಯ ನಡೆಯುತ್ತಿದೆ.

ಯೋಜನೆಯ ಆರಂಭದಲ್ಲೇ ಆದಾಯ ತೆರಿಗೆ ಮತ್ತು ಜಿಎಸ್‌ಟಿ ಪಾವತಿಸುತ್ತಿರುವ ಸುಮಾರು 9,200 ಮಂದಿಯ ಅರ್ಜಿ ತಿರಸ್ಕೃತಗೊಂಡಿದೆ. ಯೋಜನೆಯ ಫಲಾನುಭವಿ ಮಹಿಳೆಯರು ಮೃತಪಟ್ಟರೆ, ಅವರ ವಿಳಾಸ ಪತ್ತೆ ಮಾಡಿ, ದಾಖಲೆ ಸಂಗ್ರಹಿಸುವುದು ದೊಡ್ಡ ಸವಾಲಾಗಿದೆ' ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದರು.

ಫಲಾನುಭವಿ ಮಹಿಳೆ ಮೃತಪಟ್ಟ ವೇಳೆ ಆಕೆಯ ಕುಟುಂಬದ ಸದಸ್ಯರು ಮರಣ ಪ್ರಮಾಣಪತ್ರ ಪಡೆದಿದ್ದರೆ, ಇ-ಜನ್ಮ ತಂತ್ರಾಂಶದ ಮೂಲಕ ಮಾಹಿತಿ ಲಭ್ಯವಾಗಿ, ಅಂತಹವರ ಹೆಸರನ್ನು ಕಡಿತ ಮಾಡಲಾಗುತ್ತದೆ. ಇನ್ನು ಕೆಲವು ಕುಟುಂಬದವರು ಇಲಾಖೆಯ ಕಚೇರಿಗೆ ಬಂದು ಮರಣ ಪ್ರಮಾಣಪತ್ರ ಸಲ್ಲಿಸುತ್ತಾರೆ. ಅನೇಕ ಕುಟುಂಬಗಳಲ್ಲಿ ಫಲಾನುಭವಿ ಯಜಮಾನಿ ಮೃತರಾಗಿದ್ದರೂ, ಆ ಕುಟುಂಬದವರು ಮರಣ ಪ್ರಮಾಣಪತ್ರ ಪಡೆದಿರುವುದಿಲ್ಲ. ಅಂತಹ ಒಂದಿಷ್ಟು ಪ್ರಕರಣಗಳು ಈಗ ಬಾಕಿ ಇವೆ. ಮೃತ ಫಲಾನುಭವಿಗಳ ಖಾತೆಗೆ ಹಣ ಸಂದಾಯ ಆಗಿ, ಯೋಜನೆ ದುರುಪಯೋಗ ಆಗುವುದನ್ನು ತಪ್ಪಿಸಲು ಸ್ಥಳೀಯ ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಮಾಹಿತಿ ಸಂಗ್ರಹಿಸಲಾಗುತ್ತಿದೆ' ಎನ್ನುತ್ತಾರೆ ಅವರು. 'ಜಿಲ್ಲೆಯಲ್ಲಿ ಮಂಗಳೂರು ತಾಲ್ಲೂಕಿನಲ್ಲಿ ಗರಿಷ್ಠ ಸಂಖ್ಯೆ ಇದ್ದು, ಈವರೆಗೆ 1,996 ಮೃತ ಫಲಾನುಭವಿ ಮಹಿಳೆಯರ ಹೆಸರನ್ನು ಕಡಿತಗೊಳಿಸಲಾಗಿದೆ.

ಬಂಟ್ವಾಳ ತಾಲ್ಲೂಕಿನಲ್ಲಿ ಮರಣ ಹೊಂದಿದ 1,910 ಫಲಾನುಭವಿಗಳು ಹೆಸರು ಕಡಿಮೆ ಮಾಡಲಾಗಿದೆ. ಮೂಡುಬಿದಿರೆಯಲ್ಲಿ ಈ ಸಂಖ್ಯೆ ಕಡಿಮೆ ಇದ್ದು, 507 ಮೃತ ಮಹಿಳೆಯರ ಹೆಸರನ್ನು ಗೃಹಲಕ್ಷ್ಮಿ ಫಲಾನುಭವಿಗಳ ಪಟ್ಟಿಯಿಂದ ಕಡಿತ ಮಾಡಿ, ಸೌಲಭ್ಯ ಸ್ಥಗಿತಗೊಳಿಸಲಾಗಿದೆ' ಎಂದು ತಿಳಿಸಿದರು.

## ಬಹುವರ್ಷಗಳ ಕನಸು ನನಸು: ವರ್ಕನಳ್ಳಿ ಗ್ರಾಮಕ್ಕೆ ಬಸ್ ಸೌಲಭ್ಯ

• **ಉದಯವಾಹಿನಿ ಯಾದಗಿರಿ**

ಹಲವು ವರ್ಷಗಳಿಂದ ಸಮರ್ಪಕ ಸಾರಿಗೆ ಸೌಲಭ್ಯವಿಲ್ಲದೆ ಸಂಕಷ್ಟ ಅನುಭವಿಸುತ್ತಿದ್ದ ವರ್ಕನಳ್ಳಿ ಗ್ರಾಮಸ್ಥರ ಬಹುಕಾಲದ ನಿರೀಕ್ಷೆಗೆ ಕೊನೆಗೂ ತೆರೆ ಬಿದ್ದಿದ್ದು, ಗ್ರಾಮಕ್ಕೆ ನೂತನ ಸರ್ಕಾರಿ ಬಸ್ ಸೇವೆ ಆರಂಭಗೊಂಡಿದೆ. ಬಸ್ ಮೊದಲ ಬಾರಿಗೆ ಗ್ರಾಮ ಪ್ರವೇಶಿಸಿದ ಸಂದರ್ಭದಲ್ಲಿ ಗ್ರಾಮಸ್ಥರು ಪೂಜೆ ಸಲ್ಲಿಸಿ ಸಂಭ್ರಮದಿಂದ ಸ್ವಾಗತಿಸಿದರು.

ಸಾರಿಗೆ ಸಂಪರ್ಕದ ಕೊರತೆಯಿಂದ ವಿದ್ಯಾರ್ಥಿಗಳು, ರೈತರು, ಕಾರ್ಮಿಕರು ಹಾಗೂ ಸಾರ್ವಜನಿಕರು ದಿನನಿತ್ಯ ಸಂಚಾರಕ್ಕೆ ಪರದಾಡುತ್ತಿದ್ದರು. ವಿಶೇಷವಾಗಿ ಶಾಲೆ ಹಾಗೂ ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು ಖಾಸಗಿ ವಾಹನಗಳನ್ನೇ ಅವಲಂಬಿಸಬೇಕಾದ ಪರಿಸ್ಥಿತಿ ಇತ್ತು. ಇದೀಗ ಬಸ್ ಸೇವೆ ಆರಂಭವಾಗಿರುವುದರಿಂದ ಗ್ರಾಮಸ್ಥರಲ್ಲಿ ಹೊಸ ಆಶಾಭಾವನೆ ಮೂಡಿದೆ. ಗ್ರಾಮಸ್ಥ ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯ ಆಂಜನೇಯ ಕಲಾಲ್ ಮಾತನಾಡಿ, ವರ್ಕನಳ್ಳಿ ಗ್ರಾಮಕ್ಕೆ ಬಸ್ ವ್ಯವಸ್ಥೆ ಕಲ್ಪಿಸುವಂತೆ ಹಲವು ಬಾರಿ ಅಧಿಕಾರಿಗಳು ಮತ್ತು


ಉದಯವಾಹಿನಿ ಚಿತ್ರ

ಜನಪ್ರತಿನಿಧಿಗಳ ಗಮನ ಸೆಳೆಯಲಾಗಿತ್ತು. ಗ್ರಾಮಸ್ಥರ ನಿರಂತರ ಮನವಿ ಹಾಗೂ ಸ್ಥಳೀಯ ಮುಖಂಡರ ಪ್ರಯತ್ನದ ಫಲವಾಗಿ ಸರ್ಕಾರ ಗ್ರಾಮಕ್ಕೆ ಬಸ್ ಸೇವೆ ಒದಗಿಸಿದೆ ಎಂದು ಹೇಳಿದರು. ಗ್ರಾಮದ ಸಾರಿಗೆ ಸಮಸ್ಯೆಯನ್ನು ಪರಿಹರಿಸಲು ಕಾಂಗ್ರೆಸ್ ಮುಖಂಡರು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಅಧಿಕಾರಿಗಳೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದ್ದು, ಗ್ರಾಮಕ್ಕೆ ಬಸ್ ಸೇವೆ ಕಲ್ಪಿಸುವಂತೆ ಒತ್ತಾಯಿಸಿದ್ದರು. ಅದರ ಫಲವಾಗಿ ಇದೀಗ ಗ್ರಾಮಸ್ಥರಿಗೆ ಅನುಕೂಲವಾಗುವಂತೆ ನಿಯಮಿತ ಬಸ್ ಸಂಚಾರ ಆರಂಭವಾಗಿದೆ ಎಂದು ತಿಳಿಸಿದರು.

## ಮಳೆಯ ರಭಸಕ್ಕೆ ಕಾಲುವೆ ಸೇತುವೆ ಕುಸಿತ, ಅಧಿಕಾರಿಗಳ ನಿರ್ಲಕ್ಷ್ಯ


ಉದಯವಾಹಿನಿ ಚಿತ್ರ

• **ಉದಯವಾಹಿನಿ,ಚಿಂಚೋಳಿ**

ತಾಲ್ಲೂಕಿನ ಚಿಂಚೋಳಿ - ಬಾಲ್ಕಿ ರಾಜ್ಯ ಹೆದ್ದಾರಿಯ ಚಿಮ್ಮಾನಚೋಡ ನರನಾಳ ಮಾರ್ಗಮಧ್ಯೆದಲ್ಲಿರುವ ಕೆಳದಂಡೆ ಮುಲ್ಲಾಮಾರಿ ಯೋಜನೆಯ ಮುಖ್ಯ ಕಾಲುವೆ ಸೇತುವೆಯು ಶನಿವಾರ ಸಾಯಂಕಾಲ ಸುರಿದ ಮಳೆಯ ರಭಸಕ್ಕೆ ಕುಸಿತು ಬಿದ್ದ ಘಟನೆ ಜರುಗಿದೆ. ಸುಮಾರು 40ವರ್ಷಗಳ ಹಳೆಯ ಸೇತುವೆ ಇದಾಗಿದ್ದು ಆದರೆ ಈ ರಾಜ್ಯ ಹೆದ್ದಾರಿಗೆ ಅನೇಕ ಬಾರಿ ಡಾಂಡರಿಕರಣ ರಸ್ತೆ ಮಾಡಲಾಗಿದೆ ಆದರೆ ಲೋಕೋಪಯೋಗಿ ಇಲಾಖೆ ಅವರಿಗೆ ಕೇಳಿದರೆ ನಮ್ಮ ಇಲಾಖೆಗೆ ಸೇರಿದಲ್ಲಾವೆಂದು ಉತ್ತರಿಸುತ್ತಾರೆ ಇಲಾಖೆಗೆ ಸಂಬಂಧಪಟ್ಟಿದಲ್ಲವೆಂದರೆ ಡಾಂಡರಿಕರಣ ರಸ್ತೆ ಹೇಗೆ ಮಾಡೀದ್ದೀರಿ,ಕಾಲುವೆ ಸೇತುವೆ ಪರೀಶೀಲನೆ ನಡೆಸಿದೆ ರಸ್ತೆ ಮಾಡಿದ್ದು ಅಧಿಕಾರಿಗಳ ಬೇಜವಾಬ್ದಾರಿತನವಾಗಿದೆ.

ನಾಲ್ಕು ದಶಕದ ಹಳೆಯ ಕಾಲುವೆ ಸೇತುವೆ ಇದ್ದರೂ ಕೆಳದಂಡೆ ಮುಲ್ಲಾಮಾರಿ ಯೋಜನೆಯ ಅಧಿಕಾರಿಗಳು ರಸ್ತೆ ಮಾಡುವಾಗ ಅಧಿಕಾರಿಗಳ ಗಮನಕ್ಕೆ ಯಾಕೆ ತಂದಿಲ್ಲಾ ಎಂಬುದು ದೊಡ್ಡ ಪ್ರಶ್ನೆಯಾಗಿದೆ,ಯಾರಿಗೂ ಅನಾಹುತ ಆಗಿಲ್ಲ ಸರಿ ಏನಾದರೂ ಅನಾಹುತ ಯಾರಾದರೂ ಜೀವ ಹೋದರೆ ಇದರ ಹೋಣೆಗಾರರು ಯಾರು ಹಾಗಾಗಿ ಇದನ್ನು ತನಿಖೆ ನಡೆಸಿ ತಪ್ಪಿಸ್ಥರ ಮೇಲೆ ಕ್ರಮಕ್ಕೈಗೊಂಡು ಕಾಲುವೆ ಸೇತುವೆ ಮರುನಿರ್ಮಾಣ ಮಾಡಬೇಕು ಎಂದು ಯುವ ಹೋರಾಟಗಾರ ಎಂ.ಪಿ.ಗೋಪಾಲ ಆಗ್ರಹಿಸಿದ್ದಾರೆ.

## ಬಿತ್ತನೆ ಬೀಜ, ರಸಗೊಬ್ಬರ ಕೊರತೆ ನಿವಾರಿಸಿ ರೈತರಿಗೆ ಸಕಾಲದಲ್ಲಿ ಪೂರೈಕೆ ಮಾಡಿ

• **ಉದಯವಾಹಿನಿ,ಯಾದಗಿರಿ:**

ಮುಂಗಾರು ಹಂಗಾಮು ಆರಂಭವಾಗಿರುವ ಬೆನ್ನಲ್ಲೇ ಜಿಲ್ಲೆಯ ರೈತರಿಗೆ ಅಗತ್ಯ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಕೊರತೆ ಎದುರಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ಕೃಷಿ ಚಟುವಟಿಕೆಗಳಿಗೆ ಯಾವುದೇ ಅಡ್ಡಿಯಾಗದಂತೆ ಸರ್ಕಾರ ಹಾಗೂ ಜಿಲ್ಲಾಡಳಿತ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಕಾರ್ಮಿಕ ಸೇನೆಯ ಜಿಲ್ಲಾಧ್ಯಕ್ಷ ಪೋಲಪ್ಪ ಎಂ. ನಾರಾಯಣ್ಣೋರ್ ಒತ್ತಾಯಿಸಿದ್ದಾರೆ. ಜಿಲ್ಲೆಯಲ್ಲಿ ಹಲವು ಕಡೆ ರೈತರು ಈಗಾಗಲೇ ಬಿತ್ತನೆ ಪೂರ್ವ ಸಿದ್ಧತೆಗಳನ್ನು ಪೂರ್ಣಗೊಳಿಸಿದ್ದು, ಕೆಲವೆಡೆ ಕೃಷಿ ಚಟುವಟಿಕೆಗಳು ಆರಂಭಗೊಂಡಿವೆ. ಇಂತಹ ಸಂದರ್ಭದಲ್ಲಿ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಲಭ್ಯತೆ ಕುರಿತು ಅನಿಶ್ಚಿತತೆ ಉಂಟಾಗಿರುವುದು ರೈತರಲ್ಲಿ ಆತಂಕ ಮೂಡಿಸಿದೆ ಎಂದು ತಿಳಿಸಿದ್ದಾರೆ. ರೈತ ಸಂಪರ್ಕ ಕೇಂದ್ರಗಳು ಹಾಗೂ ಕೃಷಿ ಇಲಾಖೆಯ ವಿವಿಧ ವಿತರಣಾ ಕೇಂದ್ರಗಳಲ್ಲಿ ಗುಣಮಟ್ಟದ ಬಿತ್ತನೆ ಬೀಜಗಳು ಮತ್ತು ಅಗತ್ಯ ಪ್ರಮಾಣದ ಯೂರಿಯಾ, ಡಿಎಪಿ ಸೇರಿದಂತೆ ವಿವಿಧ ರಸಗೊಬ್ಬರಗಳು ಸಮರ್ಪಕವಾಗಿ ಲಭ್ಯವಾಗುವಂತೆ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು.

ಬಿತ್ತನೆ ಅವಧಿಯಲ್ಲಿ ಪೂರೈಕೆಯಲ್ಲಿ ಉಂಟಾಗುವ ವಿಳಂಬವು ರೈತರ ಉತ್ಪಾದನೆ ಮತ್ತು ಆರ್ಥಿಕ ಸ್ಥಿತಿಯ ಮೇಲೆ ನೇರ ಪರಿಣಾಮ ಬೀರುತ್ತದೆ ಎಂದು ಅವರು ಹೇಳಿದ್ದಾರೆ.


ಉದಯವಾಹಿನಿ ಚಿತ್ರ


**ಕೆಲವು ಕಡೆಗಳಲ್ಲಿ ಕೃತಕ ಕೊರತೆ ಸೃಷ್ಟಿಸಿ ಬೀಜ ಮತ್ತು ಗೊಬ್ಬರಗಳನ್ನು ಹೆಚ್ಚುವರಿ ದರಕ್ಕೆ ಮಾರಾಟ ಮಾಡುವ ದಂಧೆ ನಡೆಯುವ ಸಾಧ್ಯತೆಗಳಿದ್ದು, ಇಂತಹ ಅಕ್ರಮ ಚಟುವಟಿಕೆಗಳನ್ನು ತಡೆಯಲು ಕೃಷಿ ಇಲಾಖೆ, ತೂಕ ಮತ್ತು ಅಳತೆ ಇಲಾಖೆ ಹಾಗೂ ಜಿಲ್ಲಾಡಳಿತದ ಅಧಿಕಾರಿಗಳು ಜಂಟಿ ಪರಿಶೀಲನೆ ನಡೆಸಬೇಕು. ಅಕ್ರಮ ಸಂಗ್ರಹಣೆ, ಕಾಳಸಂತೆ ಮತ್ತು ಅಧಿಕ ದರ ವಸೂಲಿಯಲ್ಲಿ ತೊಡಗಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದ್ದಾರೆ.**

**-ನಾರಾಯಣ್ಣೋರ್**

## ದೇಶದ ಅಸ್ಮಿತೆಯ ಬಿಂಬ 'ವಂದೇ ಮಾತರಂ'

• **ಉದಯವಾಹಿನಿ, ಮುದ್ದೇಬಿಹಾಳ:**

ದೇಶದ ಸ್ವಾತಂತ್ರ್ಯ, ಸಮಾನತೆ, ಪರಂಪರೆ ಹಾಗೂ ಜನಮತವನ್ನು ಪ್ರತಿಬಿಂಬಿಸುವ ವಂದೇ ಮಾತರಂ ಗೀತೆಯನ್ನು ಇಂದಿನ ಸಮಾಜ ಸರಿಯಾಗಿ ಅರ್ಥ ಮಾಡಿಕೊಳ್ಳಬೇಕಾದ ಅಗತ್ಯವಿದೆ, ಎಂದು ಶಿಕ್ಷಕ ಹಾಗೂ ಖ್ಯಾತ ವಾಗ್ಮಿ ಬಸವರಾಜ ಹಂಚಲಿ ಪ್ರತಿಪಾದಿಸಿದರು. ನಗರದ ಜ್ಞಾನಭಾರತಿ ವಿದ್ಯಾಮಂದಿರ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಅಖಿಲ ಭಾರತ ಸಾಹಿತ್ಯ ಪರಿಷತ್ ತಾಲಕು ಘಟಕದ ಉದ್ಘಾಟನೆ, ವಂದೇ ಮಾತರಂ ಗೀತ ಗಾಯನ ಹಾಗೂ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಖ್ಯ ವಕ್ತಾರರಾಗಿ ಅವರು ಮಾತನಾಡಿದರು. ವಂದೇ ಮಾತರಂ ಕೇವಲ ಗೀತೆಯಲ್ಲ; ಅದು ದೇಶದ ಪ್ರಕೃತಿ, ಭೂಗೋಳ, ಏಕಾತ್ಮವಾದ, ಜ್ಞಾನ ಮತ್ತು ಶಕ್ತಿ ಪರಂಪರೆಯನ್ನು ಆರಾಧಿಸುವ ಅಪ್ರತಿಮ ಕಾವ್ಯ. ಇದು ಭಾರತೀಯರ ಅಸ್ಮಿತೆಯಾಗಿದೆ. ಜಗತ್ತಿನಲ್ಲಿ ಎಲ್ಲರೂ ಒಟ್ಟಾಗಿ ಬಾಳಬೇಕು, ಮಾನವರೆಲ್ಲರೂ ಭಗವಂತನ ಸಂತಾನ ಎಂದು ಸಾರುವ ಉದಾತ್ತ ಭಾವನೆ ನಮ್ಮ ದೇಶದ್ದು. ಇಂತಹ ಭಾರತದ ಮೇಲೆ ಇತಿಹಾಸದಲ್ಲಿ ಸಾವಿರಾರು ದಾಳಿಗಳು ನಡೆದಿವೆ. ಆದರೆ, ಆ ದಾಳಿಕೋರರ ಚಿಂತನೆಗಳೇ ಇಂದು ಭೂಪಟದಿಂದ ಮಾಯವಾಗುವ ಸ್ಥಿತಿ ತಲುಪಿವೆ. ದೇಶದಲ್ಲಿ ಧರ್ಮಗಳು ಬೇರೆ ಇರಬಹುದು, ಆದರೆ ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಇಡೀ ದೇಶವನ್ನು ಒಗ್ಗೂಡಿಸಿದ್ದು ವಂದೇ ಮಾತರಂ ಗೀತೆಯ ಭಾವ. ಆದ್ದರಿಂದ ಸಮಾಜವನ್ನು ಒಡೆದು ಆಳುವ ಜನರ ಮಾತಿಗೆ ಸಾರ್ವಜನಿಕರು ಕಿವಿಗೊಡಬಾರದು ನಾವೆಲ್ಲರೂ ಒಕ್ಕೊರಲಿನಿಂದ ವಂದೇ ಮಾತರಂ ಗೀತೆಯನ್ನು ಹಾಡಿ ಗೌರವಿಸಬೇಕು, ಎಂದು ಕರೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜ್ಞಾನಭಾರತಿ ಶಾಲೆಯ ಅಧ್ಯಕ್ಷ ಬಿ. ಪಿ. ಕುಲಕರ್ಣಿ ಮಾತನಾಡಿ, ಸೈನಿಕರು, ರೈತರು, ವಿದ್ಯಾರ್ಥಿಗಳು, ವಿವಿಧ ಧರ್ಮಗಳ ಜನರು ಹಾಗೂ ಸಾಹಿತಿಗಳಲ್ಲಿ ದೇಶವನ್ನು



ಉದಯವಾಹಿನಿ ಚಿತ್ರ

ಸದೃಢವಾಗಿ ಕಟ್ಟುವ ವಿಚಾರಗಳು ಸದಾ ಜಾಗೃತವಾಗಿರಬೇಕು. ವಂದೇ ಮಾತರಂ ಗೀತೆಯು ದೇಶದ ಪ್ರತಿಯೊಬ್ಬರನ್ನು ಒಗ್ಗೂಡಿಸುವ ಶಕ್ತಿ ಹೊಂದಿದೆ. ಸಮಾಜವನ್ನು ಸನ್ಮಾರ್ಗದಲ್ಲಿ ಮುನ್ನಡೆಸುವ ಕೆಲಸಗಳು ನಿರಂತರವಾಗಿ ನಡೆಯಬೇಕು, ಎಂದರು. ಇದೇ ಸಂದರ್ಭದಲ್ಲಿ ಬಸಯ್ಯ ನಂದಿಕೇಶ್ವರಮಠ ಅವರು 'ವಂದೇ ಮಾತರಂ' ಗೀತೆಯನ್ನು ಸುಮಧುರವಾಗಿ ಗಾಯನ ಮಾಡಿದರು. ಕಾರ್ಯಕ್ರಮದಲ್ಲಿ ಅಭಾಸಾಪ ಜಿಲ್ಲಾ ಘಟಕದ ಉಪಾಧ್ಯಕ್ಷ ಆನಂದ ಗೋಡ್ಸೆ, ಕಾರ್ಯದರ್ಶಿ ಸುಖಾಂತ ಕುಲಕರ್ಣಿ, ಸದಸ್ಯ ಶಿವಾನಂದ ಸಾಲಿಮಠ, ಪ್ರಮುಖರಾದ ನಾಗಪ್ಪ ಬಡಿಗೇರ, ವಿ. ವಿ. ಪಾಟೀಲ್, ಶ್ರೀಶೈಲ ಹಟ್ಟಿ, ಮಹಾಂತೇಶ್ ಹುಣಶ್ಯಾಳ, ಮಹಾಂತೇಶ ಪಡದಾಳಿ, ಕಿರಣ ಪಾಟೀಲ್, ಕಾಶಿನಾಥ ಹುಗ್ಗಿ, ಪ್ರಭುಗೌಡ ರಾರೆಡ್ಡಿ, ದೀಪರತ್ನ ಶ್ರೀ, ಅರುಣಾ ಡೋರನಹಳ್ಳಿ, ಹೇಮಾ ಬಿರಾದಾರ, ದಾನಮ್ಮ ಹಾದಿಮನಿ ಹಾಗೂ ಸುಮಲತಾ ಗಡಿಯಪ್ಪನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು. ತಾಲೂಕು ಘಟಕದ ಕಾರ್ಯದರ್ಶಿ ಗಂಗಾಧರ ಪವಾಡಶೆಟ್ಟಿ ಕಾರ್ಯಕ್ರಮ ನಿರೂಪಿಸಿ, ನಡೆಸಿಕೊಟ್ಟರು.

## ಒಣದ್ರಾಕ್ಷಿ ಆಮದು: ಆತಂಕದಲ್ಲಿ ದ್ರಾಕ್ಷಿ ಬೆಳೆಗಾರರು-ಸಂಸದರಿಗೆ ಮನವಿ

• **ಉದಯವಾಹಿನಿ, ವಿಜಯಪುರ**

ಕಳೆದು ಎರಡು ವರ್ಷಗಳಿಂದ ಉತ್ತಮ ಇಳುವರಿಯಿಂದ ಒಳ್ಳೆಯ ದರ ಪಡೆದುಕೊಳ್ಳುತ್ತಿರುವ ಒಣದ್ರಾಕ್ಷಿ ಈಗ ವಿದೇಶಗಳಿಂದ ಭಾರತಕ್ಕೆ ಮತ್ತೆ ಒಣದ್ರಾಕ್ಷಿ ಆಮದು ಆಗುವ ವದಂತಿಯಿಂದ ದರ ಕಡಿಮೆಯಾಗುವ ಆತಂಕ ಎದುರಾಗಿದೆ ಎಂದು ದ್ರಾಕ್ಷಿ ಬೆಳೆಗಾರರ ಸಂಘದ ವತಿಯಿಂದ ಸಂಸದ ರಮೇಶ ಜಿಗಜಿಣಗಿ ಅವರಿಗೆ ಮನವಿ ಸಲ್ಲಿಸಿ ರೈತರ ಸಂಕಷ್ಟದ ಕುರಿತು ವಿವರಿಸಿದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನ ದ್ರಾಕ್ಷಿ ಬೆಳೆಗಾರರು ಕಳೆದೆರಡು ವರ್ಷಗಳಿಂದ ಆಮದಾಗುತ್ತಿದ್ದ ಒಣದ್ರಾಕ್ಷಿಯನ್ನು ನಿಲ್ಲಿಸಿದ್ದರಿಂದ ದ್ರಾಕ್ಷಿ ಬೆಳೆಗೆ ಒಳ್ಳೆಯ ದರ ಬಂದು ರೈತರು ಸಾಲ ಮುಕ್ತರಾಗುತ್ತಿರುವಾಗ ಪ್ರಸ್ತುತ ವರ್ಷ ಮತ್ತೆ ಆಮದು ಆಗುವುದೆಂಬ ಸುದ್ದಿ ಹಬ್ಬಿದೆ. ಬೆಲೆಯನ್ನು ದಿನೇ ದಿನೇ ಕಡಿಮೆ ಮಾಡುತ್ತಿರುವರುದರಿಂದ ಮತ್ತೆ ರೈತರು ಆತಂಕಕ್ಕಿಡಾಗುವಂತಾಗಿದೆ. ಆದ್ದರಿಂದ ಸಂಸದರು ಸಂಬಂಧಿಸಿದ ಅಧಿಕಾಗಳಿಗೆ ಆಮದಾಗುತ್ತಿರುವ ಒಣದ್ರಾಕ್ಷಿಯನ್ನು ತಡೆಗಟ್ಟಲು ಕ್ರಮ ಕೈಗೊಂಡು ದ್ರಾಕ್ಷಿ ಬೆಳೆಗಾರರಿಗೆ ಬರುವ ಸಂಕಷ್ಟವನ್ನು ದೂರ ಮಾಡಬೇಕೆಂದು ಮನವಿಯಲ್ಲಿ ವಿವರಿಸಿದ್ದಾರೆ. ಈ ಸಂದರ್ಭದಲ್ಲಿ ದ್ರಾಕ್ಷಿ ಬೆಳೆಗಾರರಾದ ಮಂಜು ಬಿರಾದಾರ, ಸಂತೋಷ ಕಾಮಗೊಂಡ, ಬಾಪುರಾಯ ಮಸಳಿ, ಕುಮಾರ ಗೊಳಸಂಗಿ, ಮಹಾಂತೇಶ ಬಿರಾದಾರ, ಪಾಂಡುರಂಗ ಸೊರಡಿ, ಮಲ್ಲು ಸುತಗುಂಡಿ, ಸಂತೋಷ ಜಮಖಂಡಿ, ಸಂತೋಷ ಹೊನವಾಡ, ಮಲ್ಲುಕಾರ್ಜುನ ತುಳಜಾನ, ಹಣಮೇಶ ಬಾಳಿಗೇರಿ, ವಿನಾಯಕ ಹೊನವಾಡ ಇದ್ದರು.

## ಮಿನಿ ನ್ಯೂಸ್

### ಬೀಳ್ಕೊಡುಗೆ ಸ್ನೇಹಸಮ್ಮೇಳನ

• **ಉದಯವಾಹಿನಿ ಕುಂದಗೋಳ**

ತಾಲ್ಲೂಕಿನ ಸಂಶಿ ಗ್ರಾಮದ ಕೆಎಲ್‌ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ಅಂತಿಮ ವರ್ಷದ ಬಿಕಾಂ ಪದವಿ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭ-ವಾರ್ಷಿಕ ಸ್ನೇಹ ಸಮ್ಮೇಳನ ಜರುಗಿತು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕಾಲೇಜಿನ ಹಳೇ ವಿದ್ಯಾರ್ಥಿನಿ, ಧಾರವಾಡ ಕೆಎಸ್‌ಆರ್‌ಪಿ ಕೇಂದ್ರದ ಪಿಎಸ್ಐ ವನಮಾಲಾ ದಾನಣ್ಣವರ ಮಾತನಾಡಿ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಉತ್ತಮ ಸಂಸ್ಕಾರ ಬೆಳೆಸಿಕೊಳ್ಳುವ ಜತೆಗೆ ಸತತ ಪ್ರಯತ್ನದಿಂದ ಉನ್ನತ ಗುರಿ ಸಾಧಿಸಿ, ತಂದೆ-ತಾಯಿ ಹಾಗೂ ಗುರುಗಳಿಗೆ ಕೀರ್ತಿ ತರಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜು ಅಧ್ಯಕ್ಷ ಎ ಬಿ ಉಪ್ಪಿನ ಮಾತನಾಡಿ ವಿದ್ಯಾರ್ಥಿಗಳು ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳುವುದು ರೊಂದಿಗೆ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಕಳೆದ ವರ್ಷ ಬಿಕಾಂ ಪದವಿ 6 ನೆ ಸೆಮಿಸ್ಟರ್ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ಪಿಎಸ್ಐ ವನಮಾಲಾ ಅವರನ್ನು ಸನ್ಮಾನಿ-ಗೌರವಿಸಿ, ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಸಭೆಯಲ್ಲಿ ಬಿ ಬಿ ಬೂದಿಹಾಳ, ಬಿ ಎಂ ಕಜ್ಜಿ ಉಪಸ್ಥಿತರಿದ್ದರು. ಪ್ರಾಚಾರ್ಯ ಪ್ರೊ ರಮೇಶ ಅತ್ತಿಗೇರಿ ಸ್ವಾಗತಿಸಿದರು, ಯಶೋದಾ ಆಲೂರ, ಕಾವ್ಯ ಕಬ್ಬೆರ ಕಾರ್ಯಕ್ರಮ ನಿರೂಪಿಸಿದರು, ಡಾ ಎಂ ಸಿ ಅಂಗಡಿ ಮತ್ತು ಕಾವ್ಯ ಬುಕನಟ್ಟಿ ಐಶ್ವರ್ಯ ಪ್ರಾರ್ಥಿಸಿದರು, ಬಾಲೆಹೊಸೂರ ವಂದಿಸಿದರು

### ಪ್ರತಿಷ್ಠಿತ ಶಾಲೆಗಳ ಪ್ರವೇಶಕ್ಕೆ ಕೌನ್ಸೆಲಿಂಗ್

• **ಉದಯವಾಹಿನಿ, ಗದಗ**

2026-27ನೇ ಶೈಕ್ಷಣಿಕ ಸಾಲಿಗೆ ಪ್ರತಿಷ್ಠಿತ ಶಾಲೆಗಳಿಗೆ ಆಯ್ಕೆಯಾಗಿರುವ ಪರಿಶಿಷ್ಟ ವರ್ಗದ ಬಾಲಕಿಯರಿಗಾಗಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಕೌನ್ಸೆಲಿಂಗ್ ಕಾರ್ಯಕ್ರಮವನ್ನು ಗದಗ ನಗರದ ಡಾ. ಬಿ.ಆರ್. ಅಂಬೇಡ್ಕರ್ ಸಭಾಭವನದಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು. ವಿದ್ಯಾರ್ಥಿನಿಯರು ತಮ್ಮ ಆಸಕ್ತಿ, ಸಾಮರ್ಥ್ಯ ಮತ್ತು ಭವಿಷ್ಯದ ಗುರಿಗಳಿಗೆ ಅನುಗುಣವಾಗಿ ಸೂಕ್ತ ಶಾಲೆಯನ್ನು ಆಯ್ಕೆ ಮಾಡಿಕೊಳ್ಳಲು ನೆರವಾಗುವ ಉದ್ದೇಶದಿಂದ ಈ ಕೌನ್ಸೆಲಿಂಗ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಶ್ರೀಮತಿ ನಂದಾ ಹಣಬರಟ್ಟಿಯವರು, ಡಯಟ್ ಉಪ ಪ್ರಾಂಶುಪಾಲ ಜಿ.ಎಂ. ಮುಂದಿನಮನಿಯವರು, ಉಪನಿರ್ದೇಶಕರ ಕಚೇರಿಯ ಎಂ.ಎಚ್. ಸವದತ್ತಿಯವರು ಸೇರಿದಂತೆ ವಿವಿಧ ಪ್ರತಿಷ್ಠಿತ ಶಾಲೆಗಳ ಪ್ರಾಂಶುಪಾಲರು ಭಾಗವಹಿಸಿದ್ದರು.

ಅಧಿಕಾರಿಗಳು ವಿದ್ಯಾರ್ಥಿಗಳಿಗೆ ಕೇವಲ ಶಾಲೆಯ ಹೆಸರು ಅಥವಾ ಖ್ಯಾತಿಯನ್ನು ಆಧರಿಸಿ ಆಯ್ಕೆ ಮಾಡದೆ, ತಮ್ಮ ಆಸಕ್ತಿ, ಪ್ರತಿಭೆ ಹಾಗೂ ವೃತ್ತಿಜೀವನದ ಕನಸುಗಳಿಗೆ ಹೊಂದಿಕೆಯಾಗುವ ಶಿಕ್ಷಣ ಸಂಸ್ಥೆಯನ್ನು ಆಯ್ಕೆ ಮಾಡಿಕೊಳ್ಳುವಂತೆ ಸಲಹೆ ನೀಡಿದರು. ಉತ್ತಮ ಶಿಕ್ಷಣವು ವ್ಯಕ್ತಿಯ ಭವಿಷ್ಯವನ್ನು ರೂಪಿಸುವ ಪ್ರಮುಖ ಸಾಧನವಾಗಿದ್ದು, ಲಭಿಸಿರುವ ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಂಡು ಉನ್ನತ ಗುರಿಗಳನ್ನು ಸಾಧಿಸಬೇಕೆಂದು ಕರೆ ನೀಡಿದರು.

### 260 ಕ್ವಿಂಟಾಲ್ ಪಡಿತರ ಅಕ್ಕಿ ವಶ

• **ಉದಯವಾಹಿನಿ, ಹೊಸಪೇಟೆ.**

ತಮಗೆ ಬಂದ ಖಚಿತ ಮಾಹಿತಿಯ ಮೇರೆಗೆ ತಾಲ್ಲೂಕಿನ ಮರಿಯಮ್ಮನಹಳ್ಳಿ ಠಾಣೆ ಪೊಲೀಸರು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ 260.35 ಕ್ವಿಂಟಾಲ್ ಪಡಿತರ ಅಕ್ಕಿಯನ್ನು ವಶಪಡಿಸಿಕೊಂಡಿದ್ದಾರೆ. ಗದಗ ನಿಂದ ಮಂಡ್ಯ-ತುಮಕೂರು ಕಡೆಗೆ ಕೆಎ-14/ಎ.8680 ಸಂಖ್ಯೆಯ ಲಾರಿಯಲ್ಲಿ ಅನಧಿಕೃತವಾಗಿ ಪಡಿತರ ಅಕ್ಕಿಯನ್ನು ಸಾಗಾಣಿಕೆ ಮಾಡುತ್ತಿರುವ ಕುರಿತು ತಮಗೆ ಬಂದ ಖಚಿತ ಮಾಹಿತಿಯ ಮೇರೆಗೆ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಹಾಗೂ ತಾಲೂಕಿನ ಮರಿಯಮ್ಮನಹಳ್ಳಿ ಠಾಣೆ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಲಾರಿಯನ್ನು ವಶಕ್ಕೆ ಪಡೆದಿದ್ದಾರೆ.ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಹಾಗೂ ಪೊಲೀಸರು ನಡೆಸಿದ ಕಾರ್ಯಾಚರಣೆಯಲ್ಲಿ ಲಾರಿ ಸಮೇತ 6,04,100/- ರಷ್ಟು ಮೌಲ್ಯದ ಅಂದಾಜು 260.35 ಕ್ವಿಂಟಾಲ್ ಪಡಿತರ ಅಕ್ಕಿಯನ್ನು ವಶಪಡಿಸಿಕೊಂಡಿದ್ದಾರೆ. ಈ ಕುರಿತು ಮರಿಯಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು. ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

### 'ಮಕ್ಕಳು ಒಳ್ಳೆಯ ವ್ಯಕ್ತಿಗಳಾಗಿ ರೂಪುಗೊಳ್ಳಲಿ'

• **ಉದಯವಾಹಿನಿ, ಮಹಾಲಿಂಗಪುರ:**

'ಮಕ್ಕಳು ಎಲ್ಲಾ ಕ್ಷೇತ್ರಗಳಲ್ಲೂ ಮುಂದೆ ಬಂದು, ಸಾಧನೆ ಮಾಡಿ ಸಮಾಜಕ್ಕೆ ಒಳ್ಳೆಯ ವ್ಯಕ್ತಿಗಳಾಗಿ ರೂಪುಗೊಳ್ಳಬೇಕು' ಎಂದು ಮುಧೋಳ ನಿರಾಣಿ ಉದ್ಯಮ ಸಮೂಹದ ಕಾರ್ಯನಿರ್ವಾಹಕ ನಿರ್ದೇಶಕ ಸಂಗಮೇಶ ನಿರಾಣಿ ಹೇಳಿದರು. ಪಟ್ಟಣದ ಗಡಾದಗಲ್ಲಿಯ ರಾಣಿಚನ್ನಮ್ಮ ಸಭಾಭವನದಲ್ಲಿ ಲಿಂಗಾಯತ ಪಂಚಮಸಾಲಿ ಸಮಾಜದ ವತಿಯಿಂದ ಹಮ್ಮಿಕೊಂಡ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. 'ಮಕ್ಕಳ ಶೈಕ್ಷಣಿಕ ಸಾಧನೆಗಾಗಿ ಮಕ್ಕಳ ಬೆಳವಣಿಗೆಗಾಗಿ ತಂದೆ-ತಾಯಿಗಳು ಶ್ರಮಿಸಬೇಕು. ಬೆಳೆದು ಸಾಧನೆ ಮಾಡಿದರೆ ಅದು ಇಡೀ ಸಮಾಜಕ್ಕೆ ಹೆಮ್ಮೆಯ ವಿಷಯವಾಗಿರುತ್ತದೆ' ಎಂದರು.

# ರಸ್ತೆ ಸುರಕ್ಷತೆ, ನಿಯಮಗಳ ಬಗ್ಗೆ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸಬೇಕು: ಡಾ.ಸುರೇಶ ಬಿ.ಇಟ್ನಾಳ

• **ಉದಯವಾಹಿನಿ, ಕೊಪ್ಪಳ:**

ಪ್ರಾದೇಶಿಕ ಸಾರಿಗೆ ಇಲಾಖೆ, ಪೊಲೀಸ್ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ರಸ್ತೆ ಸುರಕ್ಷತೆ ಕುರಿತು ಶಾಲಾ-ಕಾಲೇಜು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ರಸ್ತೆ ಸುರಕ್ಷತೆ ನಿಯಮ ಮತ್ತು ಕಾನೂನುಗಳ ಬಗ್ಗೆ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಸ್ತೆ ಸುರಕ್ಷತೆ ಕುರಿತು ಜಾಗೃತಿ ಮೂಡಿಸಿದಾಗ ಅಪಘಾತಗಳ ಸಂಖ್ಯೆ ಕಡಿಮೆಯಾಗುತ್ತವೆ. ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅವಶ್ಯಕತೆ ಇರುವಲ್ಲಿ ಸೈನ್ ಬೋರ್ಡ್, ಲೈಟಿಂಗ್ ವ್ಯವಸ್ಥೆಗಳನ್ನು ಮಾಡಬೇಕು. ಸಂಬಂಧಿಸಿದ ರಸ್ತೆ ಅಭಿವೃದ್ಧಿ ಪ್ರಾಧಿಕಾರದವರು ಈ ಬಗ್ಗೆ ಕ್ರಮ ವಹಿಸಬೇಕು. ಇವುಗಳಿಗೆ ಅನುದಾನ ಬೇಕಾದರೆ ಸಂಬಂಧಿಸಿದ ಇಲಾಖೆಯವರು ತಮ್ಮ ಮೇಲಾಧಿಕಾರಿಗಳಿಗೆ ಪ್ರಪೋಸಲ್ ಕಳಿಸಿ ಮಾಡಿಸಬೇಕು. ಸೈನ್ಬೋರ್ಡಗಳು ಇರುವಲ್ಲಿ ಲೈಟಿಂಗ್ ವ್ಯವಸ್ಥೆ ಇರಬೇಕು ಎಂದು ಹೇಳಿದರು.

ಬ್ಲ್ಯಾಕ್ ಸ್ಪಾಟ್ಗಳು ಇರುವಲ್ಲಿ ಕ್ಯಾಮರಾಗಳನ್ನು ಅಳವಡಿಸುವುದರ ಜೊತೆಗೆ ಲೈಟಿಂಗ್ ವ್ಯವಸ್ಥೆ ಹಾಗೂ ಸೈನ್ ಬೋರ್ಡಗಳಿದ್ದರೆ ಜನರು ಅಂತಹ ಸ್ಥಳಗಳಲ್ಲಿ ಸಂಚರಿಸುವಾಗ ಮುಂಜಾಗ್ರತೆ ವಹಿಸುವುದರಿಂದ ಅಪಘಾತಗಳಾಗದಂತೆ ತಡೆಯಬಹುದು. ಈಗಾಗಲೇ ರಸ್ತೆಗಳಲ್ಲಿ ಬ್ಯಾರಿಕೇಡ್ ಇರುವಲ್ಲಿ ರೋಡ್ ಹಂಪ್ಸ್ ಗಳನ್ನು ಮಾಡಿದ ನಂತರ ಅವುಗಳನ್ನು ತೆರವುಗೊಳಿಸಿ ಎಷ್ಟು ಸ್ಥಳಗಳಲ್ಲಿ ಇವುಗಳನ್ನು ಮಾಡಬೇಕು ಎಂಬುದನ್ನು ಗುರುತಿಸಿ ಎಂದು ಅವರು ಸೂಚಿಸಿದರು.

**ಸಂಚರಿಸುವಾಗ ಮುಂಜಾಗ್ರತೆ ಇರಲಿ:ಸಲಹೆ**

ಹೆದ್ದಾರಿಗಳಲ್ಲಿ ಒಳ್ಳೆಯ ಗುಣಮಟ್ಟದ ಕ್ಯಾಮರಾಗಳನ್ನು ಅಳವಡಿಸಬೇಕು. ವಾಹನಗಳ ನಂಬರ ಪ್ಲೇಟ್ ಮಾತ್ರವಲ್ಲದೆ ಅವುಗಳ ವೇಗ ಹಾಗೂ ವಾಹನ ಸವಾರರು ಸೀಟ್ಬೆಲ್ಟ್ ಧರಿಸಿದ್ದಾರೆ ಅಥವಾ ಇಲ್ಲಾ ಎನ್ನುವುದನ್ನು ಕುಳಿತಲ್ಲಿಂದಲೇ ನೋಡುವಷ್ಟು ಉತ್ತಮ ಕ್ಯಾಮರಾಗಳಿದ್ದು, ಅಂತಹವುಗಳನ್ನು ಅಳವಡಿಸಿ. ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ ಅವರು ಮಾತನಾಡಿ, ದೇವಸ್ಥಾನ, ಮದುವೆ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಟ್ರ್ಯಾಕ್ಟರ್ ಮತ್ತು ಟಂಟಂಗಳಲ್ಲಿ ತೆರಳುವುದನ್ನು ನಿಯಂತ್ರಿಸಬೇಕು. ಇತ್ತೀಚಿಗೆ ಮುನಿರಾಬಾದ್ ಬಳಿ ನಡೆದ ಟ್ರ್ಯಾಕ್ಟರ್ ಗಳಲ್ಲಿ ಅಪಘಾತದಲ್ಲಿ 7 ಜನ ಮೃತಪಟ್ಟ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ. ಟ್ರ್ಯಾಕ್ಟರ್ ಗಳು ಮಾನವ ಸಾಗಣೆಗೆ ಇರುವ ವಾಹನವಲ್ಲ. ಸರಕು ಸಾಗಣೆ ವಾಹನ ಎಂಬುದನ್ನು ಜನರಿಗೆ ಮನದಟ್ಟು ಮಾಡಿ. ಈ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ, ಸರಕು ಸಾಗಣೆ ವಾಹನಗಳನ್ನು ಯಾವುದೇ ಕಾರಣಕ್ಕೂ ಮಾನವ ಸಾಗಣೆಗೆ ಬಳಸಬಾರದು. ಇಂತಹ ಪ್ರಕರಣಗಳು ಕಂಡುಬಂದಲ್ಲಿ ಮುಲಾಜಿಲ್ಲದೆ ಪ್ರಕರಣ ದಾಖಲಿಸಿ, ಟ್ರ್ಯಾಕ್ಟರ್ ಜಪ್ತಿ ಮಾಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

**ದೇವಸ್ಥಾನ, ಮದುವೆ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಟ್ರ್ಯಾಕ್ಟರ್ ಮತ್ತು ಟಂಟಂಗಳಲ್ಲಿ ತೆರಳುವುದನ್ನು ನಿಯಂತ್ರಿಸಬೇಕು. ಇತ್ತೀಚಿಗೆ ಮುನಿರಾಬಾದ್ ಬಳಿ ನಡೆದ ಟ್ರ್ಯಾಕ್ಟರ್ ಗಳಲ್ಲಿ ಅಪಘಾತದಲ್ಲಿ 7 ಜನ ಮೃತಪಟ್ಟ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ.**

**-ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ**

ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಪಾರ್ಕಿಂಗ್ ಸೌಲಭ್ಯ, ವೇಗದ ವಾಹನ ಚಾಲನೆ ಬಗ್ಗೆ ಸಂಬಂಧಿಸಿದ ಪ್ರಾಧಿಕಾರದವರು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಸಭೆಯಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರಾದ ಪಿ.ಹೇಮಂತರಾಜ್, ಪ್ರಾದೇಶಿಕ ಸಾರಿಗೆ ಅಧಿಕಾರಿ ದಾಮೋದರ ಕೆ., ಎನ್.ಎಚ್. 50 ಹೊಸಪೇಟೆ ಸೈಟ್ ಇಂಜಿನಿಯರ್ ದಾನೇಶ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಗವಿಸಿದ್ದಪ್ಪ ಹೊಸಮನಿ, ಶಿಕ್ಷಣ ಇಲಾಖೆಯ ಎ ಬಸವರಾಜು ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಜಿಲ್ಲೆಯಲ್ಲಿ ಹಾದು ಹೋಗುವ ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳು ಮತ್ತು ಗ್ರಾಮೀಣ ರಸ್ತೆಗಳು ಉತ್ತಮ ಗುಣಮಟ್ಟದಲ್ಲಿ ನಿರ್ಮಿಸದಿದ್ದರೆ ಭಾರವಾದ ವಾಹನಗಳು ಸಂಚರಿಸಿದಲ್ಲಿ ರಸ್ತೆಗಳು ಹಾಳಾಗಿ ಹೋಗುತ್ತವೆ ಈ ಕುರಿತು ಸಂಬಂಧಿಸಿದ ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು. ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆಗಳ ನಗರ ವ್ಯಾಪ್ತಿಯಲ್ಲಿ ಅಗತ್ಯ ಪ್ರಮಾಣದಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸಬೇಕು**

**-ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ**

**ಅಪಘಾತ ವಲಯದ ಸೂಚನಾ ಫಲಕ ಅಳವಡಿಸಿ**

**ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ದಿ ಅವರು ಮಾತನಾಡಿ, ಇತ್ತೀಚಿಗೆ ನಡೆದ ಟ್ರ್ಯಾಕ್ಟರ್ ಅಪಘಾತವನ್ನು ಆಧಾರವಾಗಿಟ್ಟುಕೊಂಡು ಸೇತುವೆ ರಸ್ತೆ ದುರಸ್ತಿ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಹೊಸಪೇಟೆಯಿಂದ ಸಂಪರ್ಕಗೊಳ್ಳುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಡ್ಡಾಯವಾಗಿ ಅಪಘಾತ ವಲಯದ ಸೂಚನಾ ಫಲಕ ಅಳವಡಿಸಬೇಕು ಕಡ್ಡಾಯವಾಗಿ ಸಿಸಿ ಟಿವಿ ಕ್ಯಾಮೇರಾವನ್ನು ಕೂಡ ಅಳವಡಿಸಬೇಕು.**

